ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೮

ಪಟ್ಟಿ – ೦೫

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ನಾಲ್ಕನೇ ಅಧಿವೇಶನ

ಶುಕ್ರವಾರ, ದಿನಾಂಕ : ೧೩ನೇ ಡಿಸೆಂಬರ್, ೨೦೨೪

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

---

## ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿಯಿರುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೪೯೨ (೫೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹುದ್ದೆಗಳು ಖಾಲಿಯಿರುವುದರಿಂದ ಸಾರ್ವಜನಿಕ ಕಾರ್ಯಗಳಿಗೆ ಮತ್ತು ಆಡಳಿತಾತ್ಮಕವಾಗಿ ಅನಾನುಕೂಲವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಖಾಲಿಯಿರುವ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ಪೂರ್ಣ ವಿವರ ಒದಗಿಸುವುದು)

## ರಾಜ್ಯದ ಬೀಡಿ ಕಾರ್ಮಿಕರ ಬೇಡಿಕೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೪೯೩ (೫೮೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಬೀಡಿ ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಬೀಡಿ ಕಾರ್ಮಿಕರ ಸಮೀಕ್ಷೆ ಮಾಡಲಾಗಿದೆಯೇ ; ಮಾಡದಿದ್ದಲ್ಲಿ, ಸಮೀಕ್ಷೆ ನಡೆಸಲು ಇರುವ ಲೋಪದೋಷಗಳೇನು ; (ವಿವರವಾಗಿ ಮಾಹಿತಿ ನೀಡುವುದು)

(ಇ) ಕಟ್ಟಡ ಕಾರ್ಮಿಕರ ಮಾದರಿಯಲ್ಲಿ ಬೀಡಿ ಕಾರ್ಮಿಕರಿಗೆ ಕಲ್ಯಾಣ ಮಂಡಳಿಯನ್ನು ರಚನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಬೀಡಿ ಕಾರ್ಮಿಕರಿಗೆ ಗುರುತಿನ ಚೀಟಿ ನೀಡದಿರಲು ಕಾರಣವೇನು ; (ವಿವರವಾಗಿ ಮಾಹಿತಿ ಒದಗಿಸುವುದು)

(ಉ) ಸೆಸ್ ಕಾಯ್ದೆಯನ್ನು ಮತ್ತೆ ಮರು ಸ್ಥಾಪನೆ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರವಾಗಿ ಮಾಹಿತಿ ಒದಗಿಸುವುದು)

## ಮೆಟ್ರಿಕ್ ಮತ್ತು ಮೆಟ್ರಿಕ್ ನಂತರದ ಸರ್ಕಾರಿ ವಸತಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೪೯೪ (೫೮೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿರುವ ಮೆಟ್ರಿಕ್ ಮತ್ತು ಮೆಟ್ರಿಕ್ ನಂತರದ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅವುಗಳಲ್ಲಿ ಮೆಟ್ರಿಕ್ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಸ್ವಂತ ಕಟ್ಟಡಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಹಾಗೂ ಮೂಲಭೂತ

ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇಲ್ಲದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಈ) ವಸತಿ ನಿಲಯಗಳಲ್ಲಿರುವ ಮಕ್ಕಳಿಗೆ ಯಾವ-ಯಾವ ರೀತಿಯ ಸೌಲಭ್ಯ ಸವಲತ್ತುಗಳನ್ನು ಒದಗಿಸಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಅಂಗನವಾಡಿಗಳಿಗೆ ಆಹಾರ ಸಾಮಗ್ರಿ ಸರಬರಾಜು ಮಾಡುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೪೯೫ (೫೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಅಂಗನವಾಡಿಗಳಿಗೆ ಆಹಾರ ಸಾಮಗ್ರಿ ಸರಬರಾಜು ಮಾಡುವ ಗುತ್ತಿಗೆಯನ್ನು ಯಾರಿಗೆ ಮತ್ತು ಎಷ್ಟು ವರ್ಷಕ್ಕೆ ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ನೀಡಲಾದ ಗುತ್ತಿಗೆಯಲ್ಲಿ ಯಾವ ಯಾವ ಆಹಾರ ಸಾಮಾಗ್ರಿಗಳನ್ನು ಒದಗಿಸಲು ಗುತ್ತಿಗೆ ನೀಡಲಾಗಿದೆ ; (ಆಹಾರ ಸಾಮಾಗ್ರಿಗಳ ಪೂರ್ಣ ವಿವರ ನೀಡುವುದು)

(ಇ) ಗುತ್ತಿಗೆ ನೀಡುವಾಗ ಸ್ಥಳೀಯ ಗುತ್ತಿಗೆದಾರರನ್ನು ಕಡೆಗಣನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸ್ಥಳೀಯ ಗುತ್ತಿಗೆದಾರರನ್ನು ಪರಿಗಣಿಸಲು ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ನಿಗಮಗಳ ಬಗ್ಗೆ

**ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೬ (೫೯೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಯಾವುವು ; ಸದರಿ ನಿಗಮಗಳಿಂದ ಸರ್ಕಾರವು ಸಾರ್ವಜನಿಕರಿಗೆ ನೀಡುತ್ತಿರುವ ಸೇವೆಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸದರಿ ನಿಗಮಗಳಿಗೆ ಕಳೆದ ೫ ವರ್ಷಗಳಿಂದ ಇಲ್ಲಿಯವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು, ಅನುದಾನವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಸದರಿ ಇಲಾಖೆಯ ನಿಗಮದಡಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕ್ರಿಯಾಯೋಜನೆಯೆಷ್ಟು ; ಸರ್ಕಾರದ ಹಂತದಲ್ಲಿ ಮಂಜೂರಾದರೂ ಕೂಡ ವಿವಿಧ ಯೋಜನೆಗಳು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕೆ ಪೂರ್ಣಗೊಂಡಿರುವುದಿಲ್ಲ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಸದರಿ ನಿಗಮಗಳಲ್ಲಿ ಫಲಾನುಭವಿಗಳ ಆಯ್ಕೆಯನ್ನು ಯಾವ ರೀತಿ ಮಾಡಲಾಗುತ್ತದೆ; ಫಲಾನುಭವಿಗಳ ಆಯ್ಕೆಯನ್ನು ಹೆಚ್ಚು ಮಾಡಲು ಸರ್ಕಾರ ಚಿಂತಿಸಿದೆಯೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನವನ್ನು ಬದಲಾವಣೆ ಮಾಡಿರುವ ಆದೇಶದ ಬಗ್ಗೆ

**ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೭ (೬೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, ೧೯೯೩ರ ಪ್ರಕರಣ ೦೪ (೧) ರಂತೆ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ಇವರು ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು, ನೀಲಗೊಂಡನಹಳ್ಳಿ ಗ್ರಾಮ ಪಂಚಾಯತಿ ಪ್ರದೇಶವನ್ನು (ಗ್ರಾಮ ಮತ್ತು ಗ್ರಾಮಗಳ ಗುಂಪನ್ನು ಒಳಗೊಂಡಂತೆ) ಮೇಲ್ಕಾಣಿಸಿದ ಅಧಿನಿಯಮದ ಉದ್ದೇಶಕ್ಕಾಗಿ ಘೋಷಿಸಿ, ಕೇಂದ್ರ ಸ್ಥಾನವನ್ನು ನಿರ್ದಿಷ್ಟಪಡಿಸಿ ಹೊರಡಿಸಿದ ಪ್ರಕಟಣೆಯ ರಾಜ್ಯಪತ್ರದ ವಿವರ ನೀಡುವುದು ;

(ಆ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, ೧೯೯೩ರ ಪ್ರಕರಣ ೦೪ (೨) (ಎ) (ಬಿ) (ಸಿ) (ಡಿ) ರಂತೆ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರು ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು, ಅಧಿಸೂಚಿತ ನೀಲಗೊಂಡನಹಳ್ಳಿ ಗ್ರಾಮ ಪಂಚಾಯತಿ ಪ್ರದೇಶದಲ್ಲಿ (ಗ್ರಾಮ ಮತ್ತು ಗ್ರಾಮಗಳ ಗುಂಪನ್ನು ಒಳಗೊಂಡಂತೆ) ಯಾವುದೇ ಗ್ರಾಮವನ್ನು ಹೆಚ್ಚಿಸಿರುವ/ಕಡಿಮೆ ಮಾಡಿರುವ, ಯಾವುದೇ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನವನ್ನು ಬದಲಾವಣೆ ಮಾಡಿರುವ, ಪಂಚಾಯತಿ ಪ್ರದೇಶದ ಹೆಸರನ್ನು ಬದಲಾಯಿಸಿ ಹೊರಡಿಸಲಾಗಿದೆಯೇ ? (ಪ್ರಕಟಣೆಯ ರಾಜ್ಯಪತ್ರದ ವಿವರ ನೀಡುವುದು)

## ಬಿತ್ತನೆ ಬೀಜಗಳನ್ನು ಒದಗಿಸುವ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೮ (೬೯೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರೈತರು ಪ್ರಸ್ತುತ ವರ್ಷದಲ್ಲಿ ಯಾವ ಯಾವ ಬೆಳೆಗಳನ್ನು ಬೆಳೆಯಲು ಹೆಚ್ಚಿನ ಆಸಕ್ತಿಯನ್ನು ಹೊಂದಿದ್ದಾರೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರೈತರು ಬೆಳೆಯಬಹುದಾದ ಬೆಳೆಗಳ ಬಿತ್ತನೆ ಬೀಜಗಳನ್ನು ಕಡಿಮೆ ದರದಲ್ಲಿ ಒದಗಿಸುವುದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಬಿತ್ತನೆ ಬೀಜಗಳನ್ನು ಬೆಳೆಯುವಲ್ಲಿ ವ್ಯತ್ಯಾಸವಾಗಿರುವುದನ್ನು ಸರ್ಕಾರ ಮನಗೊಂಡಿದೆಯೇ ;

(ಈ) ಹಾಗಿದ್ದಲ್ಲಿ ಬಿತ್ತನೆ ಬೆಳೆಗಳನ್ನು ಬೆಳೆಯುವಲ್ಲಿ ಸ್ಥಿರತೆಯನ್ನು ಕಾಪಾಡಿ ಕಡಿಮೆ ಬೆಲೆಗೆ ಬಿತ್ತನೆ ಬೀಜ ದೊರೆಯುವಂತೆ ಮಾಡಲು ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿದೆ ?

## ಗ್ರಾಮ ಪಂಚಾಯಿತಿಗಳ ಆದಾಯದ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೯ (೬೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ವಿವಿಧ ಮೂಲಗಳಿಂದ ಹರಿದು ಬರುವ ಆದಾಯವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಪೈಕಿ ತೆರಿಗೆ ವ್ಯಾಪ್ತಿಗೆ ಒಳಪಡುವ ಕೃಷಿಯೇತರ ಆದಾಯ ಮೂಲಗಳನ್ನು ಸರ್ಕಾರ ಗುರುತಿಸಿದೆಯೇ ;

(ಇ) ನಿರೀಕ್ಷಿತ ತೆರಿಗೆ ಸರ್ಕಾರಕ್ಕೆ ವಸೂಲಾಗದಿರಲು ಕಾರಣಗಳೇನು ; ತೆರಿಗೆ ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಾಸ್ತ್ರೀಯ ಭಾಷೆ ಸ್ಥಾನಮಾನ ಮತ್ತು ಅಭಿವೃದ್ಧಿಯ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೦ (೬೯೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನ ದೊರೆತ ಬಳಿಕ ಸ್ಥಾಪಿಸಲಾದ ಶಾಸ್ತ್ರೀಯ ಅಧ್ಯಯನ ಕೇಂದ್ರವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನಿರ್ಲಕ್ಷಿಸುತ್ತಿವೆಯೇ ;

(ಆ) ನಿರ್ಲಕ್ಷಿಸದಿದ್ದಲ್ಲಿ ಈವರೆಗೆ ಶಾಸ್ತ್ರೀಯ ಅಧ್ಯಯನ ಕೇಂದ್ರಕ್ಕೆ ಸ್ವಂತ ನೆಲೆ ಒದಗಿಸದಿರಲು ಕಾರಣಗಳೇನು ;

(ಇ) ಭಾಷೆಯ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅವಶ್ಯವಿರುವ ಅನುದಾನಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಲೆದಾಟ ನಡೆದಿರುವುದು ನಿಜವೇ ; ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರದ ಕ್ರಮವೇನು ?

## ರಾಜ್ಯದಲ್ಲಿ ಪಿ.ಎಂ. ಕೇರ್ಸ್ ಯೋಜನೆಯ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೧ (೬೯೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಿ.ಎಂ. ಕೇರ್ಸ್ ಯೋಜನೆಯಡಿ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; (ಕಳೆದ ಮೂರು ವರ್ಷದ ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಎಷ್ಟು ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಹಾಗೂ ಅನುಮೋದನೆಗಾಗಿ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಇದಕ್ಕೆ ಕಾರಣಗಳೇನು ;

(ಇ) ಅರ್ಹರಿಗೆ ಯೋಜನೆಯ ಲಾಭ ದೊರೆಯುವಂತಾಗಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರ ವೇತನದ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೫೦೨ (೬೪೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರ ವೇತನ ಧೃಢೀಕರಣವನ್ನು ಸದರಿಯವರಿಗೆ ತಲುಪುತ್ತಿರುವ ಬಗ್ಗೆ ಸರ್ಕಾರ ಯಾವ ರೀತಿಯಲ್ಲಿ ಧೃಢಪಡಿಸಿಕೊಳ್ಳುತ್ತಿದೆ ; (ವಿವರ ಒದಗಿಸುವುದು)

(ಆ) ಬೀದರ್ ಜಿಲ್ಲೆಯಲ್ಲಿ ಸಹಕಾರಿ ವ್ಯವಸ್ಥೆಯಲ್ಲಿ ವೇತನದ ಬಗ್ಗೆ ಧೃಢೀಕರಿಸಿಕೊಳ್ಳುತ್ತಿರುವ ವ್ಯವಸ್ಥೆ ಯಾವ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ; (ವಿವರ ಒದಗಿಸುವುದು)

(ಇ) ಸದರಿ ಜಿಲ್ಲೆಯಲ್ಲಿ ಧೃಢೀಕರಿಸುತ್ತಿರುವ ವ್ಯವಸ್ಥೆಯನ್ನು ರಾಜ್ಯದಲ್ಲಿ ಸರ್ಕಾರ ಮತ್ತು ಖಾಸಗಿ ವಲಯಗಳಲ್ಲಿ ಕಡ್ಡಾಯವಾಗಿ ಜಾರಿಗೆ ತರುವ ಬಗ್ಗೆ ಅಗತ್ಯವಿರುವ ನೀತಿ ನಿಯಮಗಳನ್ನು ಸರ್ಕಾರ ರಚಿಸುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನೀತಿ ನಿಯಮಗಳನ್ನು ರಚಿಸಲಾಗುವುದು ? (ವಿವರ ಒದಗಿಸುವುದು)

## ಸಕಾಲಕ್ಕೆ ಗೃಹಲಕ್ಷ್ಮಿ ಯೋಜನೆ ಹಣ ಫಲಾನುಭವಿಗಳಿಗೆ ದೊರೆಯದ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೫೦೩ (೬೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಿಕೊಂಡ ಮಹಿಳೆಯರ ಸಂಖ್ಯೆ ಎಷ್ಟು ; ಎಷ್ಟು ಜನರಿಗೆ ಹಣ ನೀಡಲಾಗುತ್ತಿದೆ;

ಯೋಜನೆ ಜಾರಿಯಾದ ದಿನದಿಂದ ಇಲ್ಲಿಯವರೆಗೆ ಎಷ್ಟು ತಿಂಗಳು ಹಣ ನೀಡಲಾಗಿದೆ ; (ಜಿಲ್ಲಾವಾರು, ಮಾಸಿಕವಾರು, ದಿನಾಂಕವಾರು ವಿವರ ನೀಡುವುದು)

(ಆ) ಹಲವು ಖಾತೆಗಳಿಗೆ ಹಣ ಜಮೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಖಾತೆಗಳಿಗೆ ಹಣ ಜಮೆಯಾಗಿರುವುದಿಲ್ಲ ವಿವರ ನೀಡುವುದು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಇ) ಇತ್ತೀಚೆಗೆ ಹಲವು ಬಿಪಿಎಲ್ ಕಾರ್ಡ್ ರದ್ದಾಗಿದ್ದು ಸದರಿ ಕಾರ್ಡ್ ಹೊಂದಿರುವ ಫಲಾನುಭವಿಗಳ ಗೃಹಲಕ್ಷ್ಮಿ ಅನುದಾನ ಸಹ ರದ್ದಾಗುವುದೇ ;

(ಈ) ಸದರಿ ಯೋಜನೆ ಜಾರಿಯಾದಾಗಿನಿಂದ ಇಲ್ಲಿಯವರೆಗೆ ಎಷ್ಟು ಜನರನ್ನು ಅನರ್ಹರು ಎಂದು ಕೈಬಿಡಲಾಗಿದೆ ; ಯಾವ ಆಧಾರದ ಮೇಲೆ ಅವರನ್ನು ಅನರ್ಹರು ಎಂದು ಕೈಬಿಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಬಯಲು ಸೀಮೆ ಪ್ರದೇಶಾಭಿವೃದ್ಧಿ ನಿಧಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೫೦೪ (೬೫೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಬರುವ ತಾಲ್ಲೂಕುಗಳ ಸಂಖ್ಯೆ ಮತ್ತು ವಿಧಾನಸಭಾ ಕ್ಷೇತ್ರಗಳ ಸಂಖ್ಯೆ ಎಷ್ಟು ; ಕಳೆದ ಐದು ವರ್ಷಗಳಲ್ಲಿ ಮಂಡಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ ಎಷ್ಟು ಮೊತ್ತದ ಕಾಮಗಾರಿ ಕೈಗೊಳ್ಳಲು

ಕಾರ್ಯಾದೇಶ ನೀಡಲಾಗಿದೆ ; (ವರ್ಷವಾರು ಮತ್ತು ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು) ಕಾಮಗಾರಿಗಳಿಗೆ ಪಾವತಿ ಮಾಡಲಾದ ಮೊತ್ತವೆಷ್ಟು ; (ವರ್ಷವಾರು ಮತ್ತು ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಬಿಡುಗಡೆಯಾದ ಅನುದಾನಕ್ಕಿಂತ ಹೆಚ್ಚಿನ ಪ್ರಮಾಣದ ಕಾಮಗಾರಿಗಳಿಗೆ ಕಾರ್ಯಾದೇಶ ನೀಡಿ, ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಹೆಚ್ಚುವರಿಯಾಗಿ ಕೈಗೊಂಡ ಕಾಮಗಾರಿಯ ಪ್ರಮಾಣವೆಷ್ಟು ;

(ಈ) ಕಾರ್ಯಾದೇಶ ನೀಡಿದ ಕಾರಣ ಗುತ್ತಿಗೆದಾರರು ಕಾಮಗಾರಿ ಕೈಗೊಂಡು ಬಿಲ್ ಪಾವತಿಯಾಗದೆ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಮಗಾರಿ ಮಾಡಿದ ಗುತ್ತಿಗೆದಾರರಿಗೆ ಹಣ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

**ಅನರ್ಹರು ಪಡೆದ ಕಾರ್ಮಿಕ ಕಾರ್ಡ್‌ಗಳನ್ನು ರದ್ದುಪಡಿಸುವ ಬಗ್ಗೆ**

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೫೦೫ (೬೫೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರ್ಮಿಕ ಇಲಾಖೆಯಲ್ಲಿ ಕಳೆದ ಐದು ವರ್ಷದಲ್ಲಿ ನೋಂದಾಯಿಸಿಕೊಂಡ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಆ) ಕಾರ್ಮಿಕರ ಇಲಾಖೆಯಲ್ಲಿ ಕಾರ್ಮಿಕರ ಕಾರ್ಡ್‌ಗಾಗಿ ನೋಂದಾಯಿಸಿಕೊಳ್ಳಲು ಬೇಕಾಗಿರುವ ಅಗತ್ಯ ದಾಖಲೆಗಳು ಯಾವುವು ; ನೋಂದಣಿ ಸಮಯದಲ್ಲಿ ಅವುಗಳನ್ನು ಪರಿಶೀಲಿಸುವ ಅಧಿಕಾರಿಗಳು ಯಾರು ಅವರ ಜವಾಬ್ದಾರಿಗಳು ಏನು ಹಾಗೂ ಕಾರ್ಮಿಕ ಕಾರ್ಡ್‌ನಿಂದ ಕಾರ್ಮಿಕರಿಗೆ ಸಿಗುವ ಸೌಲಭ್ಯಗಳೇನು ;

(ಇ) ರಾಜ್ಯದಲ್ಲಿ ಕಾರ್ಮಿಕ ಕಾರ್ಡ್ ಪಡೆದಿರುವ ಅನರ್ಹರ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಕಾರ್ಡ್ ಪತ್ತೆ ಹಚ್ಚಲಾಗಿದೆ ಮತ್ತು ಎಷ್ಟು ಕಾರ್ಡ್ ರದ್ದುಗೊಳಿಸಲಾಗಿದೆ ಹಾಗೂ ಎಲ್ಲಾ ಅನರ್ಹರು ಕಾರ್ಡ್ ರದ್ದುಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅನರ್ಹರು ಕಾರ್ಡ್ ಪಡೆದ ಪರಿಣಾಮ ಸರ್ಕಾರಕ್ಕೆ ಉಂಟಾದ ನಷ್ಟವೆಷ್ಟು ; ಸದರಿ ನಷ್ಟದ ಮೊತ್ತವನ್ನು ಅನರ್ಹರಿಂದ ವಸೂಲಿ ಮಾಡಲಾಗುವುದೇ ;

(ಉ) ಅನರ್ಹರಿಗೆ ಕಾರ್ಡ್ ವಿತರಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; ಅರ್ಹರಿಗೆ ಮಾತ್ರವೆ ಕಾರ್ಡ್ ಸಿಗುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮ ಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ವಿತರಣೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ ) :-**

೫೦೬ (೬೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಠಾಣಾ ಎಂದರೇನು (ಸುತ್ತೋಲೆ ಅಥವಾ ಆದೇಶದ ಪ್ರತಿಯನ್ನು ನೀಡುವುದು) ಹಾಗೂ ಗ್ರಾಮ ಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ವಿತರಣೆಗೆ ಅನುಸರಿಸುವ ಪ್ರಕ್ರಿಯೆ ಏನು ;

(ಆ) ಗ್ರಾಮ ಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ಇ-ಖಾತಾ ನೀಡಲು ನಮೂನೆ-9ರ ವಹಿಯನ್ನು ಮಾಲೀಕತ್ವ ದೃಢೀಕರಣಕ್ಕೆ ಪರಿಗಣಿಸಲಾಗುತ್ತದೆಯೇ ; ಇಲ್ಲದೆ ಇದ್ದಲ್ಲಿ, ಯಾವ ದಾಖಾಲೆಗಳನ್ನು ಪರಿಗಣಿಸಲಾಗುತ್ತದೆ ;

(ಇ) ನಮೂನೆ-9ರ ವಹಿಯು ಕಳೆದು ಹೋದ ಅಥವಾ ನಾಶವಾದ ಸಂದರ್ಭದಲ್ಲಿ ಯಾವ ರೀತಿಯಲ್ಲಿ ಮಾಲೀಕತ್ವ ಮತ್ತು ಅಳತೆಯನ್ನು ದೃಢೀಕರಿಸಿಕೊಳ್ಳಲಾಗುತ್ತದೆ ;

(ಈ) ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ಸ್ವತ್ತುಗಳ ಗಡಿ ಮತ್ತು ಚಕ್ಕುಬಂದಿಯನ್ನು ಗುರುತಿಸಲು ಅನುಸರಿಸುವ ವಿಧಾನ ಯಾವುದು ?

## ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಗೌರವಧನ ಹೆಚ್ಚಿಸಿ ಇತರೆ ಸೌಲಭ್ಯ ನೀಡುವ ಕುರಿತು

**ಡಾ. ಧನಂಜಯ ಸರ್ಜಿ ( ಪದವೀಧರರ ಕ್ಷೇತ್ರ) :–**

೫೦೭ (೬೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನ ಎಷ್ಟು ;

(ಆ) ಕೇರಳ ರಾಜ್ಯದ ಮಾದರಿಯಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಗೌರವಧನ ಜಾರಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಾಡಲಾಗುವುದು ;

(ಇ) ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪಿಂಚಣಿ, ಆರೋಗ್ಯ ವಿಮೆ ಹಾಗೂ ಬಸ್ ಪಾಸ್ ಸೌಲಭ್ಯಗಳು ನೀಡುವ ಕುರಿತು ಸರ್ಕಾರದ ನಿಲುವೇನು ?

## ಪದವಿ ಮತ್ತು ಸ್ನಾತಕೋತ್ತರ ಪದವಿ ವೇತನ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦೮ (೭೦೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ 3 ವರ್ಷಗಳಿಂದ ಹಿಂದುಳಿದ ವರ್ಗದ ಕಲ್ಯಾಣ ಇಲಾಖೆಯ ವತಿಯಿಂದ ಇಲ್ಲಿಯವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವವರಿಗೆ ಎಷ್ಟು ವಿದ್ಯಾರ್ಥಿ ವೇತನವನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಆ) ವಿದ್ಯಾರ್ಥಿ ವೇತನಕ್ಕಾಗಿ ಎಷ್ಟು ಅರ್ಜಿಗಳು ರಾಜ್ಯದಲ್ಲಿ ಸಂಗ್ರಹವಾಗಿದೆ ; ವಿದ್ಯಾರ್ಥಿ ವೇತನ ನೀಡಬೇಕಾದರೆ ಸರ್ಕಾರ ನಿಗಧಿಪಡಿಸಿರುವ ಮಾನದಂಡವೇನು ;

(ಇ) ೨೦೨೩-೨೪ ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಒಂದು ವರ್ಷವಾದರೂ ವಿದ್ಯಾರ್ಥಿ ವೇತನ ನೀಡದಿರುವುದರಿಂದ, ವಿದ್ಯಾರ್ಥಿಗಳಿಗೆ ಮುಂದಿನ ವಿದ್ಯಾಬ್ಯಾಸಕ್ಕೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ?

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿಗಳ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೯ (೭೦೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳೇನು ; (ವಿವರ ನೀಡುವುದು)

(ಇ) ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವ ಆಹಾರ ಪದಾರ್ಥಗಳ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿವರಗಳನ್ನು ನೀಡುವುದು ;

(ಈ) ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕೃಷಿ ವಿಶ್ವವಿದ್ಯಾಲಯಗಳ ಬೋಧಕರ ಹಾಗೂ ಬೋಧಕೇತರರ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೧೦ (೭೦೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ;

(ಆ) ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರ ಹಾಗೂ ಬೋಧಕತೇರರ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ಭಾಷಾವಾರು, ಪ್ರತಿಯೊಂದು ಕೃಷಿ ವಿಶ್ವವಿದ್ಯಾಲಯವಾರು ಮಾಹಿತಿ ಒದಗಿಸುವುದು)

(ಇ) ಸದರಿ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆಯೇ ? (ವಿಶ್ವವಿದ್ಯಾಲಯವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

## ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಸ್ವತ್ತುಗಳನ್ನು ಪಂಚತಂತ್ರ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೧೧ (೭೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರುವ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯುಯಲ್ ಸಮೀಕ್ಷೆ ತ್ವರಿತವಾಗಿ ಮಾಡಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ಆದೇಶಿಸಲಾಗಿದೆಯೇ ;

(ಆ) ಸದರಿ ಆದೇಶದ ನಂತರ ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾದ ಆಸ್ತಿಗಳ ಸಂಖ್ಯೆ ಎಷ್ಟು ;

(ಇ) ಬೆಂಗಳೂರು ನಗರ ಜಿಲ್ಲೆಯ ಹಲವು ಗ್ರಾಮ ಪಂಚಾಯಿತಿಗಳು ಹಸಿರು ಪಟ್ಟಿ ವಲಯದಲ್ಲಿರುವ ಕಾರಣ ನೀಡಿ ಹಲವು ವರ್ಷಗಳ ಹಿಂದೆ ಕಟ್ಟಡ/ನಿವೇಶನ ನಿರ್ಮಿಸಿದ ಸರ್ಕಾರದ ಬೀದಿ ದೀಪ, ರಸ್ತೆ, ಕುಡಿಯುವ ನೀರು ಇನ್ನಿತರ ಎಲ್ಲಾ ಸೌಲಭ್ಯ ಪಡೆಯುತ್ತಿದ್ದರೂ, ಪಂಚತಂತ್ರ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ಸೇರ್ಪಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸದರಿ ನಿವೇಶನ/ಕಟ್ಟಡಗಳನ್ನು ತೆರಿಗೆ ನಿರ್ಧರಣೆ ವ್ಯಾಪ್ತಿಗೆ ಸೇರ್ಪಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಆಹಾರದ ಗುಣಮಟ್ಟದ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೧೨ (೭೦೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಸದರಿ ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಮಾಸಿಕವಾಗಿ ಪ್ರತಿ ವಿದ್ಯಾರ್ಥಿಗೆ ಊಟಕ್ಕಾಗಿ ಸರ್ಕಾರ ಮಾಡುವ ವೆಚ್ಚವೆಷ್ಟು ;

(ಇ) ಹಲವು ವಸತಿ ನಿಲಯಗಳಲ್ಲಿ ಕಳಪೆ ಮತ್ತು ಉಪಯೋಗಿಸಲಾಗದ ಸ್ಥಿತಿಯಲ್ಲಿರುವ ಆಹಾರವನ್ನು ವಿದ್ಯಾರ್ಥಿಗಳಿಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ರೀತಿಯ ಆಹಾರ ಪದಾರ್ಥಗಳನ್ನು ಪೂರೈಕೆ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಮಕ್ಕಳಿಗೆ ಉತ್ತಮ ಗುಣಮಟ್ಟದ ಆಹಾರ ಪೂರೈಕೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಕಟ್ಟಡ ಕಾರ್ಮಿಕರ ನಿಧಿಯ ಹಣ ದುರುಪಯೋಗವಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೩ (೬೩೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರ್ಮಿಕ ಇಲಾಖೆಯು ಕಳೆದ ೦೩ ವರ್ಷಗಳಿಂದ ಕಟ್ಟಡ ಕಾರ್ಮಿಕ ನಿಧಿಗೆ ನೀಡಿರುವ ಹಣವೆಷ್ಟು ; ಪ್ರಸ್ತುತ ಕಟ್ಟಡ ಕಾರ್ಮಿಕರ ನಿಧಿಯಲ್ಲಿ ಎಷ್ಟು ಹಣ ಲಭ್ಯವಿದೆ ;

(ಆ) ಕಟ್ಟಡ ಕಾರ್ಮಿಕರ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ನೀತಿ ನಿಯಮಗಳೇನು ; ಕಾರ್ಮಿಕರಲ್ಲದವರೂ ಸಹ ಫಲಾನುಭವಿಗಳಾಗಿರುವುದು ನಿಜವೇ ; ಕಟ್ಟಡ ಕಾರ್ಮಿಕರಲ್ಲದ ವ್ಯಕ್ತಿಗಳಿಗೆ ಫಲಾನುಭವಿಗಳಾಗಿ ಆಯ್ಕೆ ಮಾಡಿಕೊಳ್ಳಲಾಗಿದೆಯೇ ; ಕಾರ್ಮಿಕರ ನಿಧಿಯು ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಟ್ಟಡ ಕಾರ್ಮಿಕರು ಬಹಳಷ್ಟು ಸಂಖ್ಯೆಯಲ್ಲಿ ಅನ್ಯರಾಜ್ಯದ ಜನರೇ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇವರನ್ನು ಸಹ ಫಲಾನುಭವಿಗಳಾಗಿ ಆಯ್ಕೆ ಮಾಡಿಕೊಳ್ಳಲು ಅವಕಾಶವಿದೆಯೇ ?

## ಪ್ರಸ್ತುತ ಲಭ್ಯವಿರುವ ಭಿಕ್ಷುಕರ ಬಾಕಿ ಸೆಸ್ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೪ (೬೩೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಸ್ಥಳೀಯ ಸಂಸ್ಥೆಗಳಿಂದ ಕಳೆದ ೦೫ ವರ್ಷಗಳಲ್ಲಿ ಎಷ್ಟು ಭಿಕ್ಷುಕರ ಉಪಕರವನ್ನು ಸಂಗ್ರಹಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಆ) ಈ ಭಿಕ್ಷುಕರ ಉಪಕರವನ್ನು ಎಲ್ಲಾ ನಗರ ಮತ್ತು ಗ್ರಾಮಾಂತರ ಸ್ಥಳೀಯ ಸಂಸ್ಥೆಗಳು ಸಮಾಜ ಕಲ್ಯಾಣ ಇಲಾಖೆಗೆ ವರ್ಗಾಯಿಸಿರುತ್ತದೆಯೇ ; ಹಾಗಿದ್ದಲ್ಲಿ, ಜಮೆಯಾದ ಮತ್ತು ಬಾಕಿ ಜಮೆ ಮಾಡಲು ಉಳಿಕೆಯಿರುವ ಮೊತ್ತವೆಷ್ಟು ;

(ಇ) ಈ ರೀತಿ ಸಂಗ್ರಹಿಸಲಾದ ಭಿಕ್ಷುಕರ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಪ್ರಸ್ತುತ ಲಭ್ಯವಿರುವ ಭಿಕ್ಷುಕರ ಬಾಕಿ ಉಪಕರದ ಮೊತ್ತವೆಷ್ಟು ?

## ರಾಜ್ಯದಲ್ಲಿ ಬಾಲ್ಯ ವಿವಾಹ ಪ್ರಕರಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೫ (೬೩೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷದ ಅವಧಿಯಲ್ಲಿ ಎಷ್ಟು ಬಾಲ್ಯ ವಿವಾಹಗಳ ಪ್ರಕರಣಗಳು ನಡೆದಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೧೮ ವರ್ಷದೊಳಗಿನ ಮಕ್ಕಳ ರಕ್ಷಣೆಗೆ ಇರುವ ಕಾನೂನುಗಳು ಯಾವುವು ; ಮಕ್ಕಳ ಮೇಲೆ ಆಗುತ್ತಿರುವ ದೌರ್ಜನ್ಯ ಹಾಗೂ ಬಾಲ್ಯ ವಿವಾಹಗಳನ್ನು ತಡೆಯಲು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಹಾಗೂ ಈ ಕಾರ್ಯಕ್ರಮಗಳು ಸಾರ್ವಜನಿಕರಿಗೆ ತಲುಪುತ್ತಿದೆಯೇ ಎಂಬುದನ್ನು ಗಮನಿಸುತ್ತಿರುವ ಅಧಿಕಾರಿಗಳು ಯಾರ್‍ಯಾರು ;

(ಇ) ಮಕ್ಕಳ ರಕ್ಷಣೆಗೆ ಇರುವಂತ ಕಾನೂನಿನ ಅರಿವನ್ನು ಪ್ರೌಢ ಶಿಕ್ಷಣದಿಂದಲೇ ಮಕ್ಕಳಿಗೆ ಪಾಠಗಳ ಮೂಲಕ ತಿಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಈ) ಪ್ರಸ್ತುತ ಇರುವ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಯಡಿಯಲ್ಲಿ ದಾಖಲಾಗಿರುವ ಪ್ರಕರಣಗಳು ಎಷ್ಟು ; ಇದರಲ್ಲಿ ಇತ್ಯರ್ಥವಾಗದೇ ಬಾಕಿ ಇರುವ ಪ್ರಕರಣಗಳು ಎಷ್ಟು ; ಇಂತಹ ಪ್ರಕರಣಗಳನ್ನು ತ್ವರಿತಗತಿಯಲ್ಲಿ ನಡೆಯುವಂತೆ ನೋಡಿಕೊಳ್ಳಲು ಯಾವ ಅಧಿಕಾರಿಗಳಿಗೆ ವಹಿಸಲಾಗಿದೆ ;

(ಉ) ಬಾಲ್ಯ ವಿವಾಹ ಮತ್ತು ದೌರ್ಜನ್ಯಗಳನ್ನು ತಡೆಯಲು ಹಾಗೂ ಕ್ರಮ ತೆಗೆದುಕೊಳ್ಳಲು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳನ್ನು ಒಳಗೊಂಡಂತೆ ಬೇರೆ ಇಲಾಖೆಯ ಅಧಿಕಾರಿಗಳನ್ನು ನೇಮಿಸಲಾಗಿದೆಯೇ ಹಾಗೂ ಅವರ ಕ್ರಮ ಕೈಗೊಳ್ಳಲು ಅಧಿಕಾರ ಇದೆಯೇ ?

## ಕೋಲಾರ ಜಿಲ್ಲೆಯಲ್ಲಿ ನಕಲಿ ಗೊಬ್ಬರ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೬ (೬೩೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆಯಲ್ಲಿ ನಕಲಿ ಗೊಬ್ಬರ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ; ಕಳೆದ ೦೩ ವರ್ಷದಿಂದ ಇಲ್ಲಿಯವರೆಗೂ ಇಲಾಖೆಗೆ ರೈತರಿಂದ ಎಷ್ಟು ದೂರುಗಳು ಬಂದಿದೆ ;

(ಆ) ನಕಲಿ ಗೊಬ್ಬರ ಮಾರಾಟ ಮಾಡಿದ ಪರಿಣಾಮ ಟೊಮ್ಯಾಟೊ ಬೆಳೆಯನ್ನು ಒಳಗೊಂಡಂತೆ ಹಲವಾರು ಬೆಳೆಗಳು ಹಾನಿಯಾಗಿರುವುದರಿಂದ ರೈತರಿಗೆ ಲಕ್ಷಾಂತರ ರೂ. ನಷ್ಟವುಂಟಾಗಿದ್ದು, ಇದಕ್ಕೆ ಪರಿಹಾರ ನೀಡಲು ಸರ್ಕಾರ ಯಾವುದಾದರೂ ಕ್ರಮ ತೆಗೆದುಕೊಂಡಿದೆಯೇ ಹಾಗೂ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ಎಷ್ಟು ಅಂಗಡಿ ಮೇಲೆ ದಾಳಿ ಮಾಡಿ ಕ್ರಮ ಕೈಗೊಳ್ಳಲಾಗಿದೆ ;

(ಇ) ರೈತರೊಬ್ಬರು ನೀಡಿದ ದೂರಿನನ್ವಯ ಬೆಂಗಳೂರಿನ ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಕ್ಕೆ ಕಳುಹಿಸಿಕೊಟ್ಟಿದ್ದು, ವರದಿಯಲ್ಲಿ ನಕಲಿ ಗೊಬ್ಬರವೆಂಬುದು ಸಾಭೀತಾಗಿದ್ದರೂ ಇದುವರೆಗೂ ಅಧಿಕಾರಿಗಳು ಕ್ರಮಕೈಗೊಳ್ಳದಿರಲು ಕಾರಣವೇನು ?

## ಸ್ವಚ್ಛ ಭಾರತ್ ಯೋಜನೆಯಡಿ ಕೈಗೊಂಡಿರುವ ಕಾರ್ಯಗಳ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೭ (೬೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ವಚ್ಛ ಭಾರತ ಅಭಿಯಾನದಡಿ ಯೋಜನೆಯಡಿಯಲ್ಲಿ ಕಳೆದ ೦೫ ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ನಿರ್ಮಾಣಗೊಂಡಿರುವ ಶೌಚಗೃಹಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಹಾಗೂ ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು ; ಇದರಲ್ಲಿ ಎಷ್ಟು ಬಳಕೆಯಾಗಿದೆ ; ಎಷ್ಟು ಹಣ ಉಳಿಕೆಯಾಗಿದೆ ಹಾಗೂ ಅವಶ್ಯಕತೆಗೆ ತಕ್ಕಂತೆ ಕೇಂದ್ರ ಸರ್ಕಾರದಿಂದ ಅನುದಾನ ಬಂದಿದೆಯೇ ;

(ಆ) ಗ್ರಾಮೀಣ ಭಾಗಗಳಲ್ಲಿ ಇನ್ನೂ ಜನರು ಮಲ–ಮೂತ್ರ ವಿಸರ್ಜನೆಗೆ ಬಯಲನ್ನೇ ಆಶ್ರಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಹಾಗೂ ಈ ಕಾರ್ಯಕ್ರಮದ ಬಗ್ಗೆ ಅವರಿಗೆ ಅರಿವನ್ನು ಮೂಡಿಸಲು ಯಾವ ರೀತಿಯಲ್ಲಿ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರಕಾರ ಕಟ್ಟಿಕೊಟ್ಟಿರುವ ಆಶ್ರಯ ಮನೆಗಳಿಗೆ ಶೌಚಾಲಯಗಳೇ ಇಲ್ಲದೆ ಟಾಯ್ಲೆಟ್ ಅನ್ನು ಫಲಾನುಭವಿಗಳೆ ನಿರ್ಮಿಸಿಕೊಳ್ಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಲು ಬೇಡಿಕೆ ಇರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೮ (೬೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಇದೆ ;

(ಆ) ಕೃಷಿ ಇಲಾಖೆಯಲ್ಲಿ ಲಭ್ಯವಿರುವ ವಿವಿಧ ವೃಂದದ ಹುದ್ದೆಗಳಿಗೆ ಬಿ.ಟೆಕ್ (ಕೃಷಿ) ಪದವಿ ಪಡೆದ ಅಭ್ಯರ್ಥಿಗಳನ್ನು ಪರಿಗಣಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಬಿ.ಟೆಕ್ (ಕೃಷಿ) ಪದವೀಧರರನ್ನು ಸದರಿ ಹುದ್ದೆಗಳಿಗೆ ಪರಿಗಣಿಸಲಾಗುವುದು ;

(ಇ) ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಅಧಿಕಾರಿ ಹುದ್ದೆ ಸೃಜಿಸಲು ಕೇಂದ್ರ ಸರ್ಕಾರ ನಿರ್ದೇಶನ ನೀಡಿದೆಯೆ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಸರ್ಕಾರದ ಮುಂದೆ ಯಾವ ಹಂತದಲ್ಲಿ ಇದೆ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೯ (೬೪೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಹೆಚ್ಚಿನ ಸಂಖ್ಯೆಯಲ್ಲಿ ರಾಯಚೂರು

ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವುದರಿಂದ ಸದರಿ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ವಸತಿ ನಿಲಯಗಳು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಸತಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; (ವಿವರ ನೀಡುವುದು)

(ಆ) ರಾಯಚೂರು ವಿಶ್ವವಿದ್ಯಾಲಯ, ಯರಗೇರಾ, ಇಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯ ಮಂಜೂರು ಮಾಡಲು ಪ್ರಸ್ತಾವನೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿ ಇದೆ ; ಯಾವಾಗ ಮಂಜೂರು ಮಾಡಲಾಗುವುದು ? (ವಿವರ ನೀಡುವುದು)

## ಗೃಹಲಕ್ಷ್ಮಿ ಯೋಜನೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೦ (೬೪೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ಮತ್ತು ೨೦೨೪–೨೫ ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ನೋಂದಣಿ ಮಾಡಿಕೊಂಡಿರುವ ಎಲ್ಲಾ ಫಲಾನುಭವಿಗಳಿಗೆ ಹಣ ಪಾವತಿ ಮಾಡಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದ ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಫಲಾನುವಿಗಳಿಗೆ ಬಳಕೆಯಾದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಸದರಿ ಯೋಜನೆಗೆ ಸೇರ್ಪಡೆ ಬಯಸಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಸಲ್ಲಿಕೆಯಾಗಿರುವ ಅರ್ಜಿಗಳನ್ನು ಅನುಮೋದನೆಗೊಳಿಸಲಾಗಿದೆಯೇ ; ಇಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ಯೋಜನೆಗೆ ಸೇರ್ಪಡೆಗೊಳಿಸಿರುವುದಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಫಲಾನುಭವಿಗಳಿಗೆ ಎಷ್ಟು ತಿಂಗಳಿನಿಂದ ಹಣ ಪಾವತಿ ಬಾಕಿ ಇರುತ್ತದೆ ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ ; ಬಾಕಿ ಉಳಿಸಿಕೊಂಡ ಹಣವನ್ನು ಪಾವತಿ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

## ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೧ (೬೪೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸ್ತುತ, ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೩-೨೪ ಮತ್ತು ೨೦೨೪-೨೫ ನೇ ಸಾಲಿನಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುವ ಶುಚಿತ್ವ ಕಿಟ್‌ಗಳು ಇಲ್ಲಿಯವರೆಗೆ ತಲುಪದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು ; ವಿಳಂಬಕ್ಕೆ ಕಾರಣಗಳೇನು ; ಒಂದು ವೇಳೆ ವಿತರಿಸುವ ಹಂತದಲ್ಲಿದ್ದರೆ ಯಾವ ಸಮಯದಿಂದ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ಕಿಟ್‌ಗಳನ್ನು ನೀಡಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗುತ್ತಿದೆ ; ಏಪ್ರಿಲ್-೨೦೨೩ ರಿಂದ ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ಕಿಟ್‌ಗಳಿಗಾಗಿ ವೆಚ್ಚ ಮಾಡಲಾಗಿದೆ ; ಕಿಟ್ ನಲ್ಲಿ ಯಾವ ಯಾವ ವಸ್ತುಗಳನ್ನು ಸರಬರಾಜು ಮಾಡಲಾಗುತ್ತದೆ ; (ಪ್ರತಿ ವಸ್ತುಗಳಿಗನುಗುಣವಾಗಿ ದರಗಳ ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಪ್ರಸ್ತುತ ಕಿಟ್‌ಗಳನ್ನು ವಿತರಿಸುವ ಕೆಲಸ ಯಾವ ಹಂತದಲ್ಲಿದೆ ; ಕಿಟ್‌ಗಳನ್ನು ನೀಡಲು ವಿಳಂಬವಾದರೇ ವಿದ್ಯಾರ್ಥಿಗಳಿಗೆ ಶುಚಿತ್ವದ ಕೆಲಸವು ಸವಾಲಾಗಿ ಪರಿಣಮಿಸುವುದಿಲ್ಲವೇ ; ಕಾಲ ಕಾಲಕ್ಕೆ ಕಿಟ್‌ಗಳನ್ನು ಸರಬರಾಜು ಮಾಡದೇ ಇರಲು ಕಾರಣಗಳೇನು; ಶೈಕ್ಷಣಿಕ ವರ್ಷ ಮುಗಿದ ಮೇಲೆ ಕಿಟ್ ವಿತರಿಸುವ ಕಾರ್ಯ ಮಾಡುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುವುದಿಲ್ಲವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸದರಿ ವಸತಿ ಶಾಲೆಗಳಿಗೆ ಪಠ್ಯಪುಸ್ತಕಗಳನ್ನು ಹಾಗೂ ಇನ್ನಿತರ ವಿದ್ಯಾರ್ಥಿಗಳ ಉಪಯುಕ್ತ ವಸ್ತುಗಳನ್ನು ಸರಿಯಾದ ಸಮಯದಲ್ಲಿ ಸರಬರಾಜು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ದಾಖಲೆಗಳ ಸಮೇತ ಮಾಹಿತಿ ನೀಡುವುದು ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ವಿಳಂಬ ಮಾಡಲಾಗುತ್ತಿದೆ ; ವಿಳಂಬ ದೋರಣೆಯಿಂದ ಮಕ್ಕಳ ಶೈಕ್ಷಣಿಕ ಜೀವನಕ್ಕೆ ತೊಂದರೆ ಮಾಡಿದಂತಾಗುವುದಿಲ್ಲವೇ ?

## ಬೀಡಿ ಕಾರ್ಮಿಕರಿಗೆ "ಪುನರ್ ವಸತಿ" ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೨ (೬೧೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬೀಡಿ ಕಾರ್ಮಿಕರು ಉದ್ಯೋಗವನ್ನು

ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮವೇನು ;

(ಆ) ಬೀಡಿ ಕಾರ್ಮಿಕರಿಗೆ "ಪುನರ್ ವಸತಿ" ಒದಗಿಸಲು ಸರ್ಕಾರದ ಮುಂದಿರುವ ಕ್ರಮವೇನು ; (ವಿವರ ನೀಡುವುದು)

(ಇ) ಬೀಡಿ ಕಾರ್ಮಿಕರಿಗೆ ಗಾರ್ಮೆಂಟ್ ಫ್ಯಾಕ್ಟರಿಗಳನ್ನು ಸ್ಥಾಪಿಸಿ ಉದ್ಯೋಗ ಒದಗಿಸುವ ಬಗ್ಗೆ ಸರ್ಕಾರವು ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ಅಂಗನವಾಡಿಗಳ ಬಿಲ್ಲುಗಳನ್ನು ಪಾವತಿಸದ ವಿದ್ಯುತ್ ಬಿಲ್ಲು ಕಡಿತದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೩ (೬೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂಗನವಾಡಿಗಳ ಬಿಲ್ಲುಗಳನ್ನು ಪಾವತಿಸದೇ ವಿದ್ಯುತ್‌ಚ್ಛಕ್ತಿ ಇಲಾಖೆಯವರು ವಿದ್ಯುತ್ ಕಡಿತ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಂಗನವಾಡಿಗಳಿಗೆ ಕಟ್ಟಡಗಳನ್ನು ನಿರ್ಮಾಣ ಮಾಡಲು ಇಲಾಖೆ ಮೀಸಲಿಟ್ಟ ಹಣವೆಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಅಂಗನವಾಡಿಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದ್ದು ; ಈ ಬಗ್ಗೆ ಕೈಗೊಂಡಿರುವ ಕ್ರಮವೇನು ;

(ಈ) ಪ್ರಸ್ತುತ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚಿರುವುದರಿಂದ ಅಲ್ಲಿ ಅಂಗನವಾಡಿಗಳನ್ನು ನಡೆಸಲು ಅವಕಾಶ ನೀಡಿದ್ದಲ್ಲಿ ಆರ್ಥಿಕ ವೆಚ್ಚ ಕಡಿಮೆಯಾಗಲಿದ್ದು, ಸರ್ಕಾರ ಚಿಂತಿಸಿದೆಯೇ ; ಈ ಬಗ್ಗೆ ತೆಗೆದುಕೊಳ್ಳುವ ಕ್ರಮವೇನು ?

## ಗೃಹಲಕ್ಷ್ಮೀ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೪ (೬೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗೃಹಲಕ್ಷ್ಮೀ ಯೋಜನೆಯನ್ವಯ ಎಷ್ಟು ಕುಟುಂಬಗಳಿಗೆ ರೂ.೨೦೦೦/–ಗಳಂತೆ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಗೃಹಲಕ್ಷ್ಮೀ ಯೋಜನೆಗೆ ಕೆಲವು ಕುಟುಂಬಗಳಿಗೆ ಆದಾಯ ತೆರಿಗೆ ಕಟ್ಟಲಾಗಿದೆ ಎಂದು ಗೃಹಲಕ್ಷ್ಮೀ ಯೋಜನೆಯನ್ನು ನಿರಾಕರಿಸಲಾಗಿದ್ದು, ಆದಾಯ ತೆರಿಗೆಯಿಂದ ಎನ್‌ಓಸಿ ತರಬೇಕೆಂದು ಹೇಳಲಾಗುತ್ತಿದ್ದು, ಆದಾಯ ತೆರಿಗೆ ಇಲಾಖೆ ಇದನ್ನು ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಇ) ಗೃಹಲಕ್ಷ್ಮೀ ಯೋಜನೆಗೆ ಬಿ.ಪಿ.ಎಲ್/ಎ.ಪಿ.ಎಲ್., ಕಾರ್ಡ್‌ಗಳನ್ನು ಕುಟುಂಬದಲ್ಲಿ ಮಹಿಳಾ ಯಜಮಾನರಿರುವ ಸಂದರ್ಭದಲ್ಲಿ ಅದನ್ನು ತಿದ್ದುಪಡಿಗೆ "ಗ್ಯಾರಂಟಿ ಸಮಿತಿಯ" ಕಛೇರಿಯಲ್ಲಿಯೇ ಒದಗಿಸುವಂತೆ ಅವಕಾಶ ನೀಡಲು ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಜಲಜೀವನ್ ಮಿಷನ್ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೫ (೬೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲಸಿರಿ ಯೋಜನೆ ಅನ್ವಯ ಪ್ರತಿ ಮನೆಗಳಿಗೆ ನೀರು ನೀಡಬೇಕೆಂಬ ಯೋಜನೆಯು ಎಷ್ಟು ಶೇಕಡಾ ಕಾರ್ಯಗತವಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆ ಅನ್ವಯ ನೀರಿನ ಲಭ್ಯತೆ ಇಲ್ಲದ ಪ್ರದೇಶಗಳಿಗೆ/ ಗ್ರಾಮಗಳಿಗೆ ನೀರನ್ನು ಒದಗಿಸಲು ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಇ) ಜಲಜೀವನ್ ಮಿಷನ್ ಯೋಜನೆ ಅನ್ವಯ ಪ್ರಾರಂಭಗೊಂಡಿರುವ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ? (ವಿವರ ನೀಡುವುದು)

## ಹಾಸ್ಟಲ್‌ಗಳ ಸಂಖ್ಯೆ ಕಟ್ಟಡಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೬ (೫೭೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ರಾಜ್ಯಾದ್ಯಂತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಎಷ್ಟು ಹಾಸ್ಟೆಲ್ ಗಳಿವೆ ; (ಮಾಹಿತಿ ಒದಗಿಸುವುದು)

(ಆ) ಎಷ್ಟು ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳಿವೆ ; ಸ್ವಂತ ಕಟ್ಟಡಗಳಿಲ್ಲದ ಎಷ್ಟು ಹಾಸ್ಟೆಲ್‌ಗಳಿಗೆ ಸರ್ಕಾರದಿಂದ ಬಾಡಿಗೆ ಪಾವತಿ ಆಧಾರದ ಮೇಲೆ ತೆಗೆದುಕೊಳ್ಳಲಾಗಿದೆ ; ಇವುಗಳಿಗೆ ವಾರ್ಷಿಕವಾಗಿ ಪಾವತಿಸಲಾಗುತ್ತಿರುವ ಬಾಡಿಗೆಯ ಒಟ್ಟು ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಈ ಎಲ್ಲಾ ಹಾಸ್ಟೆಲ್‌ಗಳಿಗೆ ಎಷ್ಟು ವರ್ಷಗಳಿಂದ ಬಾಡಿಗೆಯನ್ನು ಪಾವತಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಈ) ಪದೇ ಪದೇ ಈ ಹಾಸ್ಟೆಲ್‌ಗಳನ್ನು ಒಂದು ಬಾಡಿಗೆ ಕಟ್ಟಡದಿಂದ ಮತ್ತೊಂದು ಬಾಡಿಗೆ ಕಟ್ಟಡಕ್ಕೆ ಬದಲಾವಣೆ ಮಾಡುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಮತ್ತು ವಿದ್ಯಾರ್ಥಿಗಳಿಗೆ ಕನಿಷ್ಠ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿಯವರೆಗೆ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಜಿಲ್ಲಾ ತಾಲ್ಲೂಕು ಮತ್ತು ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಸರ್ಕಾರದ ಜಾಗವಿದ್ದರೂ ಸಹ ಇದುವರೆವಿಗೂ ಈ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸದಿರಲು ಕಾರಣವೇನು; ಇನ್ನು ಮುಂದಾದರೂ ಸರ್ಕಾರಿ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರವು ಕ್ರಮತೆಗೆದುಕೊಳ್ಳುವುದೇ ? (ಸರ್ಕಾರ ಸ್ಪಷ್ಟ ಉತ್ತರ ನೀಡುವುದು)

## ಗ್ರಾಮಠಾಣ ಮತ್ತು ಊರುಗುಪ್ಪೆ ಸರ್ವೆ ನಂ.ಗಳಿಗೆ ೯ ಮತ್ತು ೧೧ನೇ ಬಿ–ನಮೂನೆ ವಿತರಿಸುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೭ (೫೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮಗಳಲ್ಲಿರುವ ಗ್ರಾಮಠಾಣ, ಊರುಗುಪ್ಪೆ ಸರ್ವೆ ನಂಬರ್‌ನಲ್ಲಿ ಅನಾಧಿ ಕಾಲದಿಂದಲೂ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ನಮೂನೆ ೯ ಮತ್ತು ೧೧ನೇ ಬಿ–ನಮೂನೆ ವಿತರಿಸದೆ ಸಾರ್ವಜನಿಕರಿಗೆ ಗ್ರಾಮ ಪಂಚಾಯಿತಿ ಪಿ.ಡಿ.ಓ.ಗಳು ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಆ) ಅನಾದಿ ಕಾಲದಿಂದಲೂ ಗ್ರಾಮಗಳಲ್ಲಿ ಗ್ರಾಮಠಾಣ, ಊರುಗುಪ್ಪೆ ಸರ್ವೆ ನಂಬರ್‌ನಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ಕೊಡಗು ಮತ್ತು ಇತರೆ ಜಿಲ್ಲೆಗಳಲ್ಲಿ ನಮೂನೆ ೯ ಮತ್ತು ೧೧ನೇ ಬಿ-ನಮೂನೆಗೆ ಅರ್ಜಿ ಸಲ್ಲಿಸಿದರೆ ಪಿ.ಡಿ.ಓ.ಗಳು ಆರ್.ಟಿ.ಸಿ. ಕೊಡಿ, ಮನೆ ಕಟ್ಟಿರುವ ಜಾಗವನ್ನು ಭೂ ಪರಿವರ್ತನೆ ಮಾಡಿಕೊಂಡು ಬನ್ನಿ ಎಂದು ಹೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಾರ್ವಜನಿಕರ ಅನುಕೂಲಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಸರ್ಕಾರದ ಆದೇಶ/ಸುತ್ತೋಲೆಗಳಿದ್ದರೆ ಅದರ ಪ್ರತಿ ಒದಗಿಸುವುದರೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಇ) ನಮೂನೆ ೯ ಮತ್ತು ೧೧ನೇ ಬಿ ನಮೂನೆ ವಿತರಿಸದೆ ಸಾರ್ವಜನಿಕರಿಗೆ ಗ್ರಾಮ ಪಂಚಾಯಿತಿ ಪಿ.ಡಿ.ಓ.ಗಳು ಲಂಚಕ್ಕಾಗಿ ಪೀಡಿಸುತ್ತಿದ್ದು ಇಂತಹ ಅಧಿಕಾರಿ/ನೌಕರರ ಮೇಲೆ ಸರ್ಕಾರ ಇಲ್ಲಿಯವರೆಗೂ ತೆಗೆದುಕೊಂಡಿರುವ ಕಠಿಣ ರೀತಿಯ ಕ್ರಮಗಳೇನು ; (ವಿವರ ನೀಡುವುದು)

(ಈ) ರಾಜ್ಯದ ಗ್ರಾಮಗಳಲ್ಲಿರುವ ಗ್ರಾಮಠಾಣ, ಊರುಗುಪ್ಪೆ ಸರ್ವೆ ನಂಬರ್‌ನಲ್ಲಿ ಅನಾಧಿ ಕಾಲದಿಂದಲೂ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ಈ ಗೊಂದಲಗಳನ್ನು ನಿವಾರಿಸಿ, ನಮೂನೆ ೯ ಮತ್ತು ೧೧ನೇ ಬಿ-ನಮೂನೆ ಬ್ಯಾಂಕುಗಳಿಗೆ ಕೊಡಲು, ಪೌತಿ ಖಾತೆ ಹೀಗೆ ಇನ್ನಿತರೆ ದಾಖಲೆಗಳಿಗೆ ನೀಡಲು ಬೇಕಾಗಿರುವುದರಿಂದ ಈ ನಮೂನೆಯನ್ನು ವಿತರಿಸಲು ಸರ್ಕಾರ ಕೂಡಲೇ ಆದೇಶ ಹೊರಡಿಸುವುದೇ ? (ವಿವರ ನೀಡುವುದು)

## ಕಟ್ಟಡ ಕಾರ್ಮಿಕರ ಸೌಲಭ್ಯಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೮ (೫೭೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯು ಯಾವಾಗಿನಿಂದ ಅಸ್ಥಿತ್ವಕ್ಕೆ ಬಂದಿದೆ ; ಇದರ ದಯೋದ್ದೇಶಗಳೇನು ; (ವಿವರ ನೀಡುವುದು)

(ಆ) ಈ ಮಂಡಳಿ ವತಿಯಿಂದ ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಸಿಗುವ ಸೌಲಭ್ಯಗಳೇನು ; (ಮಾಹಿತಿ ಒದಗಿಸುವುದು)

(ಇ) ಈ ಮಂಡಳಿಯಲ್ಲಿ ಇದುವರೆವಿಗೂ ಸಂಗ್ರಹಿಸಿರುವ ಮೊತ್ತವೆಷ್ಟು ; ಈ ಹಣವನ್ನು ಯಾವ ಯಾವ ಬ್ಯಾಂಕಿನಲ್ಲಿ ಜಮಾ ಮಾಡಲಾಗಿದೆ ; (ವಿವರ ನೀಡುವುದು)

(ಈ) ಕಟ್ಟಡ ಕಾರ್ಮಿಕ ನಿರ್ಮಾಣ ಮಂಡಳಿಯ ನಿಧಿ ದುರುಪಯೋಗವಾಗಿರುವ ಬಗ್ಗೆ ಇತ್ತೀಚೆಗೆ ಪತ್ರಿಕೆಯಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಿಧಿ ದುರುಪಯೋಗ ಮಾಡಿಕೊಂಡಿರುವ ಅಧಿಕಾರಿ/ ನೌಕರರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

(ಉ) ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಸಹಾಯಧನ ತಡೆಹಿಡಿದಿರುವುದನ್ನು ಖಂಡಿಸಿ, ಕಟ್ಟಡ ಕಾರ್ಮಿಕ ಸಂಘಟನೆಗಳು ಪ್ರತಿಭಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು ?

## ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಸಂಪರ್ಕ ಒದಗಿಸಿರುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೯ (೫೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಗ್ರಾಮಗಳಲ್ಲಿ ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ "ಮನೆಮನೆಗೆ ಗಂಗೆ" ಎಂಬ ಘೋಷ ವಾಕ್ಯದಡಿ ಎಷ್ಟು ಮೊತ್ತವನ್ನು ನೀಡಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಇದುವರೆವಿಗೂ ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಇ) ಹಾಗೆಯೇ, ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಈ ಯೋಜನೆಯಡಿ ಯಾವ ಯಾವ ಪಂಚಾಯಿತಿಗಳಿಗೆ ಸೇರಿದ ಹಳ್ಳಿಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ; ಎಷ್ಟು ಮನೆಗಳಿಗೆ ನಲ್ಲಿ ಸಂಪರ್ಕವನ್ನು ಒದಗಿಸಲಾಗಿದೆ ; ಬಾಕಿ ಒದಗಿಸಬೇಕಾಗಿರುವ ನಲ್ಲಿ ಸಂಪರ್ಕಗಳೆಷ್ಟು ; (ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಪ್ಯಾಕೇಜ್‌ಗಳನ್ನು ಮಾಡಿ ಯಾವ ದಿನಾಂಕವಾದಂದು ಗುತ್ತಿಗೆದಾರನಿಗೆ ಕಾಮಗಾರಿ ಆದೇಶ ನೀಡಲಾಗಿದೆ ಮತ್ತು ಆ ಗುತ್ತಿಗೆದಾರರ ಹೆಸರು, ಕಂಪನಿ ಹೆಸರು, ವಿಳಾಸವನ್ನು ಒದಗಿಸುವುದು ?

## ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೦ (೬೭೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಲ್ಲಿ ಉದ್ಯಮಶೀಲತೆ ಅಭಿವೃದ್ಧಿ ಯೋಜನೆಗೆ ಬಿಡುಗಡೆ ಮಾಡಿದ ಹಣವೆಷ್ಟು; ವ್ಯಾಪಾರ ಮತ್ತು ಇತರೆ ಉದ್ಯಮಗಳಿಗೆ ಸರಕು ವಾಹನ, ಹಳದಿ ಬೋರ್ಡ್ ವಾಹನ ಸ್ವಾವಲಂಬಿ ಸಾರಥಿ ಯೋಜನೆಯಡಿಯಲ್ಲಿ ಎಷ್ಟು ಜನರಿಗೆ ಈ ಯೋಜನೆ ಅಡಿಯಲ್ಲಿ ಹಣ ಬಿಡುಗಡೆ ಮಾಡಲಾಗಿದೆ ; (ಫಲಾನುಭವಿಗಳ ವಿವರವನ್ನು ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವಯಂ ಉದ್ಯೋಗ ನೇರಸಾಲ ಯೋಜನೆಯಡಿಯಲ್ಲಿ ಆರ್ಥಿಕ ಚಟುವಟಿಕೆ ಯೋಜನೆಗೆ ಬಿಡುಗಡೆ ಮಾಡಿದ ಹಣವೆಷ್ಟು ; ಈ ಯೋಜನೆ ಅಡಿಯಲ್ಲಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ೨೦೨೪-೨೫ರ ಆರ್ಥಿಕ ವರ್ಷದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯಲು ಪಂಪಸೆಟ್ ಅಳವಡಿಸಲು ಬಿಡುಗಡೆಯಾಗಿರುವ ಹಣವೆಷ್ಟು ? (ಫಲಾನುಭವಿಗಳ ವಿವರವನ್ನು ಜಿಲ್ಲಾವಾರು ನೀಡುವುದು)

## ರೈತರಿಗೆ ಒದಗಿಸುವ ಯಂತ್ರೋಪಕರಣಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೧ (೬೭೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಇಲಾಖೆಯಲ್ಲಿ ಯಂತ್ರೋಪಕರಣಗಳ ಪೂರೈಕೆಗೆ ಏಜೆನ್ಸಿಗಳ ಜೊತೆ ಸರ್ಕಾರ ಮಾಡಿಕೊಂಡಿರುವ ಒಪ್ಪಂದದ ವಿವರ

ನೀಡುವುದು ; ಏಜೆನ್ಸಿಗಳು ಯಂತ್ರೋಪಕರಣಗಳನ್ನು ಯಾವ ದರಕ್ಕೆ ಪೂರೈಸುತ್ತಿವೆ ; ರಾಜ್ಯದ ರೈತರಿಗೆ ಸರ್ಕಾರ ರಿಯಾಯತಿ ದರದಲ್ಲಿ ವಿತರಿಸುವ ಯಂತ್ರೋಪಕರಣಗಳ ದರಗಳ ವಿವರ ನೀಡುವುದು ;

(ಆ) ಈ ದರಗಳು ಮುಕ್ತ ಮಾರುಕಟ್ಟೆಯಲ್ಲಿ ದೊರೆಯುವ ಯಂತ್ರೋಪಕರಣಗಳ ಬೆಲೆಗೆ ಸಮನಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದರ ಹೆಚ್ಚಳಕ್ಕೆ ಕಾರಣಗಳೇನು ;

(ಇ) ಎಜೆನ್ಸಿಗಳು ಸರ್ಕಾರಕ್ಕೆ ಮಾರುಕಟ್ಟೆ ಬೆಲೆಗಿಂತ ತುಂಬಾ ಹೆಚ್ಚಿನ ದರಕ್ಕೆ (ಎಂ.ಪೆನಲ್ಸ್) ಯಂತ್ರೋಪಕರಣಗಳನ್ನು ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಸರ್ಕಾರಕ್ಕೆ ನಷ್ಟವುಂಟಾಗುತ್ತಿದ್ದು, ರೈತರಿಗೂ ಅನುಕೂಲವಾಗದಿರುವ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ರೈತರಿಗೆ ರಿಯಾಯತಿ ದರದಲ್ಲಿ ಯಂತ್ರೋಪಕರಣಗಳನ್ನು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿವಿಧ ಭವನಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೨ (೬೭೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡಾ॥ ಬಿ. ಆರ್. ಅಂಬೇಡ್ಕರ್ ಮತ್ತು ಜಗಜೀವನ್ ರಾಮ್ ಭವನಗಳನ್ನು ನಿರ್ಮಿಸಿ ಕಾಮಗಾರಿ ಪೂರ್ಣಗೊಂಡಿರುವ ಮತ್ತು ಕಾಮಗಾರಿ ಪ್ರಾರಂಭಗೊಳ್ಳದ ಭವನಗಳೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಭವನಗಳ ನಿರ್ಮಾಣ ಕಾರ್ಯ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯ

ಹಣವನ್ನು ಬಳಸಿಕೊಂಡು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು ; (ಮಾಹಿತಿ ನೀಡುವುದು)

(ಇ) ಕಾಮಗಾರಿ ಪೂರ್ಣಗೊಳ್ಳಲು ಅಗತ್ಯ ಇರುವ ಹಣವನ್ನು ತುರ್ತಾಗಿ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮದಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ?

## ವಿಕಲಚೇತನ ಮತ್ತು ಹಿರಿಯ ನಾಗರೀಕರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೩ (೬೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ವಿಕಲಚೇತನರು ಮತ್ತು ಹಿರಿಯ ನಾಗರೀಕರಿಗೆ ಮಾಸಾಶನ ನೀಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ವಿಕಲಚೇತನರ ಮತ್ತು ಹಿರಿಯ ನಾಗರೀಕರಿಗೆ ಪ್ರಸ್ತುತ ನೀಡುತ್ತಿರುವ ಗೌರವ ಧನ ಎಷ್ಟು ; ಈ ಗೌರವ ಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆಯಿದೆಯೇ ; ಹಾಗಿದ್ದರೆ ಯಾವ ಕಾಲಮಿತಿಯೊಳಗೆ ರಚಿಸಲಾಗುವುದು ;

(ಇ) ವಿಕಲಚೇತನರ ಕಲ್ಯಾಣಕ್ಕಾಗಿ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳು ಯಾವುವು ;

(ಈ) ವಿಕಲಚೇತನರು ಸ್ವಂತ ಉದ್ಯೋಗ ಪ್ರಾರಂಭಿಸಲು ಸರ್ಕಾರ ನೀಡುವ ಸಹಾಯ ಧನ ಎಷ್ಟು ?

## ರಾಜ್ಯದ ಬಹು ಸಂಖ್ಯಾತರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೪ (೬೮೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಹುಸಂಖ್ಯಾತರು ಎಂದರೆ ಯಾರು ; ಯಾವ ಮತ, ಪಂಥ, ಪಂಗಡ, ಜಾತಿಯವರನ್ನು ಬಹು ಸಂಖ್ಯಾತರು ಎಂದು ಪರಿಗಣಿಸಲಾಗುತ್ತಿದೆ ;

(ಆ) ಬಹುಸಂಖ್ಯಾತರು ಎಂದು ಪರಿಗಣಿಸಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ರಾಜ್ಯದಲ್ಲಿ ಬಹು ಸಂಖ್ಯಾತರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಯಾವುವು ; ಕಳೆದ 2 ವರ್ಷಗಳಲ್ಲಿ ಬಹುಸಂಖ್ಯಾತರ ಅಭಿವೃದ್ಧಿಗೆ ವೆಚ್ಚ ಮಾಡಿರುವ ಹಣ ಎಷ್ಟು ? (ವರ್ಷವಾರು ವಿವರ ನೀಡುವುದು)

## ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಇತರ ವೃಂದಗಳ ನೌಕರರು ಹಾಗೂ ಪಂಚಾಯತ್ ನೌಕರರ ವಿವಿಧ ಬೇಡಿಕೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೫ (೬೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇತರ ವೃಂದಗಳ ನೌಕರರು ವಿವಿಧ ಬೇಡಿಕೆ ಮುಂದಿಟ್ಟು ಮುಷ್ಕರ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಿ.ಡಿ.ಓ., ಉಳಿದ ವೃಂದ ಹಾಗೂ ಪಂಚಾಯತ್ ನೌಕರರ ಪ್ರಮುಖ ಬೇಡಿಕೆಗಳೇನು ;

(ಇ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಲು ಎಷ್ಟು ವರ್ಷಗಳಿಂದ ಬಾಕಿ ಉಳಿದಿದೆ ; ನ್ಯಾಯಾಲಯದಲ್ಲಿ ಬಹಳ ವರ್ಷಗಳಿಂದ ಪ್ರಕರಣ ವಿಳಂಬವಾಗಲು ಇಲಾಖೆಯ ಉನ್ನತ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕಿದೆಯೇ ;

(ಈ) ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹಾಗೂ ನೌಕರರ ಬೇಡಿಕೆಗಳನ್ನು ಕಾಲಮಿತಿಯಲ್ಲಿ ಈಡೇರಿಸಿ, ನೌಕರರ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಮಲೆನಾಡು ಭಾಗದ ಕೃಷಿ ಬೆಳೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೩೬ (೬೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಲೆನಾಡು ಭಾಗಕ್ಕೆ ಬರುವ ಜಿಲ್ಲೆಗಳು ಯಾವುವು ಮತ್ತು ಸದರಿ ಭಾಗದ ಹವಾಗುಣಕ್ಕೆ ಒಗ್ಗುವಂತಹ ಕೃಷಿ ಬೆಳೆಗಳು ಯಾವುವು ;

(ಆ) ಸದರಿ ಬೆಳೆಗಳನ್ನು ಬೆಳೆಯಲು ಸರ್ಕಾರದ ಉತ್ತೇಜನ ಕ್ರಮಗಳೇನು ;

(ಇ) ಸದರಿ ಬೆಳೆಗಳನ್ನು ಬೆಳೆಯಲಾಗುತ್ತಿರುವ ಪ್ರದೇಶದ ವ್ಯಾಪ್ತಿ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸದರಿ ಬೆಳೆಗಳಿಗೆ ಇರುವ ಪ್ರೋತ್ಸಾಹ ಧನವೇನು ;

(ಉ) ಮಣ್ಣು ಪರೀಕ್ಷಾ ಕೇಂದ್ರಗಳು ಎಲ್ಲೆಲ್ಲಿವೆ ?

## ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಂತ ಕಟ್ಟಡ ಇಲ್ಲದಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೩೭ (೬೬೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತ ಬಳಿಕ ಸ್ಥಾಪಿಸಲಾಗಿರುವ 'ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ'ಕ್ಕೆ ಸ್ವಂತ ನಿವೇಶನ ಮತ್ತು ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕೇಂದ್ರಕ್ಕೆ ಸ್ವಂತ ನಿವೇಶನ ಮತ್ತು ಕಟ್ಟಡ ಒದಗಿಸಲು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) 'ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ'ಕ್ಕೆ ರಾಜ್ಯ ಸರ್ಕಾರ ಈವರೆವಿಗೂ ನೀಡಿರುವ ಅನುದಾನದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಸದರಿ ಕೇಂದ್ರಕ್ಕೆ ಕೇಂದ್ರ ಸರ್ಕಾರ ನೀಡಿರುವ ಅನುದಾನ ಎಷ್ಟು ಹಾಗೂ ಸ್ವಂತ ಕಟ್ಟಡವಿಲ್ಲವೆಂಬ ಕಾರಣಕ್ಕೆ ಕೇಂದ್ರ ಸರ್ಕಾರದ ಅನುದಾನ ದೊರೆಯುತ್ತಿಲ್ಲ ಎನ್ನುವುದು ನಿಜವೇ ; (ವರ್ಷವಾರು ಮಾಹಿತಿ ನೀಡುವುದು)

(ಈ) ಭಾಷಾ ಅಭಿವೃದ್ಧಿಗೆ ಪೂರಕವಾಗಿ ಕೇಂದ್ರದಲ್ಲಿ ಇದುವರೆವಿಗೂ ಆಗಿರುವ ಕೆಲಸಗಳೇನು ;

(ಉ) 'ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ'ವನ್ನು ಬಲಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಅಥವಾ ಕೈಗೊಳ್ಳಲಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## 'ಭಾಗ್ಯಲಕ್ಷ್ಮಿ' ಯೋಜನೆಯ ಫಲಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೩೮ (೬೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾಗ್ಯಲಕ್ಷ್ಮಿ / ಸುಕನ್ಯಾ ಸಮೃದ್ಧಿ ಯೋಜನೆಯಡಿ ನೋಂದಾಯಿಸಿದ ಬಿ.ಪಿ.ಎಲ್ ಕುಟುಂಬದ ಪ್ರತಿ ಹೆಣ್ಣು ಮಗುವಿಗೆ ೧೮ ವರ್ಷ ಪೂರೈಸಿದ ಬಳಿಕ ದೊರೆಯುವ ಮೊತ್ತ ಎಷ್ಟು ;

(ಆ) ಈ ಪೈಕಿ ಎಷ್ಟು ಮಂದಿ ೧೮ ವರ್ಷ ಪೂರೈಸಿ ಹಣ ಪಡೆಯಲು ಅರ್ಹತೆ ಹೊಂದಿರುತ್ತಾರೆ ; ಈವರೆವಿಗೂ ಎಷ್ಟು ಮಂದಿಗೆ ಹಣ ಪಾವತಿಸಲಾಗಿದೆ ; ಪಾವತಿಸಲು ಬಾಕಿ ಇದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅರ್ಹರು ಹಣ ಪಡೆಯಲು ಒದಗಿಸಬೇಕಿರುವ ದಾಖಲೆಗಳು ಯಾವುವು ಹಾಗೂ ನಿರ್ದಿಷ್ಟಪಡಿಸಿರುವ ಷರತ್ತುಗಳು ಏನೇನು ; (ಸಂಪೂರ್ಣ ವಿವರ ನೀಡುವುದು)

(ಈ) ೧೮ ವರ್ಷದ ಈ ಅವಧಿಯಲ್ಲಿ ಹೆಣ್ಣು ಮಗುವಿನ ಕುಟುಂಬಗಳಲ್ಲಿ ಸಾಮಾಜಿಕ ಮತ್ತು ಆರ್ಥಿಕವಾಗಿ ಸಾಕಷ್ಟು ಏರಿಳಿತಗಳು ಆಗಿದ್ದು, ದಾಖಲೆಗಳನ್ನು ಒದಗಿಸುವುದು ಕಷ್ಟಸಾಧ್ಯವಾಗಿರುವುದರಿಂದ ಯೋಜನೆಯ ಫಲ ಪಡೆಯಲು ಅನುಕೂಲ ಆಗುವಂತೆ ದಾಖಲೆಗಳನ್ನು ಅಗತ್ಯ ಕಡಿಮೆ ಮಾಡಿ ಷರತ್ತುಗಳನ್ನು ಸರಳೀಕರಣಗೊಳಿಸುವ ಕುರಿತು ಸರ್ಕಾರದ ನಿಲುವೇನು ?

## ಜೆ.ಎಂ.ಎಂ ನಿಯಮಗಳನ್ನು ಉಲ್ಲಂಘಿಸಿ ಕಾಮಗಾರಿಗಳನ್ನು ಅನುಷ್ಠಾನಿಸುತ್ತಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೪ (೭೭೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿ ಜಲ ಜೀವನ್ ಮಿಷನ್ (ಜೆ.ಎಂ.ಎಂ) ಅಡಿಯಲ್ಲಿ ಫೇಸ್-೧, ೨, ೩ ಮತ್ತು ೪ ರಲ್ಲಿ ಆಯ್ಕೆ ಮಾಡಿಕೊಂಡಿರುವ ಎಲ್ಲಾ ಗ್ರಾಮಗಳಿಗೆ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ಕೆ.ಟಿ.ಪಿ.ಪಿ ನಿಯಮಗಳನ್ವಯ ಸಿದ್ಧಪಡಿಸಿಕೊಂಡು ಅನುಷ್ಠಾನಿಸಲಾಗುತ್ತಿದೆಯೇ ;

(ಆ) ಕೆ.ಟಿ.ಪಿ.ಪಿ ನಿಯಮಗಳನ್ವಯ ಒಂದು ಗ್ರಾಮದ ವಿಸ್ತೃತ ಯೋಜನಾ ವರದಿಯುನ್ನು (ಡಿಪಿಆರ್) ಸಿದ್ಧಪಡಿಸುವಾಗ ಯಾವ ಕಾಮಗಾರಿಗಳನ್ನು ಸೇರ್ಪಡೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಇ) ಕಾಮಗಾರಿಗಳನ್ನು ಪ್ರತ್ಯೇಕಗೊಳಿಸಲು ನಿಯುಮಗಳಲ್ಲಿ ಅವಕಾಶವಿದೆಯೇ ; ಅವಕಾಶವಿದ್ದಲ್ಲಿ, ಸರ್ಕಾರದ ಆದೇಶ ಪ್ರತಿ ಒದಗಿಸುವುದು ;

(ಈ) ಹಾಸನ ಜಿಲ್ಲೆಯಾದ್ಯಂತ ಬಹುತೇಕ ಕಾಮಗಾರಿಗಳಲ್ಲಿ ಒಂದು ಗ್ರಾಮದ ಕಾಮಗಾರಿಯ ಗುತ್ತಿಗೆಯನ್ನು ಒಂದೇ ಟೆಂಡರ್‌ನಲ್ಲಿ ಅಳವಡಿಸದೇ ವಿಭಜಿಸಿ ನಾಮಫಲಕ ಅಳವಡಿಸುವ ಕಾಮಗಾರಿ, ವಿದ್ಯುತ್ ಕಾಮಗಾರಿ, ಬೋರ್‌ವೆಲ್ ಕೊರೆಯುವ ಕಾಮಗಾರಿಗಳನ್ನು ಬೇರೆ ಬೇರೆ ಗುತ್ತಿಗೆದಾರರಿಗೆ ನೀಡಿ ನಿಯಮಗಳನ್ನು ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ವಿವಿಧ ಹಂತಗಳಲ್ಲಿ ತೆಗೆದುಕೊಂಡಿರುವ ಎಷ್ಟು ಕಾಮಗಾರಿಗಳಲ್ಲಿ ಈ ರೀತಿ ನಿಯಮಗಳನ್ನು ಉಲ್ಲಂಘಿಸಲಾಗಿದೆ ; (ಯೋಜನಾ ಹಂತವಾರು ಮಾಹಿತಿ ನೀಡುವುದು)

(ಊ) ಕೆ.ಟಿ.ಪಿ.ಪಿ ನಿಯಮಗಳನ್ನು ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿ ಶಿಸ್ತುಕ್ರಮಗಳನ್ನು ಜರುಗಿಸಲಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಖಾಸಗಿ ಕೃಷಿ ಕಾಲೇಜುಗಳಿಗೆ ಮಾನ್ಯತೆ ನೀಡುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೪೦ (೬೬೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಕೃಷಿ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳು ಎಲ್ಲೆಲ್ಲಿವೆ, (ಮಾಹಿತಿ ನೀಡುವುದು)

(ಆ) ಈ ಪೈಕಿ ರಾಜ್ಯದಲ್ಲಿರುವ ಖಾಸಗಿ ಕೃಷಿ ಸಂಬಂಧಿತ ಕಾಲೇಜುಗಳಿಗೆ ಮಾನ್ಯತೆ ಇದೆಯೇ ;

(ಇ) ಹೊಸದಾಗಿ ಖಾಸಗಿ ಕೃಷಿ ಕಾಲೇಜುಗಳನ್ನು ಆರಂಭಿಸಲು ಎಷ್ಟು ಪ್ರಸ್ತಾವನೆಗಳು ಸ್ವೀಕೃತವಾಗಿವೆ ; (ವಿವರ ನೀಡುವುದು)

(ಈ) ಕೃಷಿ ಖಾಸಗೀಕರಣ ಆಗಬಾರದು ಹಾಗೂ ಕೃಷಿ ಕಾಲೇಜುಗಳ ಸ್ಥಾಪನೆ ಹೊಣೆಯನ್ನು ಖಾಸಗಿಯವರಿಗೆ ವಹಿಸಬಾರದು ಎನ್ನುವ ಸಾರ್ವಜನಿಕ ಆಗ್ರಹದ ಕುರಿತು ಸರ್ಕಾರದ ನಿಲುವೇನು ;

(ಉ) ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಇನ್‌ಟೇಕ್ ಮಿತಿಯನ್ನು ಹೆಚ್ಚಿಸುವ ಕುರಿತು ಸರ್ಕಾರದ ನಿಲುವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಸರ್ಕಾರಿ ಕೃಷಿ ಕಾಲೇಜುಗಳಲ್ಲಿ ಮಂಜೂರಾದ ಹಾಗೂ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ? (ಈ ಕುರಿತು ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳಲ್ಲಿ ಮೂಲಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೪೧ (೬೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು;

(ಆ) ಈ ಪೈಕಿ ಬಾಡಿಗೆ ಕಟ್ಟಡದಲ್ಲಿ, ಇತರೆ ಸರ್ಕಾರಿ/ಪರ್ಯಾಯ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಗೂ ನಿವೇಶನ ಲಭ್ಯವಿರುವ ನಿವೇಶನ ಇಲ್ಲದಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ಗ್ರಾಮೀಣ–ನಗರವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒಟ್ಟು ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಮೂಲಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ಕಲ್ಪಿಸಲು ಕ್ರಮ ವಹಿಸಲಾಗುವುದು ; (ಶೌಚಾಲಯ, ನೀರು, ವಿದ್ಯುತ್ ಸಂಪರ್ಕ ಇಲ್ಲದಿರುವ ಅಂಗನವಾಡಿಗಳ ಸಂಖ್ಯೆ ನೀಡುವುದು)

(ಈ) ಸದರಿ ಜಿಲ್ಲೆಗಳಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಮಂಜೂರು, ಭರ್ತಿ ಮತ್ತು ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ? (ಮಾಹಿತಿ ನೀಡುವುದು)

## ಕರಾವಳಿ ಅಭಿವೃದ್ಧಿ ಮಂಡಳಿ ರಚನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೨ (೬೭೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಅಭಿವೃದ್ಧಿ ಮಂಡಳಿ ರಚನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಹೊಸದಾಗಿ ರಚನೆಯಾದ ಕರಾವಳಿ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸೃಜಿಸಲಾದ ಹುದ್ದೆಗಳೆಷ್ಟು; ಇವುಗಳಲ್ಲಿ ಎಷ್ಟು ಹುದ್ದೆಗಳನ್ನು ತುಂಬಲಾಗಿದೆ; ಖಾಯಂ ನೌಕರರ ಸಂಖ್ಯೆ ಎಷ್ಟು; ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಹುದ್ದೆಗಳೆಷ್ಟು ;

(ಆ) ಹೊಸದಾಗಿ ರಚನೆಯಾದ ಕರಾವಳಿ ಅಭಿವೃದ್ಧಿ ಮಂಡಳಿಗೆ ಅಧ್ಯಕ್ಷರು ಹಾಗೂ ಕಾರ್ಯದರ್ಶಿಯನ್ನು ನೇಮಕಾತಿ ಮಾಡಲಾಗಿದೆಯೇ ; ಮಾಡಿಲ್ಲದಿದ್ದರೆ, ಯಾವಾಗ ನೇಮಿಸಲಾಗುವುದು ;

(ಇ) ೨೦೨೪-೨೫ ನೇ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಮಂಡಳಿಗೆ ನಿಗದಿಪಡಿಸಿದ ಅನುದಾನದ ಮೊತ್ತವೆಷ್ಟು ; ಇವುಗಳಿಗೆ ಕ್ರಿಯಾಯೋಜನೆ ತಯಾರಿಸಲಾಗಿದೆಯೇ; ಎಷ್ಟು ಕಾಮಗಾರಿಗಳನ್ನು ಆಯ್ಕೆ ಮಾಡಲಾಗಿದೆ ; ಇವುಗಳಲ್ಲಿ ಅನುಷ್ಠಾನ ಮಾಡಲಾದ ಕಾಮಗಾರಿಗಳೆಷ್ಟು; ಇವುಗಳಿಗೆ ಮಾಡಿದ ವೆಚ್ಚವೆಷ್ಟು ; ಕಾಮಗಾರಿ ಬಾಕಿ ಉಳಿಯಲು ಕಾರಣವೇನು ;

(ಈ) ಕರ್ನಾಟಕದ ಕರಾವಳಿ ಪ್ರದೇಶಗಳು ವಿಸ್ತಾರವಾಗಿದ್ದು ಹಲವು ಭೌಗೋಳಿಕ ವೈವಿಧ್ಯತೆ ಹೊಂದಿರುವುದರಿಂದ ಹೈದರಾಬಾದ್ - ಕರ್ನಾಟಕ ಅಭಿವೃದ್ಧಿ ಮಂಡಳಿಯಂತೆ ಕರಾವಳಿ ಅಭಿವೃದ್ಧಿ ಮಂಡಳಿಗೆ ಹೆಚ್ಚಿನ ಅನುದಾನ ನೀಡಿ ಮೇಲ್ದರ್ಜೆಗೇರಿಸಲು ಸರ್ಕಾರದ ಕ್ರಮವೇನು ; ಯಾವ ಕಾಲಮಿತಿಯೊಳಗೆ ಈ ಬೇಡಿಕೆಯನ್ನು ಈಡೇರಿಸಲಾಗುವುದು ?

# ಸಂಸ್ಕೃತಿ ಇಲಾಖೆಯು ವಿವಿಧ ಕಲಾವಿದರಿಗೆ ಮಾಸಾಶನ ನೀಡುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೩ (೬೭೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಯಾವೆಲ್ಲ ಕಲಾ ಪ್ರಕಾರಗಳನ್ನು ಗುರುತಿಸಿ ದಾಖಲೀಕರಣ ಮಾಡಲು ಕ್ರಮವಹಿಸಿದೆ ;

(ಆ) ರಾಜ್ಯದಲ್ಲಿರುವ ಎಲ್ಲಾ ಕಲಾಪ್ರಕಾರಗಳಿಗೆ ಇಲಾಖೆಯ ಮೂಲಕ ಕಲೆಯ ಉಳಿವು, ಉನ್ನತೀಕರಣ ಮತ್ತು ದಾಖಲೀಕರಣಕ್ಕೆ ಆರ್ಥಿಕ ಧನಸಹಾಯ ಮತ್ತು ವಾರ್ಷಿಕ ಅನುದಾನ ನೀಡಲು ಇಲಾಖೆಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಲು ಅನುದಾನ ಹಂಚಿಕೆ ಮಾಡಲಾಗಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಯಕ್ಷಗಾನ, ನಾಟಕ ಸಹಿತ ಹಲವು ಕಲಾ ಪ್ರಕಾರಗಳಿದ್ದು, ಅವುಗಳಲ್ಲಿ ಕೆಲಸ ನಿರ್ವಹಿಸಿ ನಿವೃತ್ತರಾಗಿರುವ, ಅನಾರೋಗ್ಯಪೀಡಿತ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಒಳಪಡದ ಕಲಾವಿದರಿಗೆ ಸರಕಾರ ಮಾಸಾಶನ ನೀಡಲು ಯಾವಾಗ ಕ್ರಮ ವಹಿಸಲಾಗುವುದು ;

(ಈ) ಕರಾವಳಿ ಜಿಲ್ಲೆಗಳಲ್ಲಿ ಹಲವಾರು ನಿವೃತ್ತ ಕಲಾವಿದರಿಗೆ ಸರಕಾರದ ಮಾಸಾಶನ ಅಲಭ್ಯತೆಯ ಕಾರಣ ಕೆಲವು ಖಾಸಗಿ ಪ್ರತಿಷ್ಠಾನಗಳ ಮೂಲಕ ಅಲ್ಪ ಪ್ರಮಾಣದ ಆರ್ಥಿಕ ಸಹಾಯ ಒದಗಿಸುತ್ತಿದ್ದು ಈ ಅರ್ಹ ಕಲಾವಿದರ ಸಮೀಕ್ಷೆ ನಡೆಸಿ ಇಲಾಖೆಯಿಂದಲೇ ಮಾಸಾಶನ ನೀಡಲು ಸರಕಾರ ಹೇಗೆ ಕ್ರಮವಹಿಸುತ್ತಿದೆ ?

## ರಾಜ್ಯದಲ್ಲಿ ಕಾರ್ಮಿಕರ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೪೪ (೬೭೪೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಮಿಕರ ನೋಂದಣಿಯ ನಿಯಮಗಳು ಯಾವುವು; ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಎಷ್ಟು ಜನ ನೋಂದಾಯಿತ ಕಾರ್ಮಿಕರು ಇದ್ದಾರೆ ; ಕಾರ್ಮಿಕ ವ್ಯಾಖ್ಯಾನದಿಂದ ಹೊರಗುಳಿದ ಕೆಲಸಗಾರರನ್ನು ಕಾರ್ಮಿಕ ವ್ಯಾಪ್ತಿಗೆ ಸೇರ್ಪಡೆಗೊಳಿಸಲು ಸರಕಾರ ಯಾವ ರೀತಿ ಕ್ರಮವಹಿಸುತ್ತಿದೆ ;

(ಆ) ರಾಜ್ಯಾದಾದ್ಯಂತ ಕಾರ್ಮಿಕರಿಗೆ ನೀಡಬೇಕಿರುವ ಸವಲತ್ತುಗಳು ಯಾವುವು ; ಸರಕಾರವೂ ಸೇರಿದಂತೆ ಕಾರ್ಮಿಕರನ್ನು ದುಡಿಸಿಕೊಳ್ಳುತ್ತಿರುವವರು ಕಾರ್ಮಿಕರಿಗೆ ಅಗತ್ಯ ಸವಲತ್ತುಗಳನ್ನು ನೀಡುತ್ತಿರುವ ಬಗ್ಗೆ ಹಾಗೂ ಸುರಕ್ಷತೆಯ ಮುಂಜಾಗ್ರತೆಗಳನ್ನು ವಹಿಸಿರುವುದರ ಬಗ್ಗೆ ಇಲಾಖೆ ಹೇಗೆ ಖಾತರಿಪಡಿಸಿಕೊಳ್ಳುತ್ತಿದೆ;

(ಇ) ರಾಜ್ಯದಲ್ಲಿ ಇತ್ತೀಚೆಗೆ ಅತಿ ಹೆಚ್ಚು ಸಂಖ್ಯೆಯ ಹೊರ ರಾಜ್ಯದ ಹಾಗೂ ಉತ್ತರ ಭಾರತದ ಹೆಚ್ಚಿನ ಜನರು ಕಟ್ಟಡ ಕಾರ್ಮಿಕರಾಗಿ ಹಾಗೂ ಇತರ ಕಾರ್ಯಗಳಿಗಾಗಿ ಬರುತ್ತಿದ್ದು ಅವರನ್ನು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಲು ಏನು ಕ್ರಮ ವಹಿಸಲಾಗಿದೆ ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಾಮಗಾರಿ ಸ್ಥಳಗಳಲ್ಲಿ ವರದಿಯಾದ ದುರ್ಘಟನೆಗಳ ಸಂಖ್ಯೆಯೆಷ್ಟು; ಅವುಗಳಲ್ಲಿ ಪ್ರಾಣ ಹಾನಿಯಾದ ಮತ್ತು ಇತರ ಗಾಯಾಳುಗಳ ಸಂಖ್ಯೆಯೆಷ್ಟು ; ಸಂಬಂಧಪಟ್ಟ ಸಂತ್ರಸ್ತರಿಗೆ ಎಷ್ಟು ಮೊತ್ತದ ಪರಿಹಾರಧನವನ್ನು ನೀಡಲು ಕ್ರಮವಹಿಸಿದೆ ?

## ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪಟ್ಟಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೫ (೬೭೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರತ ಸ್ವಾತಂತ್ರ್ಯ ನಂತರ ಮದ್ರಾಸು ರಾಜ್ಯ ಅಸ್ತಿತ್ವದಲ್ಲಿದ್ದು ಕರ್ನಾಟಕದ ವಿವಿಧ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿದ್ದ ಸಮುದಾಯಗಳ ಹೆಸರುಗಳು ಯಾವುವು ; ನಂತರ ಭಾಷಾವಾರು ಪ್ರಾಂತ್ಯಗಳ ಏಕೀಕರಣವಾಗಿ ಮೈಸೂರು ರಾಜ್ಯವಾದಾಗ ರಚಿಸಿದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿದ್ದ ಸಮುದಾಯಗಳ ಹೆಸರುಗಳು ಯಾವುವು ;

(ಆ) ಪ್ರಸ್ತುತ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿರುವ ಸಮುದಾಯಗಳು ಯಾವುವು ; ಮದ್ರಾಸು ರಾಜ್ಯ, ಮೈಸೂರು ರಾಜ್ಯ ಹಾಗೂ ಪ್ರಸ್ತುತ ಕರ್ನಾಟಕದ ಪ್ರದೇಶಗಳಲ್ಲಿ ಈ ಮೂರೂ ಪರಿಶಿಷ್ಟ ಜಾತಿ ಪಟ್ಟಿಗಳಲ್ಲಿ ವ್ಯತ್ಯಾಸವಿದೆಯೇ ; ಪ್ರಸ್ತುತ ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಬಿಟ್ಟುಹೋದ ರಾಜ್ಯದ ಸಮುದಾಯಗಳು ಯಾವುವು ಮತ್ತು ಅದಕ್ಕೆ ಕಾರಣಗಳೇನು ;

(ಇ) ಇಲ್ಲಿಯವರೆಗೆ ಎಷ್ಟು ಸಮುದಾಯಗಳನ್ನು ಹೊಸದಾಗಿ ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಲಾಗಿದೆ ; ಈ ಸೇರ್ಪಡೆಗೆ ಪರಿಗಣಿಸಿದ ದಾಖಲೆಗಳು ಯಾವುವು ;

(ಈ) ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಸಮುದಾಯಗಳ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನ ನಡೆಸಿ ವರದಿಯನ್ನು ಸರಕಾರದ ಮಟ್ಟದಲ್ಲಿ ಸ್ವೀಕರಿಸಲಾಗಿದೆ; ಈ ವರದಿಗಳಿಗಾಗಿ ಸರಕಾರ ವ್ಯಯಿಸಿದ ಮೊತ್ತವೆಷ್ಟು; ಸಾಕಷ್ಟು ಮೊತ್ತ ವ್ಯಯಿಸಿದ ನಂತರವೂ ಈ ವರದಿಗಳ ಮೇಲೆ ಏನೂ ಕ್ರಮವಹಿಸದಿರಲು ಕಾರಣವೇನು ; ಯಾವಾಗ ಈ ಬಗ್ಗೆ ಕ್ರಮ ವಹಿಸಲಾಗುವುದು ?

## ಬೆಳೆ ವಿಮೆ ಕುರಿತು

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೬ (೬೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪ನೇ ಸಾಲಿನ ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಜನ ರೈತರು ಬೆಳೆ ವಿಮೆ ಸಲುವಾಗಿ ನೋಂದಣಿ ಮಾಡಿಕೊಂಡಿದ್ದಾರೆ ;

(ಆ) ಕಳೆದ ಎರಡು ವರ್ಷಗಳಲ್ಲಿ ರೈತರಿಗೆ ಎಷ್ಟು ಬೆಳೆ ವಿಮೆ ಪರಿಹಾರ ನೀಡಲಾಗಿದೆ ;

(ಇ) ಈ ಪೈಕಿ ಕೇಂದ್ರ ಪುರಸ್ಕೃತ ಯೋಜನೆಗಳ ಮೂಲಕ ರಾಜ್ಯಕ್ಕೆ ಸಂದಾಯವಾದ ಮೊತ್ತವೆಷ್ಟು ;

(ಈ) ಬೆಳೆ ವಿಮೆ ಪರಿಹಾರಕ್ಕೆ ರೈತರಿಗೆ ಆಗಿಂದಾಗ್ಗೆ ಅಗತ್ಯ ಮಾಹಿತಿ ನೀಡಲಾಗುತ್ತಿದೆಯೇ ?

## ಭಾಗ್ಯಲಕ್ಷ್ಮಿ ಯೋಜನೆಯ ಮೆಚ್ಯೂರ್ ಆಗಿರುವ ಬಾಂಡ್‌ಗಳ ಮಾಹಿತಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೪೭ (೬೮೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾಗ್ಯಲಕ್ಷ್ಮಿ ಯೋಜನೆ ಆರಂಭಗೊಂಡಿದ್ದು ಯಾವಾಗ ; ೨೦೨೪ ಅಕ್ಟೋಬರ್ ಅಂತ್ಯಕ್ಕೆ ಈ ಯೋಜನೆಯಡಿ ನೊಂದಾಯಿಸಲ್ಪಟ್ಟಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಮಕ್ಕಳಿಗೆ ಬಾಂಡ್ ವಿತರಿಸಲಾಗಿದೆ ; ಬಾಂಡ್ ವಿತರಿಸದೇ ಇರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೨೦೨೪ ನವೆಂಬರ್, ೩೦ಕ್ಕೆ ಮೆಚ್ಯೂರ್ ಆಗಿರುವ ಬಾಂಡ್‌ಗಳ ಸಂಖ್ಯೆ ಎಷ್ಟು; ಎಷ್ಟು ಬಾಂಡ್‌ಗಳ ಫಲಾನುಭವಿಗಳ ಖಾತೆಗೆ ಹಣ ಜಮೆ ಆಗಿದೆ; ಬಾಕಿ ಇರುವವರಿಗೆ ಕಾಲಮಿತಿಯೊಳಗೆ ಹಣ ನೀಡಲು ಕೈಗೊಂಡಿರುವ ಕ್ರಮಗಳೇನು ;

(ಈ) ಈ ಯೋಜನೆ ಜಾರಿಗೆ ಬಂದಾಗ ವಿಧಿಸಿದ್ದ ಷರತ್ತುಗಳೇನು; ಈಗ ಮೆಚ್ಯೂರಿಟಿ ಆದ ಫಲಾನುಭವಿಗಳಿಗೆ ಹೆಚ್ಚುವರಿ ಷರತ್ತುಗಳನ್ನು ವಿಧಿಸುತ್ತಿರುವುದಕ್ಕೆ ಕಾರಣಗಳೇನು ; ಷರತ್ತುಗಳನ್ನು ಸಡಿಲಿಸಿ ಮೆಚ್ಯೂರ್ ಆಗಿರುವ ಎಲ್ಲಾ ಬಾಂಡ್‌ಗಳ ಫಲಾನುಭವಿಗಳ ಖಾತೆಗೆ ಹಣ ಜಮೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ವಸತಿ ನಿಲಯಗಳ ಬಗ್ಗೆ

**ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೮ (೬೮೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ಸಾಲಿಗೆ ಈ ಹಾಸ್ಟೆಲ್‌ಗಳಲ್ಲಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ್ದ ಹಾಗೂ ಪ್ರವೇಶ ಕಲ್ಪಿಸಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ವಸತಿ ನಿಲಯಗಳಲ್ಲಿರುವ ಮಂಜೂರಾತಿ ವಿದ್ಯಾರ್ಥಿಗಳ ಸಾಮರ್ಥ್ಯ ಎಷ್ಟು ; ಹಾಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಾಸ್ಟೆಲ್‌ಗಳಲ್ಲಿ ಪ್ರವೇಶ ಮಿತಿಗಿಂತ ಅಧಿಕ ವಿದ್ಯಾರ್ಥಿಗಳು ವಾಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವಿಚಾರದಲ್ಲಿ ಹೈಕೋರ್ಟ್ ವ್ಯಕ್ತಪಡಿಸಿರುವ ಅಭಿಪ್ರಾಯ ಹಾಗೂ ನೀಡಿರುವ ಸೂಚನೆ ಏನು ;

(ಈ) ನ್ಯಾಯಾಲಯದ ಸೂಚನೆ ನಂತರ ಸರ್ಕಾರ ಕೈಗೊಂಡಿರುವ ಪರಿಹಾರ ಕ್ರಮಗಳೇನು ; ಹೊಸದಾಗಿ ಎಷ್ಟು ಹಾಸ್ಟೆಲ್‌ಗಳ ನಿರ್ಮಾಣಕ್ಕೆ ಕ್ರಮ ಕೈಗೊಂಡಿದೆ ; ಇದಕ್ಕಾಗಿ ಮಂಜೂರು ಮಾಡಿರುವ ಹಣ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಹೊರ ನಾಡಿನ ಕನ್ನಡಿಗರ ಮಕ್ಕಳಿಗೆ ವಸತಿ ಶಾಲೆಗಳಲ್ಲಿ ಪ್ರವೇಶಾತಿ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೯ (೭೦೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದಲ್ಲಿನ ನವೋದಯ/ಮೊರಾರ್ಜಿ ದೇಸಾಯಿ/ರಾಣಿ ಚೆನ್ನಮ್ಮ ಇತರೆ ವಸತಿ ಶಾಲೆಗಳಲ್ಲಿ ಹೊರ ನಾಡಿನ ಕನ್ನಡಿಗರ ಮಕ್ಕಳಿಗೆ ಪ್ರವೇಶಾತಿ ನೀಡಲಾಗುತ್ತಿದೆಯೇ, ಇಲ್ಲದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊರ ರಾಜ್ಯದ ಕನ್ನಡ ಮಾಧ್ಯಮ ಗಡಿನಾಡ ಮಕ್ಕಳಿಗೆ ಪ್ರವೇಶಾತಿ ನೀಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹೊರ ನಾಡಿನಲ್ಲಿ ನೆಲೆಸಿರುವ ಕನ್ನಡಿಗರ ಮಕ್ಕಳಿಗೆ ಸದರಿ ವಸತಿ ಶಾಲೆಗಳಲ್ಲಿ ಪ್ರವೇಶಾತಿ ಪಡೆಯಲು ಮೀಸಲಾತಿ ನೀಡಲಾಗಿದೆಯೇ ? (ಮಾಹಿತಿ ನೀಡುವುದು)

## ಬುಡಕಟ್ಟು ಗ್ರಾಮೀಣ ಪ್ರದೇಶಗಳಲ್ಲಿ CAPART ನಿಂದ ಕೈಗೆತ್ತಿಕೊಂಡಿರುವ ಯೋಜನೆಗಳು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫೦ (೭೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಬುಡಕಟ್ಟು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ Council for Advancement of People's Action and Rural Technology (CAPART) ವತಿಯಿಂದ ಕೈಗೆತ್ತಿಕೊಂಡ ಯೋಜನೆಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರದ ಅಧೀನದಲ್ಲಿರುವ ಈ ಸಂಸ್ಥೆಗೆ, ರಾಜ್ಯದಲ್ಲಿ ಮೂರು ವರ್ಷಗಳಲ್ಲೂ ಬುಡಕಟ್ಟು ಮತ್ತು ಗ್ರಾಮೀಣ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಎಷ್ಟು ಅನುದಾನ ಬಿಡುಗಡೆ ಮಾಡಿವೆ ; (ವರ್ಷವಾರು ಮತ್ತು ಯೋಜನಾವಾರು ಮಾಹಿತಿ ನೀಡುವುದು)

(ಇ) ಸದರಿ ಸಂಸ್ಥೆಯ ಕಾರ್ಯನಿರ್ವಹಣೆ ಬಗ್ಗೆ ರಾಜ್ಯ ಸರ್ಕಾರ ನಿಗಾ ವಹಿಸಿದೆಯೇ ಮತ್ತು ಇಲ್ಲಿಯವರೆಗೆ ಎಷ್ಟು ಯೋಜನೆಗಳು ಪೂರ್ಣಗೊಂಡಿವೆ ಮತ್ತು ಎಷ್ಟು ಬಾಕಿ ಉಳಿದುಕೊಂಡಿವೆ ? (ಮಾಹಿತಿಯನ್ನು ಒದಗಿಸುವುದು)

## ಕೃಷಿ ಕ್ಷೇತ್ರದಲ್ಲಿ ಜೈವಿಕ ತಂತ್ರಜ್ಞಾನದ ಅಳವಡಿಕೆ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೧ (೭೧೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಆರ್ಥಿಕ ಬಲವರ್ಧನೆಗಾಗಿ ಕೃಷಿಯ ವಿವಿಧ ಕ್ಷೇತ್ರಗಳಲ್ಲಿ ಜೈವಿಕ ತಂತ್ರಜ್ಞಾನದ ಅಳವಡಿಕೆಯ ತುರ್ತು ಅಗತ್ಯವಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ನೀತಿ/ಯೋಜನೆಗಳನ್ನು ರೂಪಿಸಿದೆ ; (ವಿವರಗಳನ್ನು ನೀಡುವುದು)

(ಆ) ಕೃಷಿ ವಲಯದಲ್ಲಿ ಜೈವಿಕ ತಂತ್ರಜ್ಞಾನದ ಅಳವಡಿಕೆ ಕುರಿತು ಸರ್ಕಾರ ಯಾವುದಾದರೂ ಸಂಶೋಧನೆ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಈ ಉದ್ದೇಶಕ್ಕಾಗಿ

ಮಂಜೂರು ಮಾಡಿದ ಅನುದಾನ ಎಷ್ಟು ಮತ್ತು ಅದರ ಫಲಿತಾಂಶಗಳಾವುವು ; (ವಿವರ ನೀಡುವುದು)

(ಇ) ಕೃಷಿ ಕ್ಷೇತ್ರದಲ್ಲಿನ ಜೈವಿಕ ತಂತ್ರಜ್ಞಾನ ಸಂಶೋಧನೆಯಲ್ಲಿ ಹಲವಾರು ಸಂಸ್ಥೆಗಳು ತಮ್ಮನ್ನು ಈ ಕಾರ್ಯದಲ್ಲಿ ತೊಡಗಿಸಿಕೊಂಡಿವೆಯೇ ; ಹಾಗಿದ್ದಲ್ಲಿ, ಕೃಷಿ ಉತ್ಪನ್ನಗಳ ಅಭಿವೃದ್ಧಿ ಮತ್ತು ವಾಣಿಜ್ಯಕರಣದಲ್ಲಿ ಮಾಡಿದ ಸಾಧನೆಗಳು ಏನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಂಖ್ಯಿಕ ಇಲಾಖೆಯ ಶಿಫಾರಸ್ಸು ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫೨ (೭೧೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅಭಿವೃದ್ಧಿ ಮತ್ತು ಪ್ರಗತಿಯತ್ತ ಕೊಂಡೊಯ್ಯುವ ಹಾದಿಯಲ್ಲಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಪಾತ್ರ ಅತೀ ಮಹತ್ವವಾಗಿದ್ದು, ಸದರಿ ಇಲಾಖೆಯಿಂದ ಹಲವಾರು ಶಿಫಾರಸ್ಸುಗಳನ್ನು ರಾಜ್ಯಕ್ಕೆ ನೀಡಲು ಸಮಿತಿ ರಚಿಸಿದ್ದು, ಈ ಸಮಿತಿಯ ಅಧ್ಯಕ್ಷರು ಯಾರು ಮತ್ತು ಸದಸ್ಯರು ಯಾರು ;

(ಆ) ಈ ಸಮಿತಿಯಿಂದ ರಾಜ್ಯದ ಪ್ರಗತಿಗಾಗಿ ಹಾಗೂ ನಾಗರಿಕರ ಹಿತರಕ್ಷಣೆಗಾಗಿ ಕಳೆದ ೨ ವರ್ಷಗಳಿಂದ ನೀಡಲಾದ ಶಿಫಾರಸ್ಸು ಮತ್ತು ಸಲಹೆಗಳೇನು ; (ಸಲಹಾ ಪಟ್ಟಿಯನ್ನು ಜಿಲ್ಲಾವಾರು ನೀಡುವುದು)

(ಇ) ಹಲವಾರು ವರ್ಷಗಳಿಂದ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಯೋಜನೆಗಳಲ್ಲಿ ಪ್ರಾದೇಶಿಕ ಅಸಮತೋಲನೆ ಕಂಡುಬರುತ್ತಿದ್ದು,

ಈ ಪ್ರದೇಶಿಕ ಅಸಮತೋಲನೆಯನ್ನು ನಿವಾರಿಸಲು ಕಳೆದ ಎರಡು ವರ್ಷಗಳಲ್ಲಿ ಸರ್ಕಾರಕ್ಕೆ ಸಮಿತಿಯಿಂದ ಮಾಡಲಾಗಿರುವ ಶಿಫಾರಸ್ಸುಗಳು ಏನು ; (ವಿವರವಾದ ಮಾಹಿತಿ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಡಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿಗಾಗಿ ಒತ್ತು ನೀಡಲು ರೂ.೫,೦೦೦ ಕೋಟಿ ಅನುದಾನವನ್ನು ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದು, ಈ ಯೋಜನೆ ಪ್ರಸ್ತುತ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು) ಈ ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳಾವುವು ; (ಕಲ್ಯಾಣ ಕರ್ನಾಟಕ ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಹಿಂದುಳಿದ ಪ್ರದೇಶಗಳಲ್ಲಿ ಅಸಮತೋಲನೆಯನ್ನು ಪರಿಹರಿಸಲು ದಿ: ಡಾ॥ ಡಿ.ಎಂ.ನಂಜುಂಡಪ್ಪ ವರದಿಯ ಶಿಫಾರಸ್ಸಿನಂತೆ ಅನುದಾನ/ಹೂಡಿಕೆಗಳನ್ನು ರಾಜ್ಯ ಸರ್ಕಾರದ ವತಿಯಿಂದ ನೀಡಲಾಗಿದ್ದು, ಈ ಕ್ರಮಗಳಿಂದ ಆಗಿರುವ ಬದಲಾವಣೆಗಳು ಮತ್ತು ಅವುಗಳ ಪ್ರಭಾವವನ್ನು ಅಧ್ಯಯನ ಮಾಡಲು ಉನ್ನತ ಅಧಿಕಾರದ ಸಮಿತಿಯನ್ನು ರಚಿಸಲಾಗುವುದು ಎಂದು ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದು, ಈ ಸಮಿತಿಯನ್ನು ರಚಿಸಲಾಗಿದೆಯೇ ; ರಚಿಸಿದ್ದಲ್ಲಿ, ಈ ಸಮಿತಿಯು ಯಾರ ಅಧ್ಯಕ್ಷತೆಯಲ್ಲಿ ರಚನೆಯಾಗಿರುತ್ತದೆ ; ಈ ಸಮಿತಿಯ ಸದಸ್ಯರು ಯಾರು ಮತ್ತು ಈ ಸಮಿತಿಯು ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ಕೈಗೊಂಡಿದೆ ಹಾಗೂ ಈ ಸಮಿತಿಯ ಶಿಫಾರಸ್ಸುಗಳು ಏನು ; ಇಲ್ಲವಾದಲ್ಲಿ, ವಿಳಂಬಕ್ಕೆ ಕಾರಣಗಳೇನು ?

## ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳ ಅಭಿವೃದ್ಧಿಯ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫೩ (೭೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ 2019 ರಿಂದ 2023ರವರೆಗೆ ಅಂಗನವಾಡಿಗಳ ಸ್ಥಿತಿ-ಗತಿಗಳು ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಆಗಿರುವ ಬದಲಾವಣೆಗಳ ಕುರಿತು ಮಾಹಿತಿ ನೀಡುವುದು ;

(ಆ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂಗನವಾಡಿ ಕೇಂದ್ರಗಳ ಮೂಲಕ ಬಡ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ (Overall Development), ಆರೋಗ್ಯ ಸೌಲಭ್ಯಗಳು, ಶಿಕ್ಷಣ ಮತ್ತು ಪೌಷ್ಟಿಕಾಂಶದ ಸ್ಥಿತಿಯನ್ನು ಸುಧಾರಿಸುವ ಗುರಿ ಮತ್ತು ಉದ್ದೇಶಗಳನ್ನು ಸರ್ಕಾರ ಸಾಧಿಸಿದೆಯೇ ; (ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

(ಇ) ರಾಜ್ಯದಲ್ಲಿ ಕೆಲವೊಂದು ಅಂಗನವಾಡಿ ಕೇಂದ್ರಗಳು ಇಲ್ಲಿಯವರೆವಿಗೂ ಬಾಡಿಗೆ ಸ್ಥಳದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಇಲ್ಲಿ ಓದುತ್ತಿರುವ ಮಕ್ಕಳಿಗೆ ಸರಿಯಾದ ಮೂಲಭೂತ ಸೌಕರ್ಯಗಳಿಲ್ಲದಿರುವುದು ಮೇಲ್ಛಾವಣಿ ಕುಸಿದು ಬೀಳುವುದು, ಶೌಚಾಲಯಗಳು ಇಲ್ಲದೇ ಇರುವುದು ಇತ್ಯಾದಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತು ಇಲಾಖೆ ಕೈಗೊಂಡಿರುವ ಕ್ರಮವೇನು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ನೀಡಲಾಗುತ್ತಿರುವ ಪೌಷ್ಠಿಕಾಂಶಗಳ ವಿತರಣೆಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ ; ಈ ಗುತ್ತಿಗೆಯನ್ನು ಕೇಂದ್ರಿಕರಿಸಲಾಗಿದೆಯೇ ಅಥವಾ ಜಿಲ್ಲಾ ಮಟ್ಟದ ಕಛೇರಿಗಳಿಗೆ ಗುತ್ತಿಗೆದಾರರನ್ನು ನೇಮಕ ಮಾಡುವ ಜವಾಬ್ದಾರಿಯನ್ನು ನೀಡಲಾಗಿದೆಯೇ ;

(ಉ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಆಂಗ್ಲ ಮಾಧ್ಯಮದ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ ; ಹೌದಾದಲ್ಲಿ, ಎಷ್ಟು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಮತ್ತು ಈ ಶಾಲೆಗಳಿಗೆ ಶಿಕ್ಷಕರನ್ನು ನೇಮಿಸಲಾಗಿದೆಯೇ ? (ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿನ ವಸತಿ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೫೪ (೫೬೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ವಸತಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ವಸತಿ ಶಾಲೆಗಳಲ್ಲಿ ದಾಖಲಾಗಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆಯಾನ ಶುಚಿತ್ವ ಕಿಟ್ ಗಳನ್ನು ಸರಿಯಾದ ಸಮಯಕ್ಕೆ ವಿತರಿಸದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು ;

(ಇ) ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಶುಚಿತ್ವ ಕಿಟ್‌ಗಳಿಗಾಗಿ ಪಾವತಿ ಮಾಡಿರುವ ಒಟ್ಟು ಮೊತ್ತ ಎಷ್ಟು; ಪಾವತಿಸಬೇಕಾದ ಮೊತ್ತ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

# ಹಿಂದುಳಿದ ವರ್ಗಗಳ ವಸತಿ ನಿಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೫೫ (೫೬೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿನ ಒಟ್ಟು ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿ ಬರುವ ವಸತಿ ನಿಲಯಗಳ ನಿರ್ವಹಣೆಗಾಗಿ ನೀಡುತ್ತಿರುವ ಮೊತ್ತ ಎಷ್ಟು ; ಪ್ರತಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗನುಗುಣವಾಗಿ ಎಷ್ಟು ಹಣವನ್ನು ನಿಗಧಿಪಡಿಸಲಾಗಿದೆ; ಸದರಿ ಭೋಜನಾ ಮೆನು ಚಾರ್ಟ್ ಪ್ರಕಾರ ಹಣ ನಿಗಧಿ ಪಡಿಸಲಾಗಿದೆಯೇ ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಾಲಕಾಲಕ್ಕೆ ಸರ್ಕಾರವು ವಸತಿ ನಿಲಯಗಳಲ್ಲಿನ ಸಂಖ್ಯಾ ಬಲವನ್ನು ಹೆಚ್ಚು ಮಾಡುತ್ತಾ ಬಂದಿದ್ದರೂ ಸಹ ವಸತಿ ನಿಲಯಗಳ ಕಟ್ಟಡಗಳು ಹಾಗೂ ಅಡುಗೆ ಸಹಾಯಕರು/ಸಿಬ್ಬಂದಿಗಳನ್ನು ಹೆಚ್ಚಿಸಲಾಗಿದೆಯೇ ; ಹೆಚ್ಚಿಸಿದ್ದಲ್ಲಿ ಎಷ್ಟು ವಸತಿ ನಿಲಯಗಳಲ್ಲಿ ಹೆಚ್ಚಿಸಲಾಗಿದೆ ವಸತಿ ನಿಲಯವಾರು ಮಾಹಿತಿ ನೀಡುವುದು ; ಹೆಚ್ಚಿಸದೇ ಇದ್ದಲ್ಲಿ, ಯಾವ ಕಾಲ ಮಿತಿಯೊಳಗೆ ಹೆಚ್ಚಿಸಲಾಗುವುದು ; (ಮಾಹಿತಿ ನೀಡುವುದು)

(ಈ) ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಳ ಮಾಡಿರುವುದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾರ್ಯದೊತ್ತಡ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಗನುಗುಣವಾಗಿ ಪರಿಷ್ಕೃತ ಮೆನು ಚಾರ್ಟ್ ಪ್ರಕಾರ ವ್ಯವಸ್ಥೆ ಕಲ್ಪಿಸುವ ಹಾಗೂ ನಿಲಯ ನಿರ್ವಹಣೆ ಅವಶ್ಯಕತೆ ಇರುವ ಸಿಬ್ಬಂದಿ/ಹಣ/ಕೊಠಡಿ/ಸೂಕ್ತ ಸೌಕರ್ಯಗಳನ್ನು ಸರ್ಕಾರ ಒದಗಿಸುವುದೇ ; ಒದಗಿಸಿದ್ದಲ್ಲಿ, ಯಾವ-ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಪಟ್ಟಿ ನೀಡುವುದು ?

**ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿ ಕುರಿತು**

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೫೬ (೬೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಪರೀಕ್ಷೆಗೆ ನಿಗಧಿಪಡಿಸಿರುವ ಪಠ್ಯಕ್ರಮವೇನು ;

(ಆ) ಈ ಪರೀಕ್ಷೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ನಿರ್ಧಿಷ್ಟ ಪತ್ರಿಕೆಯನ್ನು ಅಳವಡಿಸಿದ್ದಲ್ಲಿ, ಮುಂದೆ ಆಯ್ಕೆಯಾದ ಅಭ್ಯರ್ಥಿಯು ಇಲಾಖೆಯಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವುದಿಲ್ಲವೇ ; ನಿರ್ಧಿಷ್ಟ ಪತ್ರಿಕೆಯನ್ನು ಅಳವಡಿಸದೇ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಮುಂಬರುವ ಹೊಸ ನೇಮಕಾತಿಗಳ ಪರೀಕ್ಷೆಯಲ್ಲಾದರೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಪಠ್ಯಕ್ರಮವನ್ನು ನಿರ್ಧಿಷ್ಟ ಪತ್ರಿಕೆಗೆ ಅಳವಡಿಸಬಹುದಲ್ಲವೇ ? (ಈ ಕುರಿತು ಸ್ಪಷ್ಟನೆಯನ್ನು ನೀಡುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ದರ್ಜೆಗೇರಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೫೭ (೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿ ಮಾಡಿಕೊಳ್ಳಲಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾವನೆಯು ಯಾವ ಹಂತದಲ್ಲಿದೆ ; (ಮಾಹಿತಿಯನ್ನು ಒದಗಿಸುವುದು)

(ಇ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೇರಿಸಿದರೆ ಸಿಗುವ ಸೌಲಭ್ಯಗಳಾವುವು ; (ವಿವರ ನೀಡುವುದು)

(ಈ) ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ?

## ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇರ ನೇಮಕಾತಿ ಹಾಗೂ ಬಡ್ತಿ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೮ (೫೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: ೨೨.೦೧.೨೦೦೯ರಂದು ಜರುಗಿದ ಸಚಿವ ಸಂಪುಟ ಸಭೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ತುಂಬಲು ಸಚಿವ ಸಂಪುಟ ನಿರ್ಣಯ ಕೈಗೊಂಡಿದೆಯೇ ;

(ಆ) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/೫೬೯/ಗ್ರಾಪಂಅ/೨೦೦೬, ದಿನಾಂಕ:೩೧.೦೩.೨೦೦೮ ಹಾಗೂ ಸಚಿವ ಸಂಪುಟದ ನಿರ್ಣಯದಂತೆ ೨೦೧೦-೨೦೧೧ನೇ ಸಾಲಿನಲ್ಲಿ ಬಡ್ತಿ ಕೋಟಾದಲ್ಲಿ ಒಟ್ಟು ಎಷ್ಟು ಹುದ್ದೆಗಳನ್ನು ತುಂಬಲು ನಿರ್ಣಯಿಸಲಾಗಿತ್ತು ; (ಜಿಲ್ಲಾವಾರು ಬಡ್ತಿ ಮಾಡಬೇಕಾದ ಹುದ್ದೆಗಳ ಸಂಖ್ಯೆ ನೀಡುವುದು)

(ಇ) ೨೦೦೮-೨೦೦೯ ಹಾಗೂ ೨೦೦೯-೨೦೧೦ನೇ ವರ್ಷಗಳಿಗೆ ನಿಗದಿಪಡಿಸಿದ ಬಡ್ತಿ ಹುದ್ದೆಗಳನ್ನು ಒಗ್ಗೂಡಿಸಿ ಎಷ್ಟು ಬಡ್ತಿಗಳನ್ನು ನೀಡಲು ನಿರ್ಣಯಿಸಲಾಗಿತ್ತು ; ೨೦೧೦-೨೦೧೧ನೇ ಸಾಲಿಗೆ ಬಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳಲ್ಲಿ ಮೇಲಿನ ಸರ್ಕಾರದ ನಿರ್ಣಯಗಳ ವಿರುದ್ಧವಾಗಿ ೨೦೦೯-೨೦೧೦ರಲ್ಲಿಯೇ ಎಷ್ಟು ಜಿಲ್ಲೆಗಳಲ್ಲಿ ಮುಂಗಡವಾಗಿ ಅಕ್ರಮ ಬಡ್ತಿ ಮಾಡಲಾಗಿದೆ ; (ಜಿಲ್ಲಾವಾರು ಅಕ್ರಮ ಬಡ್ತಿ ಹೊಂದಿದವರ ಪಟ್ಟಿ ನೀಡುವುದು)

(ಈ) ಗ್ರೇಡ್-೧ ಕಾರ್ಯದರ್ಶಿಗಳಿಗೆ ಬಡ್ತಿ ನೀಡುವ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಸ/೧೧೫/ಗ್ರಾಪಂಕಾ/೨೦೦೮ ದಿನಾಂಕ: ೧೧.೦೩.೨೦೧೦ರ ಪೂರ್ವದಲ್ಲಿಯೇ ಎಷ್ಟು ಜಿಲ್ಲೆಗಳಲ್ಲಿ ಗ್ರೇಡ್-೧ ಕಾರ್ಯದರ್ಶಿ ಹುದ್ದೆಯಿಂದ ಪಿ.ಡಿ.ಓ. ಹುದ್ದೆಗೆ ಬಡ್ತಿ ನೀಡಲಾಗಿದೆ ; ಈ ರೀತಿ ಬಡ್ತಿ ನೀಡಿರುವುದು ಸರಿಯಾದ ಕ್ರಮವೇ ; (ಜಿಲ್ಲಾವಾರು ಬಡ್ತಿ ಹೊಂದಿದವರ ಪಟ್ಟಿ ನೀಡುವುದು)

(ಉ) ಈ ಆಕ್ರಮ ಬಡ್ತಿಗಳ ತನಿಖೆ ನಡೆಸುವಂತೆ ಇಲಾಖೆಯ ಆಯುಕ್ತರಿಗೆ ದಿನಾಂಕ: ೦೮.೦೨.೨೦೨೪ ಹಾಗೂ ಅಪರ ಮುಖ್ಯ ಕಾರ್ಯದಶಿಗಳಿಗೆ ದಿನಾಂಕ:೦೯.೦೨.೨೦೨೪ರಂದು ದೂರು ನೀಡಿದರೂ, ಇಲ್ಲಿಯವರೆಗೆ ತನಿಖೆ ನಡೆಸದಿರಲು ಕಾರಣವೇನು ? (ಸದರಿ ದೂರಿನ ಕಡತ ಹಾಗೂ ನಿರ್ವಹಿಸಿರುವ ಟಿಪ್ಪಣಿಯ ಪ್ರತಿ ನೀಡುವುದು)

## ನವೆಂಬರ್ ೧೨ನ್ನು "ಯಕ್ಷಗಾನ ದಿನ" ವೆಂದು ಘೋಷಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫೯ (೬೫೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಮತ್ತು ಮಲೆನಾಡಿಗೆ ಮಾತ್ರ ಸೀಮಿತವಾಗದೆ ಇಡೀ ರಾಜ್ಯಾದ್ಯಂತ ಪ್ರದರ್ಶನಗೊಳ್ಳುತ್ತಿರುವ ಯಕ್ಷಗಾನವನ್ನು ಕರ್ನಾಟಕದ ಪ್ರಾತಿನಿಧಿಕ ಕಲೆ ಎಂದು ಪರಿಗಣಿಸಿ ಮೇಳಗಳು ತಿರುಗಾಟಕ್ಕೆ ಹೊರಡುವ ನವೆಂಬರ್ ೧೨ ರಂದು "ಯಕ್ಷಗಾನ ದಿನ" ವೆಂದು ಘೋಷಿಸಬೇಕೆಂದು ಒತ್ತಾಯಿಸುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನವೆಂಬರ್ ೧೨ ರಂದು "ಯಕ್ಷಗಾನ ದಿನ" ವೆಂದು ಘೋಷಿಸಲು ಸರ್ಕಾರ ಇದುವರೆಗೆ ಕ್ರಮ ವಹಿಸದೇ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ತನ್ನದೇ ಆದ ವೈಶಿಷ್ಟ್ಯತೆ ಹಾಗೂ ಪರಂಪರೆಯನ್ನು ಹೊಂದಿರುವ ಯಕ್ಷಗಾನವನ್ನು ಕರ್ನಾಟಕದ ಪ್ರಾತಿನಿಧಿಕ ಕಲೆ ಎಂದು ಪರಿಗಣಿಸಿ, ಮೇಳಗಳು ತಿರುಗಾಟಕ್ಕೆ ಹೊರಡುವ ನವೆಂಬರ್ ೧೨ ರಂದು "ಯಕ್ಷಗಾನ ದಿನ" ವೆಂದು ಘೋಷಿಸಲಾಗುವುದು ?

## ಕಾರ್ಮಿಕರ ವಿವಿಧ ಬೇಡಿಕೆಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೦ (೬೫೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ವೈದ್ಯಕೀಯ ಸಹಾಯಧನ/ಪ್ರಮುಖ ಕಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದಲ್ಲಿ ಈಗ ಸಿಗುತ್ತಿರುವ ಸಹಾಯಧನಗಳು ತೀರಾ ಅತ್ಯಲ್ಪ ಹಾಗೂ ನಗಣ್ಯವಾಗಿರುವುದರಿಂದ, ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಸ್ಪತ್ರೆಯ ಚಿಕಿತ್ಸಾ ವೆಚ್ಚ ಸಂಪೂರ್ಣ ನಗದು ರಹಿತ ಸೇವೆಯ ಮೂಲಕ ಪೂರ್ಣ ಪ್ರಮಾಣದಲ್ಲಿ ಕಾರ್ಮಿಕರಿಗೆ ಲಭಿಸುವಂತೆ ಸರ್ಕಾರ ಕ್ರಮ ವಹಿಸಿದೆಯೇ ;

(ಇ) ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದ ನಂತರ ವಿಶ್ರಾಂತಿಯ ಅವಶ್ಯಕತೆ ಇದ್ದು, ಆದರೆ ಇದೀಗ ಮಂಡಳಿಯಲ್ಲಿ ಅಪಘಾತ ಪರಿಹಾರ ಮತ್ತು ಪಿಂಚಣಿಯು ಅಪಘಾತದ ನಂತರದ ವಿಶ್ರಾಂತಿಯ ಸಮಯದಲ್ಲಿ ದೊರೆಯದೆ ಇರುವುದರಿಂದ ನಿಯಮಾವಳಿಗಳಿಗೆ ಸರ್ಕಾರ ಸೂಕ್ತ ಬದಲಾವಣೆ ತರುವುದೇ ;

(ಈ) ಕಾರ್ಮಿಕರ ಬಹುಕಾಲದ ಬೇಡಿಕೆಗಳಾದ ಕಾರ್ಮಿಕರ ವೃದ್ಧಾಪ್ಯ ಪಿಂಚಣಿ, ಜೀವ ವಿಮೆ, ವಿಧವಾ ವೇತನ ಹಾಗೂ ಮರಣವಾದ ಕಾರ್ಮಿಕರ ಮಕ್ಕಳ ಹಾಗೂ ಅವಲಂಬಿತರ ಭವಿಷ್ಯಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಳ್ತಂಗಡಿ ತಾಲ್ಲೂಕಿನ ಕೃಷಿ ಕಛೇರಿಯಲ್ಲಿ ಖಾಲಿಯಿರುವ ಹುದ್ದೆಗಳು ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೧ (೬೫೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಕೃಷಿ ಇಲಾಖೆಯ ಕಛೇರಿಗೆ ಮಂಜೂರಾಗಿರುವ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆಯೆಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿಯೇ ಅತೀ ಹೆಚ್ಚು ಕೃಷಿಕರನ್ನು ಹೊಂದಿರುವ ಬೆಳ್ತಂಗಡಿ ತಾಲ್ಲೂಕಿನ ಕೃಷಿ ಇಲಾಖೆಯ ಕಛೇರಿಯಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳ ತೀವ್ರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕಛೇರಿಗೆ ಪೂರ್ಣ ಪ್ರಮಾಣದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲು ಸರ್ಕಾರ ಕ್ರಮ ವಹಿಸಿದೆಯೇ ;

(ಇ) ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಕಛೇರಿಗೆ ಮಂಜೂರಾಗಿರುವ ಎಲ್ಲಾ ಹುದ್ದೆಗಳಿಗೆ ಪೂರ್ಣಕಾಲಿಕ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಲಾಗುವುದು ?

## "ರಾಣೆಯಾರ್" ಸಮುದಾಯಕ್ಕೆ ಪರಿಶಿಷ್ಟ ಜಾತಿ/ಪಂಗಡದ ನಿಗಮದಿಂದ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೨ (೬೫೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನೇಕ ವರ್ಷಗಳಿಂದ "ರಾಣೆಯಾರ್" ಸಮುದಾಯವು ಪರಿಶಿಷ್ಟ ಜಾತಿ ಮೀಸಲಾತಿ ನಿಯಮದಡಿ ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದು, ಕಳೆದ 3–4 ವರ್ಷಗಳಿಂದ ಸದರಿ "ರಾಣೆಯಾರ್" ಸಮುದಾಯವನ್ನು ತೆಗೆದು ಹಾಕಲಾಗಿರುವುದರಿಂದ ಈ ಸಮುದಾಯಕ್ಕೆ ಯಾವುದೇ ನಿಗಮದಿಂದಲೂ ಸೌಲಭ್ಯಗಳು ದೊರೆಯದೆ, ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದ್ದಲ್ಲಿ, "ರಾಣೆಯಾರ್" ಸಮುದಾಯದ ಹೆಸರು ಈ ಹಿಂದೆ "ಅಂಬೇಡ್ಕರ್ ಅಭಿವೃದ್ಧಿ ನಿಗಮ" ದಲ್ಲಿ ದಾಖಲಾಗಿದ್ದನ್ನು ತೆಗೆದು ಹಾಕಲು ಕಾರಣಗಳೇನು ;

(ಇ) ಕೂಲಿ ಕಾರ್ಮಿಕರಾಗಿ ದುಡಿದು, ಅತ್ಯಂತ ಬಡತನದಲ್ಲಿಯೇ ಜೀವನ ಸಾಗಿಸುತ್ತಿರುವ "ರಾಣೆಯಾರ್" ಸಮುದಾಯವನ್ನು ಪರಿಶಿಷ್ಟ ಜಾತಿ/ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರುಸೇರ್ಪಡೆಗೊಳಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ ?

## ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೩ (೬೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿರುವುದರ ವಿರುದ್ಧ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಬೃಹತ್ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗಲು ಕಾರಣಗಳೇನು ; ಈ ಕುರಿತು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ನಿಯಮಾವಳಿ ಅನುಸಾರ ಸ್ಥಳಿಯವಾಗಿ ದೊರಕುವ ಪೌಷ್ಠಿಕ ಆಹಾರ ನೀಡುವ ನಿಯಮ ಇದ್ದರೂ ಅದನ್ನು ಸಂಪೂರ್ಣವಾಗಿ ಉಲ್ಲಂಘನೆ ಮಾಡಲು ಕಾರಣಗಳೇನು ;

(ಈ) ಆಹಾರ ಸರಬರಾಜು ಟೆಂಡರ್ ಪಡೆದಿರುವ ಗುತ್ತಿಗೆದಾರರು ಅವ್ಯವಹಾರ ನಡೆಸುತ್ತಿರುವ ಕುರಿತು ಪದೇ ಪದೇ ಕೇಳಿ ಬರುತ್ತಿರುವ ದೂರಿನ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಜಾತಿ ಗಣತಿ ವರದಿಯನ್ನು ಅಂಗೀಕರಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೪ (೫೬೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಾತಿಗಣತಿ ವರದಿಯನ್ನು ಸರ್ಕಾರ ಸ್ವೀಕರಿಸಿದ್ದು ಯಾವಾಗ; ಜಾತಿ ಗಣತಿ ನಡೆಸಲು ಆಗಿರುವ ವೆಚ್ಚ ಎಷ್ಟು ; ಜಾತಿ ಗಣತಿಯನ್ನು ವೈಜ್ಞಾನಿಕವಾಗಿ ನಡೆಸಲಾಗಿದೆಯೇ ; ಜಾತಿ ಗಣತಿಗಾಗಿ ಒಟ್ಟು ಎಷ್ಟು ಮನೆಗಳಿಗೆ ಭೇಟಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ವರದಿಯನ್ನು ಸರ್ಕಾರ ಅಂಗೀಕರಿಸಿದೆಯೇ ; ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಕುರಿತು ನಡೆದಿರುವ ಚರ್ಚೆ ಏನು ; ಕೈಗೊಂಡಿರುವ ತೀರ್ಮಾನವೇನು ;

(ಇ) ಜಾತಿ ಗಣತಿ ವರದಿಯು ಸ್ವೀಕಾರಕ್ಕೆ ಅರ್ಹವಲ್ಲವೆಂದೂ ಅವೈಜ್ಞಾನಿಕವೆಂದು ಸಚಿವರು, ಶಾಸಕರುಗಳು ಹಾಗೂ ಸಮಾಜದ ವಿವಿಧ ಸ್ವಾಮೀಜಿಗಳು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಜಾತಿ ಗಣತಿ ಸ್ವೀಕಾರ ಕುರಿತು ಸರ್ಕಾರದ ನಿಲುವೇನು ;

(ಈ) ರಾಜ್ಯ ಸರ್ಕಾರಗಳು ಜಾತಿ ಗಣತಿ ನಡೆಸಲು ಸಂವಿಧಾನದಲ್ಲಿ ಅವಕಾಶ ಇದೆಯೇ ; ಜಾತಿ ಗಣತಿ ಸ್ವೀಕಾರ/ಅಂಗೀಕಾರ ಕುರಿತು ನ್ಯಾಯಾಲಯ ನೀಡಿರುವ ಸೂಚನೆ ಏನು ?

## ಇ-ಸ್ವತ್ತು ವಿತರಣೆ ಆಗದೆ ತೊಂದರೆ ಆಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೫ (೫೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ತಾಲ್ಲೂಕು, ತೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಂಪುರ, ತೇಗೂರು, ಆದಿಶಕ್ತಿ ನಗರ ನಲ್ಲೂರು ಗ್ರಾಮಗಳಲ್ಲಿ ಸುಮಾರು ೪೦-೫೦ ವರ್ಷಗಳಿಂದ ಮನೆ ನಿರ್ಮಿಸಿಕೊಂಡು ವಾಸವಿರುವ ಕುಟುಂಬಗಳಿಗೆ ಇ-ಸ್ವತ್ತು ವಿತರಣೆ ಮಾಡದೇ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇ-ಸ್ವತ್ತು ವಿತರಣೆ ಮಾಡದೆ ಇರಲು ಕಾರಣಗಳೇನು ; ವಿವರ ಒದಗಿಸುವುದು ;

(ಇ) ಈ ಗ್ರಾಮಗಳಲ್ಲಿ ಇ-ಸ್ವತ್ತು ವಿತರಣೆಗೆ ಇರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಗ್ರಾಮಗಳ ಗ್ರಾಮಸ್ಥರಿಗೆ ಇ-ಸ್ವತ್ತು ವಿತರಿಸಲಾಗುವುದು ? (ವಿವರ ಒದಗಿಸವುದು)

## ಮಂಜೂರಾಗಿರುವ ಸಮುದಾಯ ಭವನಗಳನ್ನು ರದ್ದುಪಡಿಸಿರುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೬ (೫೬೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೪ ವರ್ಷದಿಂದ ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ;

(ಆ) ಎಷ್ಟು ಸಮುದಾಯ ಭವನಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವ ಯಾವ ಸಮುದಾಯ ಭವನಗಳ ಕಾಮಗಾರಿ ಆರಂಭಗೊಂಡಿದೆ ; (ವಿವರ ನೀಡುವುದು)

(ಇ) ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾಗಿದ್ದ ಎಷ್ಟು ಸಮುದಾಯ ಭವನಗಳನ್ನು ರದ್ದುಪಡಿಸಲು ಆದೇಶಿಸಲಾಗಿದೆ ;

(ಈ) ಆರ್ಥಿಕ ಇಲಾಖೆ ಒಪ್ಪಿಗೆ ಪಡೆದು ಸಮುದಾಯ ಭವನಗಳಿಗೆ ಅನುದಾನ ಮಂಜೂರು ಮಾಡಿದ್ದರೂ ಸಹ ರದ್ದುಪಡಿಸಲು ಕಾರಣಗಳೇನು ; ರದ್ದುಪಡಿಸಿರುವ ಆದೇಶವನ್ನು ಹಿಂಪಡೆದು ಮಂಜೂರಾಗಿರುವ ಸಮುದಾಯ ಭವನಗಳಿಗೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೭ (೫೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಆಯ್ಕೆಯಾದ ಗ್ರಾಮಗಳ ಅಭಿವೃದ್ಧಿಗೆ ಎಷ್ಟು ಅನುದಾನ ಒದಗಿಸಲಾಗುತ್ತಿದೆ ; ಈ ಅನುದಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನವೆಷ್ಟು ;

(ಆ) ಕಳೆದ ೫ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ PMAGY ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು ವರ್ಷವಾರು ಮಾಹಿತಿ ಒದಗಿಸಿ)

(ಇ) ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರಾಜ್ಯ ಸರ್ಕಾರದ ಪಾಲಿನ ಅನುದಾನ ಬಿಡುಗಡೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಅನುದಾನ ನೀಡದೇ ಇರಲು ಕಾರಣಗಳೇನು ಹಾಗೂ ಎಷ್ಟು ಹಣ ಬಿಡುಗಡೆಗೆ ಬಾಕಿ ಇದೆ ; (ವಿವರ ನೀಡುವುದು)

(ಈ) ಬಿಡುಗಡೆಗೆ ಬಾಕಿ ಇರುವ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೮ (೫೯೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಹಾಸ್ಟೆಲ್‌ಗಳಲ್ಲಿ ಪ್ರವೇಶ ಮಿತಿಗಿಂತ ಅಧಿಕ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರವೇಶ ಮಿತಿಯನ್ನು ಹೆಚ್ಚಿಸಲು ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಈ ಹಾಸ್ಟೆಲ್‌ಗಳ ಪ್ರವೇಶ ಮಿತಿ ಎಷ್ಟು ; ಪ್ರವೇಶ ಮಿತಿಗಿಂತ ಅಧಿಕ ವಿದ್ಯಾರ್ಥಿಗಳು ದಾಖಲಾಗುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ? (ಹಾಸ್ಟೆಲ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಗಳು ಬಳಸುತ್ತಿರುವ ತಂತ್ರಾಂಶಗಳಲ್ಲಿರುವ ಸಮಸ್ಯೆಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೯ (೫೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಗಳು ನೀಡುವ ಎಲ್ಲಾ ಸೇವೆಗಳನ್ನು ಸುಸೂತ್ರವಾಗಿ, ಪಾರದರ್ಶಕವಾಗಿ ಮತ್ತು ತ್ವರಿತವಾಗಿ ನಿರ್ವಹಿಸಲು

ಸ್ಥಾಪನೆಯಾಗಿರುವ ಬಾಪೂಜಿ ಸೇವಾ ಕೇಂದ್ರಗಳ ಪೋರ್ಟಲ್, ಮೊಬೈಲ್ ಆ್ಯಪ್ ಸೇವೆಗಳು ಮತ್ತು ಆನ್‌ಲೈನ್ ಪಾವತಿ ವ್ಯವಸ್ಥೆಗಳು ತಾಂತ್ರಿಕ ಸಮಸ್ಯೆಗಳಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ತಂತ್ರಾಂಶಗಳಲ್ಲಿ ಕಂಡುಬರುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಹಿಳೆಯರು ಮತ್ತು ಅಪ್ರಾಪ್ತರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೦ (೫೯೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧೆಡೆ ಮಹಿಳೆಯರು ಮತ್ತು ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಮತ್ತು ದೌರ್ಜನ್ಯ ಪ್ರಕರಣಗಳು ಆಗಿಂದಾಗ್ಗೆ ದಿನಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಾಲಕಿಯರ ಸುರಕ್ಷತೆಗಾಗಿ ಮತ್ತು ಅತ್ಯಾಚಾರ ಪ್ರಕರಣಗಳು ನಡೆಯದಂತೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅಂಬೇಡ್ಕರ್ ಕಾರ್ಮಿಕರ ಸಹಾಯ ಹಸ್ತ ಯೋಜನೆಯ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೧ (೬೦೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಾವ ವಲಯದ ಅಸಂಘಟಿತ ಕಾರ್ಮಿಕರು ಅಂಬೇಡ್ಕರ್ ಕಾರ್ಮಿಕರ ಸಹಾಯಹಸ್ತ ಯೋಜನೆಯಡಿ ನೆರವನ್ನು ಪಡೆಯಬಹುದಾಗಿದೆ ; ಈ ಯೋಜನೆಯಡಿ ನೋಂದಾಯಿಸಿಕೊಳ್ಳಲು ರೂಪಿಸಿರುವ ಮಾರ್ಗಸೂಚಿಗಳೇನು ;

(ಆ) ಎಷ್ಟು ಅಸಂಘಟಿತ ಕಾರ್ಮಿಕರನ್ನು ಈ ಯೋಜನೆಯಡಿ ತರಲು ಉದ್ದೇಶಿಸಲಾಗಿದೆ ;

(ಇ) ಈ ಕಾರ್ಮಿಕರಿಗೆ ಒದಗಿಸಲು ಉದ್ದೇಶಿಸಿರುವ ಸೌಲಭ್ಯಗಳೇನು ; ಈ ಸೌಲಭ್ಯಗಳನ್ನು ಒದಗಿಸಲು ಮೀಸಲಿಟ್ಟಿರುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಇ–ಸ್ವತ್ತು ತಂತ್ರಾಂಶದ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೨ (೬೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇ–ಸ್ವತ್ತು ತಂತ್ರಾಂಶದಲ್ಲಿ ಇ–ಸ್ವತ್ತು ನಮೂನೆಗಳ ವಿತರಣೆಯನ್ನು ಯಾವ ನಿಯಮದ ಅಡಿಯಲ್ಲಿ ಕಾರ್ಯಗತಗೊಳಿಸಲಾಗುತ್ತದೆ ;

(ಆ) ಇ–ಸ್ವತ್ತು ತಂತ್ರಾಂಶದಲ್ಲಿ ಹಾಗೂ ವಿತರಿಸಲಾಗುವ ನಮೂನೆಗಳ ಆಧಾರದಲ್ಲಿ ಆಸ್ತಿಗಳ ನೋಂದಣಿ ಮತ್ತು ಹಕ್ಕು ಬದಲಾವಣೆಗೆ ಇಲಾಖೆಯ ನಿಯಮಗಳಲ್ಲಿ ಅವಕಾಶವಿದೆಯೇ ;

(ಇ) ಇ–ಸ್ವತ್ತು ತಂತ್ರಾಂಶದಲ್ಲಿ ಇಲ್ಲಿಯವರೆಗೆ ಎಷ್ಟು ಕ್ರಮಬದ್ಧ ಮತ್ತು ಎಷ್ಟು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ–ಸ್ವತ್ತು ನಮೂನೆಗಳನ್ನು ವಿತರಿಸಲಾಗಿದೆ ;

(ಈ) ನಾಗರೀಕ ಸೌಲಭ್ಯ ನಿವೇಶನ, ಉದ್ಯಾನವನಗಳನ್ನು ಕಾಯ್ದಿರಿಸದೆ ಅನಧಿಕೃತವಾಗಿ ವಿನ್ಯಾಸ/ನಕ್ಷೆ ಅನುಮೋದಿಸಿದ ಅನಧಿಕೃತ ಬಡಾವಣೆಗಳ ನಿವೇಶನಗಳಿಗೆ ಇ–ಸ್ವತ್ತು ನಮೂನೆ ವಿತರಣೆ

ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರಗಳನ್ನು ನೀಡುವುದು)

(ಉ) ಇ-ಸ್ವತ್ತು ತಂತ್ರಾಂಶದಲ್ಲಿ ಸುಳ್ಳು ದಾಖಲೆ ಪ್ರತಿಗಳನ್ನು ಅಪ್ ಲೋಡ್ ಮಾಡಿ ಇ-ಸ್ವತ್ತು ನಮೂನೆಗಳನ್ನು ವಿತರಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಮಾಹಿತಿ ನೀಡುವುದು)

## ಆಸ್ತಿ ತೆರಿಗೆ ಪಾವತಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೩ (೬೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಲವಾರು ವರ್ಷಗಳಿಂದ ಕೆಐಎಡಿಬಿ, ಕೆಎಸ್‌ಎಸ್‌ಐಡಿಸಿ, ಇತರೆ ಕೈಗಾರಿಕೆ, ಶೈಕ್ಷಣಿಕ ಸಂಸ್ಥೆಗಳು ವಾಣಿಜ್ಯ ಸಂಸ್ಥೆಗಳು ಸಂಬಂಧಿಸಿದ ಗ್ರಾಮ ಪಂಚಾಯಿತಿಗೆ ಆಸ್ತಿ ತೆರಿಗೆ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಸ್ತಿ ತೆರಿಗೆ ಪಾವತಿಸದೇ ಇರುವ ಕೆಐಎಡಿಬಿ, ಕೆಎಸ್‌ಎಸ್‌ಐಡಿಸಿ, ಇತರೆ ಕೈಗಾರಿಕೆ, ಶೈಕ್ಷಣಿಕ ಸಂಸ್ಥೆಗಳು, ವಾಣಿಜ್ಯ ಸಂಸ್ಥೆಗಳು ಎಷ್ಟು ; ಹಾಗೂ ಸದರಿ ಸಂಸ್ಥೆಗಳಿಂದ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಬರಬೇಕಾದ ಆಸ್ತಿ ತೆರಿಗೆ ಎಷ್ಟು ;

(ಆ) ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಪಂಚತಂತ್ರ ತಂತ್ರಾಂಶದ ಮೂಲಕ ಆಸ್ತಿ ತೆರಿಗೆ ಲೆಕ್ಕಾಚಾರ ಮಾಡಿದ ಆಸ್ತಿ ತೆರಿಗೆ ಬೇಡಿಕೆಯನ್ನು ನೀಡದೇ ಕೈಬರಹದ ಮೂಲಕ ಅಧಿಕ ಆಸ್ತಿ ತೆರಿಗೆ ಬೇಡಿಕೆ ನೀಡುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಿಯಮಗಳಿಗನುಸಾರವಾಗಿ ಆಸ್ತಿ ತೆರಿಗೆ ವಸೂಲಾತಿಗೆ ಸರ್ಕಾರವು ಕೈಗೊಂಡ ಕ್ರಮಗಳೇನು ?

## ನಿರ್ವಹಿಸಬೇಕಾದ ರಿಜಿಸ್ಟರ್‌ಗಳ ಕುರಿತು

**ಶ್ರೀ ಎಸ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೪ (೬೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಗಳಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, ೨೦೦೬ರ ನಿಯಮ ೨೮, ನಿಯಮ ೨೮(೧), ನಿಯಮ ೩೦(೧) ಮತ್ತು ನಿಯಮ ೩೦(೭)ರಂತೆ ನಿರ್ವಹಿಸಬೇಕಾದ ರಿಜಿಸ್ಟರ್‌ಗಳು ಯಾವುವು ;

(ಆ) ನಿಯಮಗಳಿಗನುಸಾರವಾಗಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಆಸ್ತಿಗಳ ವಿವರ ಮತ್ತು ತೆರಿಗೆಯ ವಿವರಗಳನ್ನು ಕಾಲಕಾಲಕ್ಕೆ ಸಂಬಂಧಿಸಿದ ರಿಜಿಸ್ಟರ್‌ಗಳಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆಯೇ ; ನಿರ್ವಹಿಸುತ್ತಿದ್ದಲ್ಲಿ, ಗ್ರಾಮ ಪಂಚಾಯಿತಿಯ ದಾಖಲೆಗಳಲ್ಲಿ ಇರುವ ಆಸ್ತಿಗಳು ಮತ್ತು ಆಸ್ತಿ ತೆರಿಗೆ ಎಷ್ಟು ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಪಂಚತಂತ್ರ ತಂತ್ರಾಂಶದಲ್ಲಿ ಇರುವ ಆಸ್ತಿಗಳ ಮತ್ತು ಆಸ್ತಿ ತೆರಿಗೆ ಎಷ್ಟು ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಈ) ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಿಸುವ ನಿಯಮ-೨೮(೧) ಆಸ್ತಿ ವಿವರಗಳ ರಿಜಿಸ್ಟರ್‌ಗಳಲ್ಲಿ ಕಂಡು ಬಂದಿರುವ ಕ್ರಮಬದ್ಧ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳು ಎಷ್ಟು ? (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

## ಗ್ರಾಮ ಪಂಚಾಯಿತಿಯಲ್ಲಿ ತೆರಿಗೆ ವಸೂಲಾತಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೫ (೬೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ, ದರ ಮತ್ತು ಶುಲ್ಕಗಳನ್ನು ಕ್ರಮಬದ್ಧವಾಗಿ ವಸೂಲಿ ಮಾಡಲು ನಿಯಮಗಳನ್ನು ರಚಿಸಲಾಗಿದೆಯೇ ; ನಿಯಮಗಳನ್ನು ರಚಿಸಿದ್ದಲ್ಲಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ವಾಣಿಜ್ಯ ಚಟುವಟಿಕೆಗಳಿಗೆ ವಿಧಿಸಲಾಗುತ್ತಿರುವ ಲೈಸೆನ್ಸ್ ಶುಲ್ಕ ಎಷ್ಟು ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಲ್ಲಿ ಸಂತೆಹರಾಜು, ವಾಣಿಜ್ಯ ಮಳಿಗೆ ಬಾಡಿಗೆ/ಗುತ್ತಿಗೆ, ಅನುಪಯುಕ್ತ ಸಾಮಗ್ರಿಗಳ ಹರಾಜುಗಳನ್ನು ಯಾವ ನಿಯಮಗಳಿಗನುಸಾರವಾಗಿ ಕಾರ್ಯಗತ ಗೊಳಿಸಲಾಗುತ್ತಿದೆ ;

(ಇ) ಪ್ರಸ್ತುತ ಇರುವ ನಿಯಮಗಳನ್ನು ಪುನರ್ ರಚಿಸಲು ಅಥವಾ ತಿದ್ದುಪಡಿ ಮಾಡಲು ಸರ್ಕಾರವು ಕ್ರಮ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ನಿಯಮಗಳನ್ನು ತಿದ್ದುಪಡಿ ಮಾಡಲಾಗುವುದು ; (ವಿವರ ನೀಡುವುದು)

(ಈ) ಇಲಾಖೆಯ ಅಧಿನಿಯಮ, ನಿಯಮಗಳನ್ನು ಪಾಲಿಸದೇ ಸ್ವವಿವೇಚನೆಯಂತೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಆರ್.ಡಿ.ಪಿ.ಆರ್. ಇಲಾಖೆಯಲ್ಲಿ ಅಂಗವಿಕಲರುಗಳಿಗೆ ಶೇ.೫ರಷ್ಟು ಮೀಸಲಿಟ್ಟಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೬ (೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತಿ/ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯಿತಿಗಳ ಮಟ್ಟದಲ್ಲಿ ದಿವ್ಯಾಂಗರುಗಳಿಗೆ ನೀಡಲಾಗುತ್ತಿರುವ ಸವಲತ್ತುಗಳೇನು ; ಆರ್.ಪಿ.ಡಿ. ಆಕ್ಟ್ - ೨೦೧೬ರ ಪ್ರಕಾರ ಬಜೆಟ್‌ನ ಶೇ.೫ರಷ್ಟು ಅನುದಾನವನ್ನು ಪೂರ್ಣವಾಗಿ ಬಳಸಿಕೊಳ್ಳಲಾಗುತ್ತಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಯಾವ ಯಾವ ಕೆಲಸ ಕಾಮಗಾರಿಗಳಿಗೆ ಒದಗಿಸಲಾಗಿದೆ ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಅಂಗವಿಕಲರುಗಳಿಗೆ ಸಿಗುವ ಸವಲತ್ತುಗಳ ಬಗ್ಗೆ ಗ್ರಾಮ ಪಂಚಾಯಿತಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಮಟ್ಟದಲ್ಲಿ ಪ್ರಚಾರ ನಡೆಸಲು ಸರ್ಕಾರದ ಯಾವುದಾದರೂ ಆದೇಶಗಳು ಇದೆಯೇ ; ಹಾಗಿದ್ದಲ್ಲಿ, ಅದರ ಪ್ರತಿಯನ್ನು ಒದಗಿಸುವುದು ;

(ಇ) ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಅಂಗವಿಕಲರುಗಳಿಗೆ ಸಿಗುವ ಸವಲತ್ತುಗಳ ಬಗ್ಗೆ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಆವರಣಗಳಲ್ಲಿ ನಾಮ ಫಲಕಗಳನ್ನು ಅಳವಡಿಸಲು ಇರುವ ತೊಂದರೆಗಳೇನು; ಈ ಬಗ್ಗೆ ಸೂಚನಾ ಫಲಕಗಳನ್ನು ಅಳವಡಿಸಲು ಆದೇಶವನ್ನು

ಹೊರಡಿಸಲಾಗಿದೆಯೇ ; ಈ ಸವಲತ್ತುಗಳ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆಯೇ ? (ಮಾಹಿತಿಯೊಂದಿಗೆ ವಿವರಗಳನ್ನು ಒದಗಿಸುವುದು)

## ಅಂಗವಿಕಲರುಗಳಿಗೆ ವಸತಿಯುತ ಕಲ್ಯಾಣ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೭ (೫೬೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದಿಂದ ಅಂಗವಿಕಲರುಗಳಿಗೆ ವಸತಿ ಮತ್ತು ಕಲ್ಯಾಣ ಕೇಂದ್ರಗಳನ್ನು ತೆರೆಯಲಾಗಿದೆಯೇ ; ವಯಸ್ಸಾದ ನಿರ್ಗತಿಕ ಅಂಗವಿಕಲರುಗಳಿಗೆ ಭಿಕ್ಷುಕ ಕಾಲೋನಿಯ ರೀತಿಯಲ್ಲಿ ಅಂಗವಿಕಲರ ವಸತಿ ಕಲ್ಯಾಣ ಕೇಂದ್ರಗಳನ್ನು ತೆರೆಯಲು ಸರ್ಕಾರ ಚಿಂತನೆ ನಡೆಸಿದೆಯೇ ; (ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ವಯಸ್ಸಾದ ನಂತರ ಹಾರೈಕೆ ಮಾಡಲು ಯಾರು ಇಲ್ಲದ ಅಂಗವಿಕಲರುಗಳಿಗೆ ಪ್ರತ್ಯೇಕ ವಸತಿ ಕಲ್ಯಾಣ ಕೇಂದ್ರಗಳನ್ನು ತೆರೆದು ಅವರುಗಳಿಗೆ ಆಸರೆ ಒದಗಿಸಲು ಸರ್ಕಾರದ ಚಿಂತನೆಗಳೇನು ?

## ಕೇಂದ್ರ ಸರ್ಕಾರದ "Accessible India Campaign" ಕಾರ್ಯಕ್ರಮದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೮ (೫೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದ "Accessible India Campaign" ಕಾರ್ಯಕ್ರಮದಲ್ಲಿ ರಾಜ್ಯಕ್ಕೆ ನೀಡಲಾದ ಅನುದಾನ ಎಷ್ಟು ; ಈ ಕಾರ್ಯಕ್ರಮದಲ್ಲಿ ಕೈಗೊಳ್ಳಲಾದ ಕೆಲಸ ಕಾರ್ಯಗಳೇನು ;

(ಆ) ಈ ಕೇಂದ್ರ ಸರ್ಕಾರದ "Accessible India Campaign" ಕಾರ್ಯಕ್ರಮವನ್ನು ಜಾರಿಗೊಳಿಸಲು ನೇಮಿಸಿದ ಸಂಸ್ಥೆ ಯಾವುದು ; ಯಾವಾಗ ನೇಮಿಸಲಾಯಿತು ;

(ಇ) "Accessible India Campaign" ಕಾರ್ಯಕ್ರಮದಲ್ಲಿ ಬಂದ ಅನುದಾನವನ್ನು ಜಿಲ್ಲೆಗಳಿಗೆ ಹಂಚಿದ ವಿವರಗಳು ಮತ್ತು ಜಿಲ್ಲೆಗಳಲ್ಲಿ ನಡೆಸಿದ ಕೆಲಸ ಕಾರ್ಯಗಳ ವಿವರಗಳ ಮಾಹಿತಿಯನ್ನು ಒದಗಿಸುವುದು ?

## ರಾಜ್ಯದಲ್ಲಿರುವ ಬಾಲಾಪರಾಧಿಗಳ ಸಂಖ್ಯೆ ಹಾಗೂ ಅವರ ಪ್ರಕರಣಗಳು ಬಾಕಿ ಉಳಿದಿರುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರ ಕ್ಷೇತ್ರ) :-**

೫೭೯ (೬೯೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ದಾಖಲಾದ ಬಾಲಾಪರಾಧಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಇತ್ತೀಚೆಗೆ ಕೆಲವೊಂದು ದಿನ ಪತ್ರಿಕೆಗಳಲ್ಲಿ ಬಾಲಾಪರಾಧಿಗಳ ವಿಚಾರಣೆಯು ಕಾಲಮಿತಿ ಒಳಗೆ ಮುಗಿಯದೆ ಇರುವುದರಿಂದ ಬಾಲ ಮಂದಿರಗಳೆಲ್ಲವು ಭರ್ತಿ ಆಗಿರುತ್ತವೆ ಎಂದು ವರದಿ ಆಗಿರುವುದು ಇದು ನಿಜವೇ ; (ವಿವರ ನೀಡುವುದು)

(ಇ) ಬಾಲಾಪರಾಧಿಗಳ ವಿಚಾರಣೆ ನಡೆಸಲು ಎಲ್ಲಾ ಜಿಲ್ಲೆಗಳಲ್ಲಿ ಬಾಲನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿ ಪರಿಪೂರ್ಣವಾಗಿ ರಚನೆ ಆಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಮಕ್ಕಳ ಕಲ್ಯಾಣ ಸಮಿತಿ ಪರಿಪೂರ್ಣವಾಗಿ ರಚನೆಯಾಗದ ಕಾರಣ ಸಾಕಷ್ಟು ಪ್ರಕರಣಗಳು ಬಾಕಿ ಉಳಿದಿದೆ ಎಂದು ಮತ್ತು ನ್ಯಾಯಾಯುತವಾಗಿ ನಿರ್ಣಯಗಳು ಆಗುತ್ತಿಲ್ಲ ಎಂಬ ಆಪಾದನೆಗಳು ಇರುವುದು ನಿಜವೇ ? (ಮಾಹಿತಿ ನೀಡುವುದು)

## ಗ್ರಾಮ ಪಂಚಾಯತಿ ಸದಸ್ಯರ ನ್ಯಾಯಯುತ ಬೇಡಿಕೆಗಳ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಕ್ಷೇತ್ರ) :-**

೫೮೦ (೫೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿ ಸದಸ್ಯರ ಮತ್ತು ಅಧ್ಯಕ್ಷರುಗಳ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಕೇರಳ ಮಾದರಿಯಲ್ಲಿ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ;

(ಇ) ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ/ಸದಸ್ಯರಿಗೆ ಉಚಿತ ಬಸ್‌ಪಾಸ್, ಪಿಂಚಣಿ, ಟೋಲ್‌ಫ್ರೀ ಪಾಸ್‌ಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಈ ಬೇಡಿಕೆಗಳನ್ನು ಈಡೇರಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ?

## ಹದಿನೈದನೆಯ ಹಣಕಾಸು ಯೋಜನೆಯ ಅನುದಾನ ಬಿಡುಗಡೆ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯಸಂಸ್ಥೆಗಳ ಕ್ಷೇತ್ರ) :-**

೫೮೧ (೫೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ೧೫ನೇ ಹಣಕಾಸು ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಯಾವುದೇ ಅನುದಾನದ ಕಂತುಗಳು ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅನುದಾನ ಬಿಡುಗಡೆ ಮಾಡಲು ಹಣಕಾಸಿನ ಕೊರತೆ/ತೊಂದರೆ ವಿನಾದರೂ ಇದೆಯೇ ; ಇಲ್ಲದಿದ್ದರೆ, ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು ; (ದಿವರ ನೀಡುವುದು)

(ಇ) ೧೫ನೇ ಹಣಕಾಸಿನ ಯೋಜನೆಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಪ್ರಸ್ತುತ ಆರ್ಥಿಕ ವರ್ಷದಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ಮತ್ತು ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೨ (೬೪೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆಯಾಗುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ಮತ್ತು ಅನುದಾನ ಬಿಡುಗಡೆಗೆ ಹಣಕಾಸಿನ ಕೊರತೆ ಏನಾದರೂ ಇದೆಯೇ ;

(ಆ) ಕಳೆದ 5 ವರ್ಷದಿಂದ ಪ್ರಸ್ತುತ ಆರ್ಥಿಕ ಸಾಲಿನಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ ಮತ್ತು ಬಾಗಲಕೋಟೆ ಮತ ಕ್ಷೇತ್ರಗಳ ವ್ಯಾಪ್ತಿಯ ಶಾಸಕರುಗಳಿಗೆ

ಬಿಡುಗಡೆಯಾದ ಅನುದಾನ ಎಷ್ಟು ; (ಕೈಗೊಂಡ ಕಾಮಗಾರಿಗಳ ವಿವರಗಳನ್ನು ಶಾಸಕರುವಾರು ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಕಳೆದ 5 ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳಾವುವು ? (ಮಾಹಿತಿಯನ್ನು ನೀಡುವುದು)

## MGNREGA ಯೋಜನೆಯ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)) :-**

೫೮೩ (೬೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ MGNREGA ಯೋಜನೆಯಡಿ ಕೈಗೊಂಡ ಕಾಮಗಾರಿಗಳಿಗೆ ಕೂಲಿ ಪಾವತಿ ಮತ್ತು ಸಾಮಗ್ರಿ ವೆಚ್ಚ ಪಾವತಿಗೆ ಹಣಕಾಸಿನ ಕೊರತೆ ಇದೆಯೇ ; (ವಿವರ ನೀಡುವುದು)

(ಆ) ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನಲ್ಲಿ ಸದರಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವಿವರಗಳನ್ನು ನೀಡುವುದು)

(ಇ) ೨೦೨೩-೨೪ ಹಾಗೂ ೨೦೨೪-೨೫ನೇ ಸಾಲಿನ MGNREGA ಈ ಯೋಜನೆಯಡಿಯಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಕೈಗೊಂಡ ಕಾಮಗಾರಿಗಳಾವುವು ; (ಪ್ರಗತಿ ವಿವರಗಳನ್ನು ನೀಡುವುದು)

(ಈ) ಈ ಯೋಜನೆಯಡಿಯಲ್ಲಿ ಪ್ರಸ್ತುತ ಆರ್ಥಿಕ ಸಾಲಿನಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಬಿಡುಗಡೆಯಾದ ಕೂಲಿಯ ವೆಚ್ಚ ಮತ್ತು ಸಾಮಗ್ರಿ ವೆಚ್ಚದ ಮೊತ್ತ ಎಷ್ಟು ? (ಅನುದಾನದ ವಿವರಗಳನ್ನು ಗ್ರಾಮ ಪಂಚಾಯಿತಿವಾರು ನೀಡುವುದು)

## ಮಹಿಳಾ ಮತ್ತು ಮಕ್ಕಳ ಇಲಾಖೆಯ ಅನುದಾನ ಬಳಕೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೮೪ (೬೮೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಮಂಜೂರಾಗಿದೆ ; ಆ ಪೈಕಿ ಬಳಕೆಯಾದ ಅನುದಾನ ಎಷ್ಟು ; (ಯೋಜನಾವಾರು ಸಮಗ್ರ ದಾಖಲಾತಿಯೊಂದಿಗೆ ಮಾಹಿತಿ ಒದಗಿಸುವುದು)

(ಆ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕರ ಕಛೇರಿ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಮಹಿಳಾ ಅಭಿವೃದ್ಧಿ ನಿಗಮ, ಬಾಲ ನ್ಯಾಯ ಮಂಡಳಿ ಹಾಗೂ ಮಕ್ಕಳ ರಕ್ಷಣಾ ಘಟಕ, ಬಾಲಕರ/ಬಾಲಕಿಯರ ಬಾಲ ಮಂದಿರ ವಸತಿ ನಿಲಯದಲ್ಲಿ ಮಂಜೂರಾದ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ತಾಯಿ ಮತ್ತು ಮಗುವಿನಲ್ಲಿ ಅಪೌಷ್ಠಿಕತೆ ನಿವಾರಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; ಇದಕ್ಕಾಗಿ ಸರ್ಕಾರ ಒದಗಿಸಿರುವ ಅನುದಾನ ಎಷ್ಟು ಹಾಗೂ ಖರ್ಚು ಮಾಡಲಾದ ಅನುದಾನ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರಸಕ್ತ ವರ್ಷ ರಾಜ್ಯದಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲಾಗಿದ್ದು, ಮುಂದಿನ ದಿನಗಳಲ್ಲಿ ಅಂಗನವಾಡಿ ಹಾಗೂ ಬಾಲ ಮಂದಿರಗಳನ್ನು ಬಂದ್ ಮಾಡುವ ಉದ್ದೇಶವಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಕೃಷಿ ಕಾರ್ಮಿಕರ ವಿಷಯದ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೫ (೬೮೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ಕೂಲಿ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಗಳನ್ನು ಒದಗಿಸುವುದು)

(ಆ) ಈ ಕೃಷಿ ಕೂಲಿ ಕಾರ್ಮಿಕರ ಜೀವನ ಭದ್ರತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇವರುಗಳಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು: ಇದ್ದಲ್ಲಿ ಅದರ ಸಾಧಕ– ಬಾಧಕಗಳೇನು ; (ವಿವರ ಒದಗಿಸುವುದು)

(ಈ) ಈ ಕೃಷಿ ಕೂಲಿ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸರ್ಕಾರದಿಂದ ಜಾರಿಯಲ್ಲಿರುವ ಯೋಜನೆಗಳು ಯಾವುವು ; ಹಾಗೂ ಇಂತಹ ಎಷ್ಟು ಮಕ್ಕಳು ಶಾಲೆಗೆ ದಾಖಲಾಗಿದ್ದಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಹೊರಗುತ್ತಿಗೆ ಕಾರ್ಮಿಕರ ವಿಷಯದ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೬ (೬೮೬) ಮಾನ್ಯ ಕಾರ್ಮಿಕ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಸಮಿತಿ ರಚನೆಯಾಗಿದ್ದು ರಾಜ್ಯದಲ್ಲಿ ಎಷ್ಟು ಹೊರಗುತ್ತಿಗೆ ಕಾರ್ಮಿಕರು ನೇಮಕಗೊಂಡದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ವಿಭಾಗದಲ್ಲಿ ಹೊರಗುತ್ತಿಗೆ ಕಾರ್ಮಿಕರ ಸೇವೆಯನ್ನು ಒದಗಿಸುವ ಸೊಸೈಟಿಯನ್ನು ರಚಿಸಲಾಗಿದೇಯೇ ; ರಚಿಸಿದಲ್ಲಿ ನೊಂದಾಯಿತ ಪಲಾನುಭವಿಗಳು ಎಷ್ಟು ;

(ಇ) ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಒಟ್ಟು ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಈ) ಸಂಘಟಿತ ಕಾರ್ಮಿಕರಿಗೆ ಗುರುತಿನ ಕಾರ್ಡ್ ವಿತರಣೆ ಮಾಡಿದ್ದು ಅದರ ಸದುಪಯೋಗ ಪಡೆದ ಫಲಾನುಭವಿಗಳು ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಜಲಧಾರೆ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಶರಣಗೌಡ ಬಯ್ಯಪುರ (ಸ್ಥಳೀಯಸಂಸ್ಥೆಗಳ ಕ್ಷೇತ್ರ) :-**

೫೮೭ (೬೧೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ರಾಯಚೂರು ಜಿಲ್ಲೆಯಲ್ಲಿ ಜಲಧಾರೆ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ;

(ಆ) ಈ ಜಲಧಾರೆ ಯೋಜನೆಯಡಿ ಎಷ್ಟು ಹಳ್ಳಿಗಳಿಗೆ ಕುಡಿಯುವ ನೀರು ಒದಗಿಸಲು ಉದ್ದೇಶಿಸಲಾಗಿದೆ ; ಸದರಿ ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು ಹಾಗೂ ಸದರಿ ಯೋಜನೆಯ ಪ್ರಸ್ತುತ ನೈಜ ವರದಿಯನ್ನು ನೀಡುವುದು ;

(ಇ) ರಾಯಚೂರು ಜಿಲ್ಲೆಯಲ್ಲಿ ಜಲಧಾರೆ ಯೋಜನೆಗೆ ನಿಗಧಿಪಡಿಸಲಾದ ಅಂದಾಜು ಅನುದಾನವೆಷ್ಟು ? (ವಿವರಿಸುವುದು)

## ಗೃಹಲಕ್ಷ್ಮೀ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನ ಸಭೆಯಿಂದ ಚುನಾಯಿತರಾದವರು) :-**

೫೮೮ (೬೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹಲಕ್ಷ್ಮೀ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಈ ಯೋಜನೆಯಡಿಯಲ್ಲಿ ಎಷ್ಟು ಮಂದಿ

ಫಲಾನುಭವಿಗಳಿಗೆ ಎಷ್ಟು ಹಣ ಸಂದಾಯ ಆಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನವೆಂಬರ್-೨೦೨೪ರ ಅಂತ್ಯಕ್ಕೆ ಎಷ್ಟು ಮಂದಿ ಗೃಹಲಕ್ಷ್ಮೀ ಯೋಜನೆ ಫಲಾನುಭವಿಗಳಿಗೆ ಎಷ್ಟು ತಿಂಗಳ, ಎಷ್ಟು ಹಣ ಬಾಕಿ ಇದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಅನರ್ಹ ಫಲಾನುಭವಿಗಳನ್ನು ಗುರುತಿಸಲಾಗಿದೆ ; ಯಾವ ಮಾನದಂಡಗಳ ಆಧಾರದ ಮೇಲೆ ಅನರ್ಹರೆಂದು ಗುರುತಿಸಲಾಗಿದೆ ;

(ಈ) ಇತ್ತೀಚೆಗೆ ಕೆಲವು ಬಿಪಿಎಲ್ ಕಾರ್ಡುಗಳು ರದ್ದಾಗಿದ್ದು, ಅದರ ಆಧಾರದ ಮೇಲೆ ಎಷ್ಟು ಮಂದಿಗೆ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳು ಅನರ್ಹರಾಗಿದ್ದಾರೆ ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಮೊಬೈಲ್ ಟವರ್‌ಗಳಿಗೆ ವಿಧಿಸುವ ತೆರಿಗೆ ಬಗ್ಗೆ

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೯ (೬೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಮೊಬೈಲ್ ಟವರ್‌ಗಳಿವೆ ; ಅವು ಯಾವ ಯಾವ ಕಂಪನಿಗಳಿಗೆ ಸೇರಿವೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಮೊಬೈಲ್ ಟವರ್‌ಗಳಿಂದ ತೆರಿಗೆ ರೂಪದಲ್ಲಿ ಗ್ರಾಮ ಪಂಚಾಯಿತಿಗಳಿಗೆ ಬರುವ ಆದಾಯ ಎಷ್ಟು ಹಾಗೂ ಯಾವ ಮಾನದಂಡಗಳ ಆಧಾರದ ಮೇಲೆ ತೆರಿಗೆಯನ್ನು ವಿಧಿಸಲಾಗುತ್ತಿದೆ ;

ತೆರಿಗೆಗೆ ಉಪಕರಗಳನ್ನು ಸೇರಿಸಲಾಗುತ್ತಿದೆಯೇ ; ಸೇರಿಸದಿದ್ದಲ್ಲಿ ಕಾರಣಗಳೇನು (ವಿವರ ನೀಡುವುದು)

(ಇ) ಮೊಬೈಲ್ ಟವರ್‌ಗಳ ನಿಯಂತ್ರಣಕ್ಕೆ ಕರ್ನಾಟಕ ಪಂಚಾಯತ್ ರಾಜ್ ಮತ್ತು ಗ್ರಾಮಸ್ವರಾಜ ಅಧಿನಿಯಮದಲ್ಲಿ ಅವಕಾಶವಿದೆಯೆ ; ಅದಕ್ಕೆ ಸಂಬಂಧಿಸಿದಂತೆ ಕರಡು ನೀತಿಯನ್ನು ಯಾವಾಗ ಪ್ರಕಟಿಸಲಾಗಿದೆ ; ಪ್ರಕಟಿಸದಿದ್ದಲ್ಲಿ ಕಾರಣಗಳೇನು ;

(ಈ) ೨೦೧೫ ರಿಂದ ಇಲ್ಲಿಯವರೆಗೆ ಮೊಬೈಲ್ ಟವರ್‌ಗಳಿಂದ ಗ್ರಾಮ ಪಂಚಾಯಿತಿಗಳಿಗೆ ಬರಬೇಕಾದ ಬಾಕಿ ಎಷ್ಟು ; ಬಾಕಿ ಇರಲು ಕಾರಣಗಳೇನು ; ಹಾಗೂ ವಸೂಲಿ ಮಾಡಲು ಇಲಾಖೆ ಕೈಗೊಂಡಿರುವ ಕ್ರಮಗಳಾವುವು ; ಮಾಹಿತಿ ನೀಡುವುದು ; (ತಾಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯಾದ್ಯಂತ ಮೊಬೈಲ್ ಟವರ್‌ಗಳ ಏಕರೂಪ ತೆರಿಗೆಯನ್ನು ಸಂಗ್ರಹಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ?

## ಹಿಂದುಳಿದ ತಾಲ್ಲೂಕುಗಳಿಗೆ ಕೃಷಿ ಇಲಾಖೆಯ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು)** :-

೫೯೦ (೬೯೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪–೨೫ನೇ ಸಾಲಿನಲ್ಲಿ ದಿ: ಡಾ॥ ಡಿ.ಎಂ. ನಂಜುಂಡಪ್ಪ ವರದಿಯನ್ವಯ ವಿಶೇಷ ಅಭಿವೃದ್ಧಿ ಯೋಜನೆಯಡಿ ಮಹತ್ವಾಕಾಂಕ್ಷಿ ತಾಲ್ಲೂಕುಗಳಿಗೆ ಕೃಷಿ ಇಲಾಖೆಗೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ, ಕೃಷಿ ವಿಕಾಸ ಯೋಜನೆ ಮತ್ತು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಗಳಿಗೆ ಮೀಸಲಿರಿಸಿದ ಹಾಗೂ ಬಿಡುಗಡೆ ಆದ ಅನುದಾನ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನವನ್ನು ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ತಾಲ್ಲೂಕುಗಳಿಗೆ ಕೃಷಿ ಆಯುಕ್ತರಿಂದ ಸಲ್ಲಿಸಿರುವ ಕ್ರಿಯಾ ಯೋಜನೆಗಳಾವುವು ? (ತಾಲ್ಲೂಕುವಾರು ಪ್ರತ್ಯೇಕವಾಗಿ ಪಟ್ಟಿ ನೀಡುವುದು)

## ರಾಜ್ಯದಲ್ಲಿ ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆ ನಡೆಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೫೯೧ (೭೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಯನ್ನು ನಡೆಸದೇ ಇರಲು ಕಾರಣವೇನು ; ಚುನಾವಣೆ ನಡೆಸದಿದ್ದರೆ ಅಧಿಕಾರ ವಿಕೇಂದ್ರೀಕರಣ ಆಶಯು ಈಡೇರಿದಂತಾಗುತ್ತದೆಯೇ ; ಚುನಾವಣೆಯನ್ನು ನಡೆಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಆ) ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಸದಸ್ಯರ ಪ್ರಮುಖ ಕರ್ತವ್ಯಗಳೇನು ;

(ಇ) ಸರ್ಕಾರವು ತಾಲ್ಲೂಕು ಪಂಚಾಯಿತಿಯನ್ನೇ ರದ್ದುಪಡಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆಯೇ ;

(ಈ) ಯಾವ ಕಾಲಮಿತಿಯಲ್ಲಿ ಈ ಚುನಾವಣೆಗಳನ್ನು ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೫೯೨ (೭೦೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ವರ್ಷದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಪೂರ್ಣ ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಎಷ್ಟು ಮೊತ್ತದ ಹಣವನ್ನು ಕಾಮಗಾರಿಗೆ ವಿನಿಯೋಗಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕದ ಭಾಗದ ಜಿಲ್ಲೆಗಳಿಗೆ ಕಳೆದ ಒಂದು ವರ್ಷದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಬಿಡುಗಡೆಯಾದ ಮೊತ್ತವೆಷ್ಟು ? (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತ ಐ.ಎ.ಎಸ್. ಕೆ.ಎ.ಎಸ್., ತರಬೇತಿ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೫೯೩ (೭೦೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರತಿ ವರ್ಷ ಐ.ಎ.ಎಸ್, ಕೆ.ಎ.ಎಸ್, ಬ್ಯಾಂಕಿಂಗ್ ಸೇರಿದಂತೆ ವಿವಿಧ ಹುದ್ದೆಗಳಿಗೆ ನೀಡಲಾಗುತ್ತಿರುವ ಪೂರ್ವಭಾವಿ ಪರೀಕ್ಷೆಯ ಉಚಿತ ತರಬೇತಿಯು ಇತರೆ ಇಲಾಖೆಗಳಿಗಿಂತ ಪ್ರತಿ ಬಾರಿ ವಿಳಂಬವಾಗುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಪ್ರಕ್ರಿಯೆ ಪ್ರತಿ ಬಾರಿ ವಿಳಂಬವಾಗಲು ಕಾರಣವೇನು ; ಈ ತರಬೇತಿ ನೀಡಲು ಇಲಾಖೆಯಲ್ಲಿ ಅನುದಾನದ ಕೊರತೆ ಇದೆಯೇ ; (ಈ ಕುರಿತು ಸ್ಪಷ್ಟನೆಯನ್ನು ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಇಲಾಖೆಯಿಂದ ಈ ಪರೀಕ್ಷೆಗಳನ್ನು ನಡೆಸಿ ತರಬೇತಿಯನ್ನು ನೀಡಲು ಇಲಾಖೆ ಖರ್ಚು ಮಾಡಿರುವ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಇ) ಈ ತರಬೇತಿಯನ್ನು ಕೆಲವು ಅಭ್ಯರ್ಥಿಗಳು ದುರುಪಯೋಗ ಪಡಿಸಿಕೊಂಡು ಎರಡೆರಡು ಬಾರಿ ಅವಕಾಶ ಪಡೆಯುತ್ತಿರುವುದರಿಂದ ಉಳಿದ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ರೀತಿಯ ದುರುಪಯೋಗವನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಮೇಲಿನ ಪರೀಕ್ಷೆಗಳಿಗೆ ತರಬೇತಿ ನೀಡುವ ಪ್ರಕ್ರಿಯೆಯ ಕುರಿತು ಸಂಪೂರ್ಣ ವಿವರ ನೀಡುವುದು ?

## K.K.R.D.B., ಮಂಡಳಿಯಿಂದ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಹೆಚ್ಚು ಒತ್ತು ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೫೪೪ (೭೦೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) K.K.R.D.B., ಮಂಡಳಿಯಿಂದ ಕಳೆದ ಮೂರು ವರ್ಷಗಳಲ್ಲಿ ಆ ಭಾಗದ ಎಷ್ಟು ಜಿಲ್ಲೆಗಳಲ್ಲಿ ಎಷ್ಟು ಶಾಲಾ ಕಟ್ಟಡಗಳ ನಿರ್ಮಾಣ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಆ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಶಾಲಾ ಕಟ್ಟಡಗಳ ನಿರ್ಮಾಣ ಅಭಿವೃದ್ಧಿ ನೀಡಲಾದ ಅನುದಾನ ಎಷ್ಟು ; ಇವುಗಳಲ್ಲಿ ಎಷ್ಟು ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ ; ಅವುಗಳ ಹೆಸರು ಕೈಗೊಂಡ ಕಾಮಗಾರಿಗಳ ಖರ್ಚು ಮಾಡಲಾದ ವೆಚ್ಚ ವಿವರಗಳನ್ನು ತಾಲ್ಲೂಕುವಾರು ಮಾಹಿತಿಯೊಂದಿಗೆ ಒದಗಿಸುವುದು ;

(ಇ) K.K.R.D.B., ಅನುದಾನವನ್ನು ಹೆಚ್ಚಿನ ಭಾಗ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಲು ಮತ್ತು ಶಾಲೆಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯಲ್ಲಿ ನಿರಂತರವಾಗಿ ಹೆಚ್ಚುತ್ತಿರುವ ಪೋಕ್ಸೋ ಕೇಸ್‌ಗಳ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೫೯೫ (೬೬೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ನಿರಂತರವಾಗಿ ಹೆಚ್ಚುತ್ತಿರುವ ಪೋಕ್ಸೋ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೦೨ ವರ್ಷಗಳಲ್ಲಿ ಜಿಲ್ಲೆಯಲ್ಲಿ ದಾಖಲಾಗಿರುವ ಪೋಕ್ಸೋ ಪ್ರಕರಣಗಳು ಎಷ್ಟು ; ಅದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಮತ್ತು ಅಪರಾಧಿಗಳಿಗೆ ವಿಧಿಸುವ ಶಿಕ್ಷೆಗಳಾವುವು ;

(ಆ) ಶಾಲಾ ಮಟ್ಟದಲ್ಲಿ ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಪಾಲಕರ ಜೊತೆ ಜಾಗೃತಿ ಕಾರ್ಯಾಗಾರಗಳು ಮುಂತಾದ ಕಾರ್ಯಕ್ರಮಗಳ ಯೋಜನೆಗಳನ್ನು ರೂಪಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುವುದೇ ? (ವಿವರಿಸುವುದು)

## ಉತ್ತರ ಕನ್ನಡ ಜಿಲ್ಲೆಯಲ್ಲಿ ಬುಡಕಟ್ಟು ಜನರಿಗಾಗಿ ಕಲಾ ತರಬೇತಿ ಕೇಂದ್ರ ಸ್ಥಾಪಿಸುವ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೫೯೬ (೬೬೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಕಳೆದ ೦೨ ವರ್ಷದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಿಲ್ಲೆಯ ಬುಡಕಟ್ಟು ಜನಾಂಗದವರಿಗಾಗಿ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು ; (ವಿವರ ನೀಡುವುದು)

(ಆ) ಈ ಜಿಲ್ಲೆಯ ಬುಡಕಟ್ಟು ಜನರು ವಿಶೇಷ ಕಲೆಯನ್ನು ಹೊಂದಿದ್ದು, ಇವರ ಕಲೆ ಮತ್ತು ಸಂಸ್ಕೃತಿಗಳನ್ನು ಉಳಿಸಲು ಸದರಿ ಜನಾಂಗದವರಿಗೆ ಅನುಕೂಲವಾಗುವಂತೆ ಜಿಲ್ಲೆಯ ಮಧ್ಯದಲ್ಲಿ ಒಂದು ಕಲಾ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಉತ್ತರ ಕನ್ನಡ ಜಿಲ್ಲೆ ಅಂಕೋಲಾ ತಾಲ್ಲೂಕಿನ ಮೊಗಟಾ ಪಂಚಾಯಿತಿಯಲ್ಲಿ ರಸ್ತೆ ಕಾಮಗಾರಿ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :–**

೫೯೭ (೬೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಮೊಗಟಾ ಗ್ರಾಮ ಪಂಚಾಯತಿ ವ್ಯಾಪ್ತಿಯ ಬ್ರಹ್ಮೂರು ಗ್ರಾಮದ ಬೆಣದಳ್ಳಿಯ ೪೦ ಕುಟುಂಬಗಳು ವಾಸಿಸುವ ಗ್ರಾಮಕ್ಕೆ ೦೪ ಕಿ.ಮೀ. ರಸ್ತೆ ಅಭಿವೃದ್ಧಿಗೆ ಕಳೆದ ಅನೇಕ ವರ್ಷಗಳಿಂದ ಬೇಡಿಕೆ ಇಟ್ಟರೂ ಸರ್ವಋತು ರಸ್ತೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿ ವಾಸಿಸುವ ಜನರಿಗೆ ಆಸ್ಪತ್ರೆ, ಶಾಲೆ ಹಾಗೂ ಅತಿ ಮುಖ್ಯ ರೇಷನ್ ಅಂಗಡಿಗೆ ಹೋಗಿ ಬರಲು ಕಾಲ್ನಡಿಗೆಯಲ್ಲಿಯೇ ಹೋಗಬೇಕಾಗಿದ್ದು, ಹಾಗೂ ಈ ಸಂದರ್ಭದಲ್ಲಿ ಅನಾರೋಗ್ಯದ ಮಕ್ಕಳನ್ನು ಕಂಬಳಿಯಲ್ಲಿ ಹೊತ್ತುಹೋಗುವ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಇದೆಯೇ ;

(ಇ) ಅಂಕೋಲಾ ತಾಲ್ಲೂಕಿನ ಮೊಗಟಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಸದರಿ ಬ್ರಹ್ಮೂರು ಗ್ರಾಮದ ಮಾಸ್ತಿಬೇಣ, ಸೊಪ್ಪರತಿ, ದೊಡ್ಡಬೇಣ ಮೂಲಕ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಬೆಣದಳ್ಳಿವರೆಗಿನ ೦೪ ಕಿ.ಮೀ. ರಸ್ತೆಯನ್ನು ಆದಷ್ಟು ಶೀಘ್ರವಾಗಿ ನಿರ್ಮಾಣ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ? (ಸರ್ಕಾರದ ಮುಂದಿನ ಕ್ರಮಗಳ ಕುರಿತು ತಿಳಿಸಿ)

## ಬೆಳಗಾವಿ ಜಿಲ್ಲೆ ಖಾನಾಪೂರ ತಾಲ್ಲೂಕಿನ ಅಂಗನವಾಡಿಗಳ ಕುರಿತು

**ಶ್ರೀ ಶಾಂತರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೫೯೮ (೬೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನಲ್ಲಿ ಕಳೆದ ೦೨ ವರ್ಷದಲ್ಲಿ ಎಷ್ಟು ಹೊಸ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; ಇದರಲ್ಲಿ ಸ್ವಂತ ಕಟ್ಟಡ ವಿರುವ ಅಂಗನವಾಡಿ ಕೇಂದ್ರಗಳು ಎಷ್ಟು ಹಾಗೂ ಯಾವುವು ಮತ್ತು ಬಾಡಿಗೆ ಕಟ್ಟಡದಲ್ಲಿ ನಡೆಯುವ ಅಂಗನವಾಡಿ ಕೇಂದ್ರಗಳು ಯಾವುವು ; ಬಾಡಿಗೆ ಕಟ್ಟಡಕ್ಕೆ ಎಷ್ಟು ಬಾಡಿಗೆಯನ್ನು ನೀಡಲಾಗುತ್ತದೆ ;

(ಆ) ಖಾನಾಪುರ ತಾಲ್ಲೂಕಿನ ಗೊಧೋಳಿ ಪಂಚಾಯತಿ ವ್ಯಾಪ್ತಿಯ ಔರತಬೈಲ್ ಗ್ರಾಮದಲ್ಲಿ ಸುಮಾರು ೩೫ಕ್ಕೂ ಹೆಚ್ಚು ಹಿಂದುಳಿದ ವರ್ಗದ ಕುಟುಂಬಗಳು ಮತ್ತು ೨೫ಕ್ಕೂ ಹೆಚ್ಚು ಅಂಗನವಾಡಿ ವಯಸ್ಸಿನ ಮಕ್ಕಳಿದ್ದು ಆ ಗ್ರಾಮಕ್ಕೆ ಅಂಗನವಾಡಿ ಕೇಂದ್ರದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಆದ್ಯತೆಯ ಮೇರೆಗೆ ಕಾಡಿನಲ್ಲಿ ಇರುವ ಈ ಗ್ರಾಮಕ್ಕೆ ಹೊಸ ಅಂಗನವಾಡಿ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳು ಯಾವುವು ?

## ಗ್ರಾಮ ಪಂಚಾಯತ್ ಕಛೇರಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ ಸಮಸ್ಯೆಗಳ ಕುರಿತು

**ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೫೯೯ (೫೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ/ಖಾಯಂ ಸಿಬ್ಬಂದಿಗೆ ಒದಗಿಸಿರುವ ಸೇವಾ ಸೌಲಭ್ಯಗಳು ಯಾವುವು ;

(ಆ) ಪಂಚಾಯತ್ ರಾಜ್ ಇಲಾಖೆಯಲ್ಲಿ ಹಗಲು-ರಾತ್ರಿ ಗ್ರಾಮಗಳಿಗೆ/ ಗ್ರಾಮದ ನಿವಾಸಿಗಳಿಗೆ ಹಲವಾರು ಸೇವೆಗಳನ್ನು ಒದಗಿಸುತ್ತಿರುವ ಬಿಲ್ ಕಲೆಕ್ಟರ್/ಕ್ಲರ್ಕ್/ಡಾಟಾ ಎಂಟ್ರಿ ಆಪರೇಟರ್/ವಾಟರ್ ಆಪರೇಟರ್ ಮುಂತಾದ ಸಿಬ್ಬಂದಿಗಳು ಕನಿಷ್ಠ ವೇತನ ಮತ್ತು ವೈದ್ಯಕೀಯ ಸೌಲಭ್ಯಗಳಿಂದ ವಂಚಿತರಾಗಿರುವುದಕ್ಕೆ ಕೈಗೊಂಡ ಕ್ರಮಗಳೇನು ;

(ಇ) ಗ್ರಾಮ ಪಂಚಾಯಿತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ಸೇವಾ ಭದ್ರತೆ, ಸಿ ಮತ್ತು ಡಿ ದರ್ಜೆ ನೌಕರರನ್ನಾಗಿ ಮೇಲ್ದರ್ಜೇಗೇರಿಸಲು

ನೇಮಕಾತಿ ನಿಯಮಗಳಿಗೆ (ಸಿ ಅಂಡ್ ಆರ್) ಮತ್ತು ಕೈಗೊಂಡ ಕ್ರಮಗಳು ಯಾವುವು ;

(ಈ) ಈ ಸಿಬ್ಬಂದಿಗಳಿಗೆ ಸರ್ಕಾರದ ನಿಯಮಗಳಂತೆ ನೀಡಬೇಕಾದ ವೇತನ ಶ್ರೇಣಿ, ವೈದ್ಯಕೀಯ ಸೌಲಭ್ಯಗಳು ಮತ್ತು ಇನ್ನಿತರ ಸೌಲಭ್ಯಗಳನ್ನು ಜಾರಿಗೊಳಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಜಲಜೀವನ್ ಮಿಷನ್‌ನ ಕಳಪೆ ಕಾಮಗಾರಿಗಳ ಕುರಿತು

**ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೦೦ (೫೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಲಜೀವನ್ ಮಿಷನ್ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು ಮತ್ತು ವೆಚ್ಚಮಾಡಿದ ಹಣವೆಷ್ಟು ; (ವಿವರ ನೀಡುವುದು)

(ಆ) ಬಾಕಿ ಇರುವ, ಪ್ರಗತಿಯಲ್ಲಿರುವ ಮತ್ತು ಪೂರ್ಣಗೊಂಡು ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಿದ ಕಾಮಗಾರಿಗಳು ಎಷ್ಟು ಮತ್ತು ಯಾವುವು ; (ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಎಷ್ಟು ಮನೆಗಳಿಗೆ ಕಾರ್ಯಾತ್ಮಕ ನಲ್ಲಿ ಸಂಪರ್ಕ ಕಲ್ಪಿಸಲಾಗಿದೆ ;

(ಈ) ಜಲಜೀವನ್ ಮಿಷನ್ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳು ಕಳಪೆ ಮಟ್ಟದಾಗಿವೆ ಎಂದು ಜನರ ಆರೋಪವಾಗಿದ್ದು, ಅದಕ್ಕೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಲಾಗಿದೆಯೇ ; ಗುಣಮಟ್ಟ ಕಾಪಾಡಲು ಕೈಗೊಂಡ ಕ್ರಮಗಳೇನು ?

# ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆಗಳನ್ನು ನಡೆಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೦೧ (೬೨೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳಿಗೆ ರಾಜ್ಯ ಸರ್ಕಾರ ಕಳೆದ ೫ ವರ್ಷಗಳಿಂದ ಚುನಾವಣೆಯನ್ನು ನಡೆಸದೆ ಇರುವುದು ನಿಜವೇ ; ಹಾಗಿದ್ದಲ್ಲಿ, ಈ ಚುನಾವಣೆಗಳನ್ನು ನಡೆಸದೆ ಇರಲು ಸರ್ಕಾರಕ್ಕೆ ಇರುವ ಕಾರಣಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಜಿಲ್ಲಾ ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗೆ ಪೂರ್ವಭಾವಿ ಸಿದ್ಧತೆಗೆ ಅಗತ್ಯವಿರುವ ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ನಿಗಧಿ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಈ ಸಮಸ್ಯೆಗೆ ಕಾರಣಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಭಾರತದ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಹಿಂದುಳಿದ ವರ್ಗಗಳಿಗೆ ಶೇಕಡ ೨೭ ರಷ್ಟು ಮೀಸಲಾತಿ ನೀಡಬೇಕೆಂದು ಆದೇಶದ ಪಾಲನೆ ಮಾಡಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯ ಸರ್ಕಾರ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳ ಚುನಾವಣೆ ನಡೆಸಲು ವಿಳಂಬ ಮಾಡಿದ ಕಾರಣ ರಾಜ್ಯ ಉಚ್ಚನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ರೂ ೫ ಲಕ್ಷ ದಂಡ ವಿಧಿಸಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ಈ ದಂಡವನ್ನು ಪಾವತಿ ಮಾಡಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗಳನ್ನು ಯಾವ ದಿನಾಂಕದಲ್ಲಿ ನಡೆಸುವುದಾಗಿ ಹೈಕೋರ್ಟ್‌ನಲ್ಲಿ ಮುಚ್ಚಳಿಕೆ ಬರೆದು ಕೊಟ್ಟಿದೆ ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಾಣಿಜ್ಯ ಕೇಂದ್ರ ಜಿಲ್ಲೆ ಸ್ಥಾಪಿಸುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೦೨ (೬೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ವಾಣಿಜ್ಯ ಕೇಂದ್ರ ಜಿಲ್ಲೆ (Central Business District-CBD) ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಈ ಯೋಜನೆಯ ರೂಪ-ರೇಶೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಆರ್ಥಿಕ ಮತ್ತು ಇತರೆ ನೆರವುಗಳು ಒಳಗೊಂಡಂತೆ ಕೋರಿರುವ ಸಹಾಯಗಳು ಯಾವುವು ; ಕೇಂದ್ರ ಸರ್ಕಾರದ ಪ್ರತಿಕ್ರಿಯೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಇಂತಹ ವಾಣಿಜ್ಯ ಕೇಂದ್ರ ಜಿಲ್ಲೆಗಳ ಸ್ಥಾಪನೆಯಿಂದ ರಾಜ್ಯದಲ್ಲಿರುವ ವಿದ್ಯಾವಂತ ಯುವಕರು Animation, Visual Effects, Gaming ಮತ್ತು Comics (AVGC) ವಲಯಗಳಲ್ಲಿ ಪರಿಣಿತಿ ಹೊಂದಲಿರುವ ಅವಕಾಶಗಳು ಇದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಆದಿಜಾಂಭವ ಅಭಿವೃದ್ಧಿ ನಿಗಮದ ಯೋಜನೆಗಳ ಅನುದಾನದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೦೩ (೬೨೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅದಿಜಾಂಭವ ಅಭಿವೃದ್ಧಿ ನಿಗಮ ಪ್ರಾರಂಭ ಮಾಡಿದ್ದು ಯಾವಾಗ ; ಈ ನಿಗಮವು ಪ್ರಾರಂಭದಿಂದ ಇಲ್ಲಿಯತನಕ ಆಯಾ ವರ್ಷಗಳಲ್ಲಿ ನೀಡಿರುವ ಅನುದಾನವೆಷ್ಟು ಮತ್ತು ಈ ಅನುದಾನಗಳನ್ನು ಯಾವ ರೀತಿ ಬಳಸಿಕೊಳ್ಳಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕಿಗೆ ಅದಿಜಾಂಭವ ಅಭಿವೃದ್ಧಿ ನಿಗಮ ಪ್ರಾರಂಭಗೊಂಡಾಗಿನಿಂದ ಆಯಾಯ ಆರ್ಥಿಕ ವರ್ಷಗಳಲ್ಲಿ ಯೋಜನೆವಾರು ಇದುವರೆಗೂ ನಿಗಧಿ ಮಾಡಿರುವ ಅನುದಾನವೆಷ್ಟು ಮತ್ತು ಎಷ್ಟು ಫಲಾನುಭವಿಗಳಿಗೆ ಅನುದಾನ ನೀಡಲಾಗಿದೆ ? (ಪೂರ್ಣ ವಿವರ ನೀಡುವುದು)

## ಹೊರಗುತ್ತಿಗೆ ನೌಕರರ ನೇಮಕ ಏಜೆನ್ಸಿಗಳ ಶೋಷಣೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೦೪ (೬೨೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದಲ್ಲಿ ಖಾಲಿಯಿರುವ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಹೊರಡಿಸಿರುವ ಮಾರ್ಗಸೂಚಿಗಳು ಯಾವುವು ಮತ್ತು ಈ ಮಾರ್ಗಸೂಚಿಯಂತೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ನಿಗಮ ಮತ್ತು ಮಂಡಳಿಗಳಲ್ಲಿ ಯಾವ ಸರ್ಕಾರಿ ಏಜನ್ಸಿ ಮುಖೇನ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿಯಲ್ಲಿ ಮೀಸಲಾತಿಯನ್ನು ಕಡ್ಡಾಯ ಮಾಡಲಾಗಿದೆಯೇ ಮತ್ತು ಮೀಸಲಾತಿಯನ್ನು ಪರಿಶೀಲಿಸಲು ನೇಮಕ ಮಾಡಿರುವ ವ್ಯವಸ್ಥೆ ಯಾವುದು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಹೊರಗುತ್ತಿಗೆ ನೌಕರರನ್ನು ಮಧ್ಯವರ್ತಿಗಳ ಹಾವಳಿ ಮತ್ತು ಏಜೆನ್ಸಿಗಳ ಶೋಷಣೆಯಿಂದ ರಕ್ಷಿಸಲು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಯೋಜನೆ ಕಾರ್ಯಕ್ರಮ ಮತ್ತು ಸಾಂಖ್ಯಿಕ ಇಲಾಖೆಯಿಂದ ಕೈಗೊಳ್ಳಲಾಗುವ ಸರ್ವೆ ಕಾರ್ಯಗಳ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೦೫ (೬೩೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಅಡಿಯಲ್ಲಿ ಬರುವ ವಿವಿಧ ವಿಭಾಗಗಳು ಯಾವುವು ; ಮತ್ತು ಈ ವಿಭಾಗಗಳ ಅಡಿಯಲ್ಲಿ ಕೈಗೊಂಡಿರುವ ಯೋಜನೆಗಳು ಯಾವುವು ; (ವಿಭಾಗವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಸಂಯೋಜನೆ ಮಂತ್ರಾಲಯದ ಅಡಿಯಲ್ಲಿ ಪ್ರತಿ ವರ್ಷ ಯಾವ-ಯಾವ ಸರ್ವೆಗಳನ್ನು ನಿಯತಕಾಲಿಕವಾಗಿ ಕೈಗೊಳ್ಳುತ್ತಿದೆ ಮತ್ತು ಈ ಸರ್ವೆ ವರದಿಗಳನ್ನು ರಾಜ್ಯ ಅಥವಾ ಕೇಂದ್ರ ಮಟ್ಟದಲ್ಲಿ ಪ್ರಕಟಿಸಲಾಗುತ್ತಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಕೈಗೊಳ್ಳುವ ಈ ಸರ್ವೆಗಳಿಗೆ ಕೇಂದ್ರ ಸರ್ಕಾರದಿಂದ ದೊರೆಯುವ ಆರ್ಥಿಕ ಸವಲತ್ತು ಮತ್ತು ಇತರೆ ನೆರವುಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ವಿವಿಧ ಯೋಜನೆಯಡಿ ಕಾರ್ಮಿಕ ಇಲಾಖೆಯಿಂದ ಆಯ್ಕೆ ಮಾಡಲಾದ ಫಲಾನುಭವಿಗಳ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೬ (೯೨೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ವಿವಿಧ ಯೋಜನೆಯಡಿಯಲ್ಲಿ ಕಾರ್ಮಿಕ ಇಲಾಖೆಯಿಂದ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ಅಂಕಿ ಅಂಶಗಳ ಸಹಿತ ತಾಲ್ಲೂಕುವಾರು ಕಳೆದ ೦೩ ವರ್ಷಗಳ ಸಂಪೂರ್ಣ ವಿವರ ನೀಡುವುದು)

(ಆ) ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಮಿಕ ಇಲಾಖೆಯ ಯಾವ ಯಾವ ಯೋಜನೆಯಡಿ ಬಿಡುಗಡೆ ಮಾಡಿದ ಅನುದಾನದ ಮೊತ್ತ ಎಷ್ಟು? (ಅಂಕಿ ಅಂಶಗಳ ಸಹಿತ ತಾಲ್ಲೂಕುವಾರು ಕಳೆದ ೦೩ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

## ತುಮಕೂರು ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ ೨೦೨೪-೨೫ನೇ ಸಾಲಿನಲ್ಲಿ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೭ (೬೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ ೨೦೨೪-೨೫ನೇ ಸಾಲಿನಲ್ಲಿ ವೈಯಕ್ತಿಕ ಮತ್ತು ಸಮುದಾಯ

ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಮೊತ್ತ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ನರೇಗಾ ಯೋಜನೆಯಡಿ ೨೦೨೪-೨೫ನೇ ಸಾಲಿನಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿದೆ; ಒಟ್ಟು ಬಿಡುಗಡೆಯಾಗಿರುವ ಮೊತ್ತ ಎಷ್ಟು;

(ಇ) ನರೇಗಾ ಯೋಜನೆಯಡಿ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳಲ್ಲಿ ಕೆಲಸ ಮಾಡಿದ ಕೂಲಿ ಕಾರ್ಮಿಕರಿಗೆ ಪಾವತಿ ಮಾಡಿರುವ ಮೊತ್ತ ಎಷ್ಟು; ಬಾಕಿ ಇರುವ ಮೊತ್ತ ಎಷ್ಟು?

## ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆ ಹಾಗೂ ವಸತಿ ನಿಲಯ, ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೮ (೬೨೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಇರುವ ವಸತಿ ನಿಲಯ ಹಾಗೂ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ಹಾಗೂ ಪ್ರವೇಶಾವಕಾಶ ಪಡೆದಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಮಂಜೂರು ಮಾಡಿರುವ ವಾರ್ಡನ್ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ವಾರ್ಡನ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದ ಗ್ರಾಮ ಪಂಚಾಯಿತಿಗಳ ಹಾಗೂ ಹೊಸ ಸ್ವಂತ ಕಟ್ಟಡಗಳಿಗೆ ಸಂಬಂಧಿಸಿದ ಕುರಿತು

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೯ (೬೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಹೊಸ/ಸ್ವಂತ ಕಟ್ಟಡಗಳಿವೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸ್ವಂತ ಕಟ್ಟಡವಿಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯಿತಿಗಳಿಗೆ ಹಾಗೂ ಸ್ವಂತ ಕಟ್ಟಡವಿಲ್ಲದ ಗ್ರಾಮ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೦ (೬೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಮಂಜೂರಾಗಿರುವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ

ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಲ್ಲಿ ಅನೇಕ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಬಹಳ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು ?

## ನಿಜ ಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೧೧ (೭೧೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಿಜ ಶರಣ ಅಂಬಿಗರ ಚೌಡಯ್ಯನವರ ಅಧ್ಯಯನ ಪೀಠಕ್ಕೆ ಕಟ್ಟಡ ನಿರ್ಮಾಣಕ್ಕಾಗಿ ಯಾವ ದಿನಾಂಕದಂದು ಎಷ್ಟು ಮೊತ್ತವನ್ನು ಮೀಸಲಿಡಲಾಗಿದೆ ; ಕಟ್ಟಡವನ್ನು ಯಾವ ಸ್ಥಳದಲ್ಲಿ ನಿರ್ಮಿಸಲು ಯೋಚಿಸಲಾಗಿದೆ ; ಪ್ರತಿವರ್ಷ ಈ ಕಟ್ಟಡದ ನಿಧಿಗಾಗಿ ಸರ್ಕಾರ ಹಣ ಒದಗಿಸುತ್ತ ಬಂದಿದೆಯೇ ; ಇಲ್ಲವಾದಲ್ಲಿ, ಮುಂದೆ ಪ್ರತಿ ವರ್ಷ ಹಣ ಕಾಯ್ದಿರಿಸಲಾಗುವುದೇ ;

(ಆ) ಈ ಪೀಠದಿಂದ ಅನುಷ್ಠಾನಗೊಂಡಿರುವ ಕಾರ್ಯಕ್ರಮಗಳಿಗೆ ಎಷ್ಟು ಹಣ ವೆಚ್ಚ ಮಾಡಲಾಗಿದೆ ; (ವಿವರ ಒದಗಿಸುವುದು)

(ಇ) ೨೦೧೩ರ ನಂತರ ಸಂತರ, ಶರಣರ, ಜನನಾಯಕರ, ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಸ್ಥಾಪಿಸಲಾಗಿದೆಯೇ ; ವಿಧಾನಸೌಧ, ಶಾಸಕರ ಭವನ ಆದಿಯಾಗಿ ಜಿಲ್ಲಾ ಕೇಂದ್ರದಲ್ಲಿ ಈ ಅವಧಿಯಲ್ಲಿ ಸ್ಥಾಪನೆಯಾದ ಪ್ರತಿಮೆಗಳ ವಿವರ ಒದಗಿಸುವುದು ;

(ಈ) ನಿಜ ಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪಿಸುವ ಬಗ್ಗೆ ಅಧಿವೇಶನದಲ್ಲಿ ಭರವಸೆ ನೀಡಿದ್ದರೂ ಇನ್ನೂ ಪ್ರತಿಮೆ ಸ್ಥಾಪಿಸದೆ ಈ ಸಮಾಜವನ್ನು ಕಡೆಗಣಿಸುತ್ತಿರುವುದಕ್ಕೆ ಸಾಕ್ಷಿಯಾಗುವುದಿಲ್ಲವೆ ; ಸರ್ಕಾರವು ಭರವಸೆ ನೀಡಿರುವಂತೆ ಯಾವ ಕಾಲಮಿತಿಯಲ್ಲಿ ಪ್ರತಿಮೆ ಸ್ಥಾಪಿಸಲು ಮುಂದಾಗುವುದು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ "ಗೃಹಲಕ್ಷ್ಮೀ" ಫಲಾನುಭವಿಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೨ (೬೦೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ "ಗೃಹಲಕ್ಷ್ಮೀ" ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಈ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ಸಕಾಲಕ್ಕೆ ಎರಡು ಸಾವಿರ ರೂ.ಗಳನ್ನು ಜಮೆ ಮಾಡಲಾಗುತ್ತಿದೆಯೇ ;

(ಇ) ಸದರಿ ಜಿಲ್ಲೆಗಳಲ್ಲಿರುವ "ಗೃಹಲಕ್ಷ್ಮೀ" ಯೋಜನೆಯ ಫಲಾನುಭವಿಗಳಿಗೆ ಒಂದು ತಿಂಗಳಿಗೆ ಎಷ್ಟು ಅನುದಾನ ನೀಡಲಾಗುತ್ತದೆ; ಈ ಅನುದಾನವನ್ನು ಯಾವ ಮೂಲದಿಂದ ಭರಿಸಲಾಗುತ್ತಿದೆ ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ತೊಗರಿಗೆ ಬೆಂಬಲ ಬೆಲೆ ನಿಗಧಿಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೩ (೬೦೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ತೊಗರಿಗೆ ಕೇಂದ್ರ ಸರ್ಕಾರ ಕೊಡಮಾಡಿದ ಜಿ.೧–ಟ್ಯಾಗ್ ಕ್ಲಾಸ್–೩೧, ೨೦೧೭ನೇ ಸಾಲಿನಲ್ಲಿ ದೊರೆತ್ತಿದ್ದು, ಇಲ್ಲಿಯವರೆಗೂ ಅದರ ಗುಣಧರ್ಮಕ್ಕನುಗುಣವಾಗಿ ವೈಜ್ಞಾನಿಕ ಬೆಂಬಲ ಬೆಲೆ ನಿರ್ಧರಿಸಲು ಕೇಂದ್ರಿಯ ಕೃಷಿ ಉತ್ಪನ್ನ ಬೆಲೆ ನಿಗಧಿ ಆಯೋಗಕ್ಕೆ ಶಿಫಾರಸ್ಸು ಮಾಡಲು ರಾಜ್ಯ ಸರ್ಕಾರಕ್ಕೆ ಇರುವ ಅಡೆತಡೆಗಳೇನು ;

(ಆ) ರಾಜ್ಯ ಬೆಲೆ ನಿಗಧಿ ಆಯೋಗದಿಂದ ಕೇಂದ್ರ ಬೆಲೆ ನಿಗಧಿ ಆಯೋಗಕ್ಕೆ ಬೆಂಬಲ ಬೆಲೆ ನಿರ್ಧರಿಸಲು ವರದಿಯನ್ನು ಸಲ್ಲಿಸಲು ಹಾಗೂ ತೊಗರಿಗೆ ಗುಣಧರ್ಮಕ್ಕನುಗುಣವಾಗಿ ಬೆಂಬಲ ಬೆಲೆ ಹೆಚ್ಚಿಸುವಂತೆ ಕೂಡಲೇ ಶಿಫಾರಸ್ಸು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಂಗನವಾಡಿಗಳ ಸ್ಥಿತಿಗತಿಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೪ (೬೦೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ; ಇವುಗಳಲ್ಲಿ ಎಷ್ಟು ಮಕ್ಕಳು ಕಲಿಯುತ್ತಿದ್ದಾರೆ; ಈ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್, ಫ್ಯಾನ್, ಶೌಚಾಲಯ ಹಾಗೂ ಇನ್ನಿತರೆ ಮೂಲಸೌಕರ್ಯಗಳಿಲ್ಲದೇ ಇರುವ ಅಂಗನವಾಡಿ ಕೇಂದ್ರಗಳೆಷ್ಟು ; ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಸದರಿ ಜಿಲ್ಲೆಗಳಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಪ್ರತ್ಯೇಕ ಅಡುಗೆ ಕೋಣೆಗಳಿಲ್ಲದೆ ಒಂದೇ ಕೋಣೆಯ ಒಂದು ಮೂಲೆಯಲ್ಲಿ

ಮಕ್ಕಳನ್ನು ಕೂರಿಸಿ ಮತ್ತೊಂದು ಮೂಲೆಯಲ್ಲಿ ಸಿಲಿಂಡರ್ ಹಚ್ಚಿ ಅಡುಗೆ ತಯಾರಿಸುತ್ತಿದ್ದು, ಇದರಿಂದ ಅವಘಡ ಸಂಭವಿಸುವ ಸಾಧ್ಯತೆ ಇರುವುದರಿಂದ, ಇದಕ್ಕೆ ಸರ್ಕಾರವೇ ನೇರ ಹೊಣೆಯಾಗಲಿದ್ದು ; ಸರ್ಕಾರ ಇದರ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವುದೇ ?

## ಕೃಷಿ ಭಾಗ್ಯ ಯೋಜನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧೫ (೫೫೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೨ ವರ್ಷದಲ್ಲಿ ಕೃಷಿ ಭಾಗ್ಯ ಯೋಜನೆ ಅಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ಅಂಕಿ-ಸಂಖ್ಯೆ ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ೨ ವರ್ಷದಲ್ಲಿ ಈ ಯೋಜನೆ ಅಡಿಯಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## START-UP ಉದ್ಯಮಗಳಿಗೆ ಸಹಾಯಧನ ನೀಡಿರುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೧೬ (೬೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿದ್ಯುನ್ಮಾನ ಮಾಹಿತಿ, ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ವ್ಯಾಪ್ತಿಯ ಅಡಿಯಲ್ಲಿ ಬರುವ ನಿಗಮ, ಮಂಡಳಿ, ಸೊಸೈಟಿ ಮತ್ತು ಅಂಗಸಂಸ್ಥೆಗಳು ಯಾವುವು: ಇವುಗಳನ್ನು ಯಾವಾಗ ಸ್ಥಾಪಿಸಲಾಯಿತು ಮತ್ತು ಉದ್ದೇಶಗಳೇನು ; (ಕೇಂದ್ರ ಕಛೇರಿ ವಿಳಾಸ ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ (ಕಿಟ್ಸ್)ಯನ್ನು ಯಾವಾಗ ಸ್ಥಾಪನೆ ಮಾಡಲಾಯಿತು ; ಇದರ ಧ್ಯೇಯೋದ್ದೇಶಗಳು ಏನು ; ಹಾಗೂ ನೀತಿ ನಿಯಮಗಳೇನು ; (ವಿವರ ನೀಡುವುದು)

(ಇ) START-UP/ನಾವೀನ್ಯತೆ ಅಂದರೆ ಏನು ; ಸರ್ಕಾರದಿಂದ ಇಲ್ಲಿಯವರೆಗೂ ಎಷ್ಟು START-UPಗಳಿಗೆ ಸಹಾಯ ಧನ ನೀಡಲಾಗಿದೆ ; START-UP ಉದ್ಯಮದ ಹೆಸರು ವಿಳಾಸ, ಮಾಲೀಕರು, ನೀಡಿರುವ ಸಹಾಯ ಧನದ ವಿವರವಾದ ಮಾಹಿತಿ ನೀಡುವುದು ?

## ರಾಜ್ಯದ ಹಿಂದುಳಿದ ಜಾತಿಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೭ (೬೮೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಿಂದುಳಿದ ಜಾತಿಗಳು ಯಾವುವು ; ಅವುಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ ; ನ್ಯಾಯಮೂರ್ತಿ ಒ.ಚಿನ್ನಪ್ಪ ರೆಡ್ಡಿ ಆಯೋಗದ ಶಿಫಾರಸ್ಸುಗಳೇನು ; ಉನ್ನತ ಶಿಕ್ಷಣ ಮತ್ತು ಸಿಬ್ಬಂದಿ ನೇಮಕಾತಿ ವಿಷಯದಲ್ಲಿ ಇದನ್ನು ಸರ್ಕಾರ ಯಾವ ದಿನಾಂಕದಿಂದ ಜಾರಿಗೆ ತಂದಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಕುಲಶಾಸ್ತ್ರ ಅಧ್ಯಯನ ಎಂದರೇನು ಒಕ್ಕಲಿಗ ಸಮುದಾಯದ ಎಷ್ಟು ಜಾತಿಗಳು ಕುಲಶಾಸ್ತ್ರ ಅಧ್ಯಯನ ವರದಿ ಆಧರಿಸಿ ಕೇಂದ್ರ ಸರ್ಕಾರಕ್ಕೆ ಓಬಿಸಿ ಮೀಲಿಸಲಾತಿಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಕುಂಚಿಟಿಗ ಸಮುದಾಯದವರು ಇಲ್ಲಿಯವರೆಗೂ ಓಬಿಸಿ ಪಟ್ಟಿಗೆ ಸೇರದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಸೇರಿಸಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಯ ಶಾಲಾ–ಕಾಲೇಜುಗಳ ಅಭಿವೃದ್ಧಿ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೧೮ (೫೮೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ–ಕಾಲೇಜು ಹಾಗೂ ವಿದ್ಯಾರ್ಥಿ ನಿಲಯಗಳೆಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಶಾಲಾ–ಕಾಲೇಜುಗಳ ಹಾಗೂ ವಿದ್ಯಾರ್ಥಿ ನಿಲಯಗಳ ಕಟ್ಟಡಗಳನ್ನು ದುರಸ್ತಿ ಮಾಡಲು ಮತ್ತು ಬೇಕಾಗಿರುವ ಸಾಮಾಗ್ರಿಗಳನ್ನು ನೀಡಲು ಸರ್ಕಾರ ಪ್ರಸ್ತುತ ಸಾಲಿನಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಶಾಲಾ–ಕಾಲೇಜು ಮತ್ತು ವಿದ್ಯಾರ್ಥಿ ನಿಲಯಗಳ ಮಕ್ಕಳಿಗೆ ಬೇಕಾಗುವ ಉತ್ತಮ ದರ್ಜೆಯ ಸೌಲಭ್ಯಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೧೯ (೫೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೦೨೪ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಹಾಗೂ ಚರಂಡಿಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ನೀಡಿರುವ ಅನುದಾನವೆಷ್ಟು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಮತ್ತು ಚರಂಡಿಗಳು ತುಂಬಾ ದುರಸ್ತಿ ಹೊಂದದೇ ಇರುವುದರಿಂದ, ಸರ್ಕಾರವು ಹೆಚ್ಚಿನ ಅನುದಾನವನ್ನು ನೀಡಲು ತೆಗೆದುಕೊಂಡಿರುವ ಕ್ರಮಗಳೇನು ?

## ಎ.ಪಿ.ಎಂ.ಸಿ. ಪ್ರಾಂಗಣ ಕಟ್ಟಡ ಮಂಜೂರು ಮಾಡುವ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೬೨೦ (೫೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಟ್ಟಿ ಪಟ್ಟಣದ ರೈತರು ಹಾಗೂ ಸುತ್ತಮುತ್ತಲಿನ ಹತ್ತಾರು ಹಳ್ಳಿಯ ರೈತರು ಬೆಳೆದ ಬೆಳೆಯನ್ನು ಮಾರಾಟ ಮಾಡಲು ಸರಿಯಾದ ರಸ್ತೆ ಸಂಪರ್ಕವಿಲ್ಲದೆ ಲಿಂಗಸುಗೂರು ಮತ್ತು ರಾಯಚೂರಿಗೆ ಹೋಗಿ ಮಾರಾಟ ಮಾಡಲು ರೈತರು ತುಂಬಾ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಟ್ಟಿ ಪಟ್ಟಣದಲ್ಲಿ ಎ.ಪಿ.ಎಂ.ಸಿ. ಪ್ರಾಂಗಣ ಕಟ್ಟಡ ಮಂಜೂರು ಮಾಡಿ ಕಾರ್ಯಾರಂಭ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಏಕ ನಿವೇಶನ ನಕ್ಷೆ ವಿನ್ಯಾಸ ಅನುಮೋದನೆ ಮತ್ತು ಕಟ್ಟಡ ನಿರ್ಮಾಣಕ್ಕೆ ಅನುಮತಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೧ (೫೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ ೧೯೬೧ರ ಪ್ರಕರಣಗಳು ಯೋಜನಾ ಪ್ರದೇಶದ ಹೊರ ಭಾಗದಲ್ಲಿರುವ ಗ್ರಾಮ ಪಂಚಾಯತಿಗಳಿಗೆ ಅನ್ವಯವಾಗುತ್ತದೆಯೇ, ಅನ್ವಯವಾಗುವುದಾದರೆ ಈ ಅಧಿನಿಯಮ ಜಾರಿಯಲ್ಲಿರುವಾಗಲೇ ಅಧಿನಿಯಮಕ್ಕೆ ಯಾವುದೇ ತಿದ್ದುಪಡಿ ತರದೆ, ಈ ಹಿಂದೆ ಗ್ರಾಮ ಪಂಚಾಯತ್‌ಗಳಿಗೆ ವಿನ್ಯಾಸ ನಕ್ಷೆ ಅನುಮೋದನೆ ನೀಡಲು ಮಾರ್ಗಸೂಚಿಯನ್ನು ಹೊರಡಿಸಿರುವುದರ ಔಚಿತ್ಯವೇನು ;

(ಆ) ಈ ಅಧಿನಿಯಮವು ಯೋಜನಾ ಪ್ರಾಧಿಕಾರದ ಹೊರ ಭಾಗದಲ್ಲಿರುವ ಗ್ರಾಮ ಪಂಚಾಯತಿಗೂ ಅನ್ವಯವಾಗಿದ್ದಲ್ಲಿ, ಕಟ್ಟಡ ನಿರ್ಮಾಣ ನಕ್ಷೆಯನ್ನು ಅನುಮೋದಿಸುವ ಅಧಿಕಾರವನ್ನು ಕಟ್ಟಡ ಬೈಲಾ ೨೦೧೫ರಂತೆ ಗ್ರಾಮ ಪಂಚಾಯತಿಗೆ ನೀಡಿರುವುದು ಕಾನೂನುಬಾಹಿರವಲ್ಲವೇ ;

(ಇ) ಎಲ್ಲಾ ಗೊಂದಲಗಳ ಪರಿಹಾರಕ್ಕಾಗಿ ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದ ಗ್ರಾಮ ಪಂಚಾಯತ್‌ಗಳಿಗೆ ಈ ಮೇಲಿನ ಅಧಿನಿಯಮ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ೧೯೯೩ಕ್ಕೆ ತಿದ್ದುಪಡಿ ತಂದು ಜಮೀನಿನ ಏಕವಿನ್ಯಾಸ ನಕ್ಷೆ ಮತ್ತು ಕಟ್ಟಡ ವಿನ್ಯಾಸ ನಕ್ಷೆಯನ್ನು ಅನುಮೋದಿಸುವ ಅಧಿಕಾರವನ್ನು ಈ ಮೊದಲಿನಂತೆ ನೀಡಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ? (ಮಾಹಿತಿ ನೀಡುವುದು)

# ಗ್ರಾಮ ಪಂಚಾಯತ್ ಸಿಬ್ಬಂದಿ ನೇಮಕಾತಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೨ (೫೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತ್ ಸಿಬ್ಬಂದಿ ನೇಮಕಾತಿಯ ಅಧಿಕಾರವನ್ನು ಗ್ರಾಮ ಪಂಚಾಯತಿಯಿಂದ ಜಿಲ್ಲಾ ಪಂಚಾಯತಿಯ CEO ನೇತೃತ್ವದ ಸಮಿತಿಗೆ ವರ್ಗಾಯಿಸಿದ ನಂತರ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನೇಮಕಾತಿ ಮಾಡಿಕೊಂಡ ಗ್ರಾಮ ಪಂಚಾಯತ್ ಸಿಬ್ಬಂದಿ ಮತ್ತು ಪ್ರಸ್ತುತ ಖಾಲಿಯಿರುವ ಗ್ರಾಮ ಪಂಚಾಯತ್ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ದಿನಾಂಕ: ೨೬-೦೬-೨೦೨೪ರ ಪತ್ರದಂತೆ ಗ್ರಾಮ ಪಂಚಾಯತ್‌ನಲ್ಲಿ ಖಾಲಿಯಿರುವ ಜವಾನ ಹುದ್ದೆಯನ್ನು ಕೈಬಿಟ್ಟು ಕೇವಲ ನಾಲ್ಕು ಹುದ್ದೆಗಳಿಗೆ (1. ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 2. ಬಿಲ್ ಕಲೆಕ್ಟರ್, 3. ಪಂಪು ಆಪರೇಟರ್. 4. ಸ್ವಚ್ಛತೆಗಾರ) ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಜವಾನ ಹುದ್ದೆಯನ್ನು ಕಡಿತ ಮಾಡಲು ಕಾರಣವೇನು: ಇನ್ನು ಮುಂದೆ ಜವಾನ ಹುದ್ದೆಯ ಜವಾಬ್ದಾರಿಗಳನ್ನು ಯಾರಿಗೆ ವಹಿಸಲಾಗುತ್ತದೆ: ಈಗಾಗಲೇ, ಸಿಬ್ಬಂದಿ ಕೊರತೆಯಿಂದಿರುವ ಗ್ರಾಮ ಪಂಚಾಯತಿಗಳಿಗೆ ಸರ್ಕಾರದ ಈ ಕ್ರಮದಿಂದ ಜವಾನ ಹುದ್ದೆ ಕಾರ್ಯನಿರ್ವಹಿಸಲು ಇಲ್ಲದೇ ಇರುವುದರಿಂದ ಜವಾನ ಹುದ್ದೆಯನ್ನು ಮುಂದುವರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಮತಗಟ್ಟೆಗಳಿಗೆ ಮೂಲಭೂತ ಸೌಲಭ್ಯ ಒದಗಿಸುವ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೩ (೫೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮತದಾನ ಕೇಂದ್ರಗಳಿಗೆ ಅಗತ್ಯ ಸೌಲಭ್ಯಗಳಾದ ವಿದ್ಯುತ್, ಕುಡಿಯುವ ನೀರು, ರ್‍ಯಾಂಪ್, ವೀಲ್ ಚೇರ್, ಶೌಚಾಲಯ ಇವುಗಳನ್ನು ಒದಗಿಸಬೇಕಾದ ಜವಾಬ್ದಾರಿ ಯಾರದ್ದು ;

(ಆ) ಮತಗಟ್ಟೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಹಿಂದಿನ ಮತ್ತು ಪ್ರಸ್ತುತ ಸಾಲಿನಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಸದರಿ ಅನುದಾನದಲ್ಲಿ ಚುನಾವಣಾ ವೆಚ್ಚಕ್ಕಾಗಿ ಗ್ರಾಮ ಪಂಚಾಯುತ್‌ಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಗ್ರಾಮ ಪಂಚಾಯತ್‌ಗಳು ತಮ್ಮ ಸ್ವಂತ ಅನುದಾನದಿಂದ ಮತಗಟ್ಟೆಯ ದುರಸ್ತಿ ಮತ್ತು ಇತರ ಮೂಲಭೂತ ಸೌಲಭ್ಯಗಳಿಗೆ ಹಣ ಖರ್ಚು ಮಾಡಲು ನಿಯಮದಲ್ಲಿ ಅವಕಾಶವಿದೆಯೇ ;

(ಈ) ಇಲ್ಲವಾದಲ್ಲಿ, ಸ್ಥಳೀಯ ಜಿಲ್ಲಾಧಿಕಾರಿಗಳು, ಗ್ರಾಮ ಪಂಚಾಯತ್‌ಗಳ ಸ್ವಂತ ಹಣದಿಂದ ಭರಿಸಿರುವ ಹಣವನ್ನು ವಾಪಸ್ಸು ಭರಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಅಂಗನವಾಡಿ ಮೂಲಸೌಲಭ್ಯಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨೪ (೫೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿಗಳೆಷ್ಟು ; ಒಟ್ಟು ಅಂಗನವಾಡಿಗಳ ಪೈಕಿ ಸ್ವಂತ ನಿವೇಶನಗಳಿಲ್ಲದ ಅಂಗನವಾಡಿ ಮತ್ತು ಬಾಡಿಗೆ ಕಟ್ಟಡದಲ್ಲಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಮಂಜೂರಾದ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳೆಷ್ಟು ; ಭರ್ತಿಯಾಗಿ ಪ್ರಸ್ತುತ ಖಾಲಿಯಿರುವ ಹುದ್ದೆಗಳೆಷ್ಟು ;

(ಇ) ಅಂಗನವಾಡಿಗಳಲ್ಲಿ ಪೋಷಣ್ ಮಾಸಾಚರಣೆಗೆ ಪ್ರಸ್ತುತ ವರ್ಷ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರೈತರಿಗೆ ನೀಡುತ್ತಿರುವ ಪರಿಹಾರಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೨೫ (೬೨೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಳೆ ಹಾನಿ, ಪ್ರಾಣಿಗಳ ಹಾವಳಿ ಮತ್ತು ಪ್ರಕೃತಿ ವಿಕೋಪದಿಂದ ರೈತರು ಬೆಳೆದ ಬೆಳೆಗಳು ಹಾಳಾದಲ್ಲಿ ಸರ್ಕಾರದಿಂದ ರೈತರಿಗೆ ದೊರೆಯುತ್ತಿರುವ ಪರಿಹಾರಗಳೇನು ; (ವಿವರ ನೀಡುವುದು)

(ಆ) ಈ ರೀತಿಯ ಬೆಳೆ ನಷ್ಟದಿಂದ ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ತೊಂದರೆಗೊಳಗಾಗಿರುವ ರೈತರ ಸಂಖ್ಯೆ ಎಷ್ಟು ಮತ್ತು ನಷ್ಟದ ಪ್ರಮಾಣ ವೆಷ್ಟು ; ಇವರಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಪರಿಹಾರವೆಷ್ಟು ; (ವರ್ಷವಾರು, ತಾಲ್ಲೂಕುವಾರು ಫಲಾನುಭವಿದಾರರ ಮಾಹಿತಿ ಒದಗಿಸುವುದು)

(ಇ) ಕೃಷಿ ಇಲಾಖೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಫಲಾನುಭವಿ ಕಾರ್ಯಕ್ರಮಗಳು ಯಾವುವು ; ಅದರ ಮಾನದಂಡನೆಗಳೇನು ? (ವಿವರ ಒದಗಿಸುವುದು)

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಫಲಾನುಭವಿಗಳ ಕಾಮಗಾರಿಗಳ ಅಭಿವೃದ್ಧಿಗೆ ಬಿಡುಗಡೆಯ ಅನುದಾನದ ವಿವರದ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೨೬ (೬೩೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿಗೆ ೨೦೨೪-೨೫ರ ಸಾಲಿನ ಆಯವ್ಯಯದಲ್ಲಿ ನಿಗಧಿ ಪಡಿಸಿರುವ ಅನುದಾನ ; ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು ;

(ಆ) ೨೦೨೩-೨೪ರ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಕಡಿಮೆ ಸೀಟುಗಳನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗಧಿಪಡಿಸಲು ಕಾರಣವೇನು ?

## ಅಂಗನವಾಡಿ ಶಿಕ್ಷಕರು ಮತ್ತು ಕಾರ್ಯಕರ್ತರಿಗೆ ವೇತನ ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೨೭ (೬೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಗನವಾಡಿ ಶಿಕ್ಷಕರು ಮತ್ತು ಕಾರ್ಯಕರ್ತರಿಗೆ ಮಾಹೆಯಾನ ವೇತನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ವೇತನ ಹೆಚ್ಚಿಸಲಾಗುವುದು ;

(ಆ) ಅಂಗನವಾಡಿ ಸಿಬ್ಬಂದಿಯನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಈ ಸಿಬ್ಬಂದಿಯನ್ನು ಸರ್ಕಾರಿ ನೌಕರರೆಂದು ಘೋಷಿಸಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ?

## ಪ್ರವರ್ಗ–೧ರ ಜಾತಿಗಳಿಗೆ ಸಮಾನಂತರ ಹಕ್ಕು ಒದಗಿಸುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೬೨೮ (೬೪೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವರ್ಗ–೧ರ ಹಿಂದುಳಿದ ಜಾತಿಗಳಿಗೆ ಪರಿಶಿಷ್ಟ ಜಾತಿ/ಪ್ರವರ್ಗ–೧ರ ಜನಾಂಗದವರಿಗೆ ನೀಡುವ ಸೌಲಭ್ಯಗಳನ್ನು ಸಮಾನಾಂತರವಾಗಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ೧೯೭೭ರಲ್ಲಿ ಜಾರಿಗೆ ಬಂದ ಹಾವನೂರು ಆಯೋಗದಲ್ಲಿ ಬಿ ಟಿ ಜನಾಂಗಕ್ಕೆ ನೀಡುತ್ತಿದ್ದ ಸೌಲಭ್ಯಗಳನ್ನು ತೆಗೆದು ಹಾಕಲು ಕಾರಣವೇನು ;

(ಇ) ಪ್ರಸ್ತುತ ಪ್ರವರ್ಗ–೧ರ ಜಾತಿಗಳಿಗೆ ಸೌಲಭ್ಯಗಳನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಪ್ರವರ್ಗ–೧ರ ಗುಂಪಿಗೆ ಇತರೆ ಜಾತಿಗಳನ್ನು ಸೇರಿಸುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೨೯ (೬೪೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವರ್ಗ–೧ ಗುಂಪಿಗೆ ಇತರೆ ಜಾತಿಗಳನ್ನು ಸೇರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಜಾತಿಗಳನ್ನು ಸೇರಿಸಲಾಗುವುದು ; ಸೇರಿಸಲು ಇರುವ ಮಾನದಂಡಗಳೇನು ;

(ಆ) ನ್ಯಾಯಮೂರ್ತಿ ಚಿನ್ನಪ್ಪ ರೆಡ್ಡಿ ಆಯೋಗದ ವರದಿ ಪ್ರಕಾರ ಬೇರೆ ಬೇರೆ ಗುಂಪಿನಲ್ಲಿದ್ದ ಜಾತಿಗಳನ್ನು ಪ್ರವರ್ಗ–೧ಕ್ಕೆ ಸೇರಿಸಿದ್ದು, ಅದೇ ಪ್ರಕಾರವಾಗಿ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಹಾಗೂ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O130/400 ಪ್ರತಿಗಳು/02-12-2024